24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 14 | ನವದೆಹಲಿ | ಬೆಲೆ ₹ 10 | ಜುಲೈ 10, 2026, ಶುಕ್ರವಾರ

## ಒಳಪುಟಗಳಲ್ಲಿ

ಬೆಳಗಾವಿಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಅದ್ಧೂರಿ ಸ್ವಾಗತ- ಪು.2

ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಗ್ಯಾರಂಟಿಗಾಗಿ 18,410 ಕೋಟಿ ವೆಚ್ಚ: ದಿನೇಶ್ ಗೂಳಿಗೌಡ-ಪು.3

ವ್ಯವಸ್ಥಿತ ನಿರ್ವಹಣೆಗಾಗಿ ಪ್ರತ್ಯೇಕ ಎನ್‌ಆರ್‌ಐ ಇಲಾಖೆ ಅಗತ್ಯ-ಪು.3

ಮತ್ತೆ ಮುಖಾಮುಖಿಯಾದ ಅಮೆರಿಕ-ಇರಾನ್: ಮಧ್ಯಪ್ರಾಚ್ಯದಲ್ಲಿ ಸಂಘರ್ಷ, ಇರಾನ್‌ನ 90 ಸ್ಥಳಗಳಲ್ಲಿ ದಾಳಿ- ಪು.8

# ನೀರಿನ ಬಿಕ್ಕಟ್ಟು ಎದುರಿಸಲು ಹಣದ ಕೊರತೆ ಇಲ್ಲ

### ಸಮಸ್ಯೆ ಎದುರಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 1 ಕೋಟಿ ಬಿಡುಗಡೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆದೇಶ

**ಬೆಳಗಾವಿ, ಜು.9: ನೀರಿನ ಬಿಕ್ಕಟ್ಟನ್ನು ಎದುರಿಸಲು ಸರ್ಕಾರದ ಬಳಿ ಹಣದ ಕೊರತೆ ಇಲ್ಲ. ಅಗತ್ಯವಿದ್ದರೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲಾಗುವುದು. ಜನರಿಗೆ ನೀರು ಒದಗಿಸುವುದು ಸರ್ಕಾರದ ಮೊದಲ ಆದ್ಯತೆಯಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ತುರ್ತು ಸಮಸ್ಯೆ ಪರಿಹರಿಸಲು ತಲಾ 1 ಕೋಟಿ ಬಿಡುಗಡೆ ಮಾಡಲು ಆದೇಶಿಸಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಎದುರಿಸುವ ಯಾವುದೇ ಗ್ರಾಮ ನಿರ್ಲಕ್ಷ್ಯಕ್ಕೆ ಒಳಗಾಗಬಾರದು ಎಂದು ಸೂಚಿಸಿದರು**

ಸುವರ್ಣಸೌಧದಲ್ಲಿ ಬೆಳಗಾವಿ ವಿಭಾಗಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಬರ ನಿರ್ವಹಣೆ, ಕುಡಿಯುವ ನೀರು, ಕೃಷಿ, ಮೂಲಸೌಕರ್ಯ, ಅರಣ್ಯ ಅನುಮತಿಗಳು, ರಸ್ತೆ ಕಾಮಗಾರಿಗಳು, ಮುಜರಾಯಿ ದೇವಸ್ಥಾನಗಳ ಭದ್ರತೆ ಹಾಗೂ ಆಡಳಿತದ ಜವಾಬ್ದಾರಿಗಳ ಕುರಿತು ಅಧಿಕಾರಿಗಳಿಗೆ ಮಹತ್ವದ ನಿರ್ದೇಶನಗಳನ್ನು ನೀಡಿದರು. ಜಿಲ್ಲಾಧಿಕಾರಿಗಳ ವಿಪತ್ತು ನಿರ್ವಹಣಾ ನಿಧಿಯಲ್ಲಿ ಈಗಾಗಲೇ ಲಭ್ಯವಿರುವ ಅನುದಾನವನ್ನು ತಕ್ಷಣ ಬಳಸುವಂತೆ ಸೂಚಿಸಿದ ಅವರು, ಬಾಗಲಕೋಟೆ, ಬೆಳಗಾವಿ, ವಿಜಯಪುರ, ಧಾರವಾಡ, ಗದಗ, ಹಾವೇರಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಲಭ್ಯವಿರುವ ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿ, ಅಗತ್ಯವಿದ್ದರೆ ಸರ್ಕಾರದಿಂದ ಹೆಚ್ಚುವರಿ ನೆರವು ಪಡೆಯುವಂತೆ ತಿಳಿಸಿದರು. ಕುಡಿಯುವ ನೀರಿನ ಯೋಜನೆಗಳಿಗೆ ಅರಣ್ಯ ಇಲಾಖೆಯ ಅನುಮತಿಗಳು ಅನಗತ್ಯವಾಗಿ ವಿಳಂಬವಾಗಬಾರದು ಎಂದು ನಿರ್ದೇಶನ ನೀಡಿದರು.

ಶಾಸಕರು ಪ್ರಸ್ತಾಪಿಸಿರುವ ಸ್ಥಗಿತಗೊಂಡ ಬೋರ್‌ವೆಲ್‌ಗಳು, ವಿದ್ಯುತ್ ಸಂಪರ್ಕ ಹಾಗೂ ಪೈಪ್‌ಲೈನ್ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸುವುದು ಜಿಲ್ಲಾಧಿಕಾರಿ ನೇರ ಜವಾಬ್ದಾರಿಯಾಗಿದೆ. ಈ ವಿಷಯದಲ್ಲಿ ಶಾಸಕರಿಂದ ಮತ್ತೆ



ದೂರು ಬರಬಾರದು ಎಂದು ಡಿಕೆಶಿ ಎಚ್ಚರಿಕೆ ಕೊಟ್ಟರು.

ಗಡಿ ಜಿಲ್ಲೆಗಳಲ್ಲಿ ಮಾದಕ ವಸ್ತುಗಳು ಮತ್ತು ಅಕ್ರಮ ಮದ್ಯ ಸಾಗಣೆಯನ್ನು ಕಟ್ಟುನಿಟ್ಟಾಗಿ ತಡೆಯಲು ಪೊಲೀಸ್ ಮತ್ತು ಜಿಲ್ಲಾ ಆಡಳಿತ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಸೂಚಿಸಿದರು.

ರೈತರಿಗೆ ರಸಗೊಬ್ಬರ ಮತ್ತು ಬಿತ್ತನೆ ಬೀಜ ಲಭ್ಯವಾಗುವಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ವಹಿಸುವಂತೆ ಕೃಷಿ ಇಲಾಖೆಗೆ ಸೂಚಿಸಿದ ಅವರು, ಕಾಳಸಂತೆಯಲ್ಲಿ ಬೀಜ ಅಥವಾ ಗೊಬ್ಬರ ಮಾರಾಟವಾದರೆ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಪರಿಗಣಿಸಲಾಗುವುದು ಎಂದು ಎಚ್ಚರಿಸಿದರು.

ಕೃಷಿ ಇಲಾಖೆಗೆ ವಿಶೇಷ ನಿರ್ದೇಶನ ನೀಡಿದ ಮುಖ್ಯಮಂತ್ರಿ, ಮಳೆ ವಿಳಂಬವಾಗಿರುವ ಪ್ರದೇಶಗಳಲ್ಲಿ ಕಡಿಮೆ ಅವಧಿಯಲ್ಲಿ ಬೆಳೆಯುವ ಹಾಗೂ ಕಡಿಮೆ ನೀರಿನ ಅವಶ್ಯಕತೆ ಇರುವ ಬೆಳೆಗಳನ್ನು ಬೆಳೆಯಲು ರೈತರಿಗೆ ತಕ್ಷಣ ಮಾರ್ಗದರ್ಶನ ನೀಡಬೇಕು ಎಂದು ಸೂಚಿಸಿದರು. ಮಳೆ ನೀರಿನ ಸಂಗ್ರಹಣೆಗೆ ಸೂಕ್ತ ಸ್ಥಳಗಳಲ್ಲಿ ಕ್ಯಾಚ್-ಪಿಟ್ಗಳನ್ನು ನಿರ್ಮಿಸಿ ನೀರಿನ ಸಂರಕ್ಷಣೆಯನ್ನು ಬಲಪಡಿಸುವಂತೆ ಜಿಲ್ಲಾಧಿಕಾರಿಗಳು ಮತ್ತು ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### ರಸ್ತೆ ಕಾಮಗಾರಿ: ಮೊದಲಿನ ಹಾಗೂ ನಂತರದ ವೀಡಿಯೋ ದಾಖಲಾತಿ ಕಡ್ಡಾಯ

ಸರ್ಕಾರಿ ಕಾಮಗಾರಿಗಳಲ್ಲಿ ಪಾರದರ್ಶಕತೆಗೆ ಒತ್ತು ನೀಡಿದ ಮುಖ್ಯಮಂತ್ರಿ, ಯಾವುದೇ ರಸ್ತೆ ಕಾಮಗಾರಿ ಆರಂಭಕ್ಕೂ ಮುನ್ನ, ಕಾಮಗಾರಿ ನಡೆಯುವ ವೇಳೆ ಹಾಗೂ ಪೂರ್ಣಗೊಂಡ ನಂತರದ ಛಾಯಾಚಿತ್ರ ಮತ್ತು ವಿಡಿಯೊ ದಾಖಲಾತಿ ಕಡ್ಡಾಯವಾಗಬೇಕು ಎಂದು ಸೂಚಿಸಿದರು. "ಒಂದೇ ರಸ್ತೆಗೆ ವಿವಿಧ ಇಲಾಖೆಗಳು ಅಥವಾ ವಿವಿಧ ಯೋಜನೆಗಳ ಹೆಸರಿನಲ್ಲಿ ಬಿಲ್ ಸಲ್ಲಿಸಿ ವಂಚನೆ ಮಾಡಿದರೆ ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ" ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

### ಮುಜರಾಯಿ ದೇಗುಲಗಳ ನಿಧಿ ಸುರಕ್ಷತೆ: ಡಿಸಿಗೆ ಸೂಚನೆ

ಮುಜರಾಯಿ ದೇವಸ್ಥಾನಗಳ ಭದ್ರತೆ ಕುರಿತು ಮಾತನಾಡಿದ ಮುಖ್ಯಮಂತ್ರಿ, ದೇವಸ್ಥಾನಗಳ ನಿಧಿಯನ್ನು ಸುರಕ್ಷಿತವಾಗಿಡಲು ಹಾಗೂ ದುರುಪಯೋಗವನ್ನು ತಡೆಯಲು ಜಿಲ್ಲಾಧಿಕಾರಿಗಳು ವಿಶೇಷ ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸೂಚಿಸಿದರು. ಎಲ್ಲಾ ಪ್ರಮುಖ ದೇವಸ್ಥಾನಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಸಮರ್ಪಕ ಭದ್ರತೆ ಒದಗಿಸುವ ಜವಾಬ್ದಾರಿ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ಅಧೀಕ್ಷಕರದ್ದಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ಧಾರ್ಮಿಕ ದೇಣಿಗೆಗಳ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ಕಾಪಾಡುವುದು ಸರ್ಕಾರದ ಹೊಣೆಗಾರಿಕೆಯಾಗಿದೆ ಎಂದರು.

# ಎಫ್‌ಸಿಐ ಮಾನದಂಡ ಚಾಚೂತಪ್ಪದೆ ಪಾಲಿಸಿ: ಜೋಶಿ

- ಪಾಟ್ನಾದ ಆಹಾರ ನಿಗಮದ ಕೇಂದ್ರಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಭೇಟಿ

**ನವದೆಹಲಿ, ಜು.9:** ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ ಜೋಶಿ ಅವರು ಗುರುವಾರ ಪಟನಾದ ಫುಲ್ವಾರಿ ಷರಿಫ್‌ನ ಎಫ್‌ಸಿಐ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇಲ್ಲಿನ ಭಾರತೀಯ ಆಹಾರ ನಿಗಮದ (ಎಫ್‌ಸಿಐ) ಸಂಗ್ರಹಣಾ ಕಾರ್ಯಾಚರಣೆಗಳನ್ನು ಪರಿಶೀಲಿಸಿದ ಸಚಿವರು, ಆಹಾರಧಾನ್ಯ ಖರೀದಿ ಮತ್ತು ಸಂಗ್ರಹಣಾ ಪ್ರಕ್ರಿಯೆಯ ಪ್ರತಿಹಂತದಲ್ಲೂ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಕಾರ್ಯದಕ್ಷತೆ ಮಾನದಂಡಗಳನ್ನು ಚಾಚೂ ತಪ್ಪದೆ ಅನುಸರಿಸಬೇಕು ಎಂದು ಸೂಚಿಸಿದರು.

ಆಹಾರ ಧಾನ್ಯ ಗುಣಮಟ್ಟ, ಸಂಗ್ರಹಣೆ ಮತ್ತು ಸರಬರಾಜು ಪ್ರಕ್ರಿಯೆಯಲ್ಲಿ ಎಫ್‌ಸಿಐನ ಮಾನದಂಡಗಳನ್ನು ಅನುಸರಿಸಲಾಗಿದೆಯೇ ಎಂಬುದನ್ನು ಖಚಿತ ಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ಸಹ ನೀಡಿದರು.



ನಿಗಮದ ವ್ಯವಸ್ಥಾಪಕರು ಅತ್ಯುತ್ತಮವಾಗಿ ಪಾರದರ್ಶಕತೆ ಕಾಪಾಡಬೇಕು. ಯಾವುದೇ ತರಹದ ನಿರ್ಲಕ್ಷ್ಯ, ಕಾರ್ಯಲೋಪ ತೋರಬಾರದು ಎಂದು ಸೂಚಿಸಿದ ಸಚಿವರು, ಲೋಪ ಕಂಡುಬಂದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಎಚ್ಚರಿಸಿದರು. ಅಲ್ಲದೆ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದೂ ತಿಳಿಸಿದರು.


ಇದೇ ವೇಳೆ ಕೇಂದ್ರ ಸಚಿವರು ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಅಭಿವೃದ್ಧಿ ದ್ಯೋತಕವಾಗಿ ಎಫ್‌ಸಿಐ ಆವರಣದಲ್ಲಿ ಒಂದು ಸಸಿ ನೆಟ್ಟು ಪರಿಸರ ಪ್ರೇಮ ಮೆರೆದರು.

# ದೆಹಲಿ-ಎನ್‌ಸಿಆರ್‌ನಲ್ಲಿ ಮಳೆ ಅಬ್ಬರ; ಜನಜೀವನ ಅಸ್ತವ್ಯಸ್ತ

**ನವದೆಹಲಿ, ಜು.9:** ದೆಹಲಿ ಮತ್ತು ಎನ್‌ಸಿಆರ್ ಪ್ರದೇಶದಲ್ಲಿ ಭಾರಿ ಮಳೆಯಾಗಿದೆ. ರಾತ್ರಿಯಿಂದ ಸುರಿದ ಮಳೆಯಿಂದಾಗಿ ಹಲವು ಕಡೆ ನೀರು ತುಂಬಿ, ಮರಗಳು ಉರುಳಿ, ರಸ್ತೆಗಳು ಸ್ಥಗಿತಗೊಂಡು ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ. ನೋಯ್ಡಾ, ಘಾಜಿಯಾಬಾದ್ ಸೇರಿದಂತೆ ಹಲವು ಪ್ರದೇಶಗಳಲ್ಲಿ ಹೆಚ್ಚು ಹಾನಿಯಾಗಿದೆ.

ಬೆಳಗ್ಗಿನಿಂದಲೇ ನೋಯ್ಡಾದಲ್ಲಿ ಮಳೆಯಿಂದಾಗಿ ಜನರು ಕಚೇರಿಗೆ ತಲುಪುವಲ್ಲಿ ತೊಂದರೆ ಎದುರಿಸಿದರು. ಘಾಜಿಯಾಬಾದ್‌ನ ಪಂಚಶೀಲ್ ವೆಲ್ಲಿಂಗ್ಟನ್ ಬಾಹ್ಯ ಗೋಡೆ ಉರುಳಿಬಿದ್ದಿದೆ. ಶಾಲಿಮಾರ್ ಗಾರ್ಡನ್‌ನಲ್ಲಿ ಜಿಮ್ ಮೇಲಿನ ಅರ್ಸಿಸ್ ಕಳಚಿ ಬಿದ್ದಿದೆ ಅದೃಷ್ಟವಶಾತ್ ಯಾರಿಗೂ ಗಾಯವಾಗಿಲ್ಲ, ಕರಣ್ ಗೇಟ್ ಚೌಕಿಯ ಸಮೀಪ ರಸ್ತೆಯಲ್ಲಿ ಕಂದಕ ಸೃಷ್ಟಿಯಾಗಿದೆ.

ಲೋನಿ ಪ್ರದೇಶದ ಅಂಕುರ್ ವಿಹಾರ್ ಎಸಿಪಿ ಕಚೇರಿ ಹೊರಗೆ ಅಜ್ಞಾತವ್ಯಕ್ತಿಯ ಶವ ನೀರಿನಲ್ಲಿ ತೇಲುತ್ತಿದ್ದುದು ಕಂಡುಬಂದಿದೆ. ಮಳೆಯಿಂದಾಗಿ ನೀರಿನ ಪ್ರವಾಹದಲ್ಲಿ ಶವ ಹರಿದು ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ರಾಜೇಂದ್ರ ನಗರದಲ್ಲಿ ಮನೆಗಳಲ್ಲಿ ನೀರು ತುಂಬಿದ್ದರಿಂದ ವಿದ್ಯುತ್ ಸರಬರಾಜು ನಿಲ್ಲಿಸಲಾಗಿದೆ. ನಂದಗ್ರಾಮದ ಪುಸ್ತಕಾಲಯದಲ್ಲೂ ನೀರು ತುಂಬಿದೆ. ಮಸೂರಿ ಎಂಜಿ ರೋಡ್ ಸಮೀಪ ಹಲವು ಮನೆಗಳಲ್ಲಿ ನೀರು ತುಂಬಿದೆ.



ನೊಯ್ಡಾದ ವಸುಂಧರಾ ಸೆಕ್ಟರ್ 13ರಲ್ಲಿ ರಸ್ತೆಯಲ್ಲಿ ಕಂದಕ ಸೃಷ್ಟಿಯಾಗಿದೆ ಸುಮಾರು 20 ಅಡಿ ಆಳದ ಗುಂಡಿಗೆ ಕಾರು ಮತ್ತು ಸ್ಕೂಟಿ ಬಿದ್ದವು. ವಿದ್ಯುತ್ ಕಂಬವೂ 10 ಅಡಿ ಆಳಕ್ಕೆ ಕುಸಿದಿದೆ. ಸ್ಥಳೀಯರು ಕ್ರೇನ್ ಸಹಾಯದಿಂದ ವಾಹನಗಳನ್ನು ಎತ್ತಿ ತೆಗೆದಿದ್ದಾರೆ.

ದೆಹಲಿಯ ಈಸ್ಟ್ ಆಫ್ ಕೈಲಾಶ್‌ನ ಇಸ್ಕಾನ್ ದೇವಾಲಯ ಸಮೀಪ ಮುಖ್ಯ ರಸ್ತೆಯಲ್ಲಿ ಮರ ಉರುಳಿ ಟ್ರಾಫಿಕ್ ಜಾಮ್ ಉಂಟಾಗಿತು. ಗೋವಿಂದಪುರಿ, ತುಗಲಕಾಬಾದ್, ವಿಕಾಸ್ ಮಾರ್ಗ್, ಮಹರೌಲಿ-ಬದರಪುರ ರಸ್ತೆ, ಸಂಗಮ್ ವಿಹಾರ್‌ನಲ್ಲಿ ನೀರು ತುಂಬಿದೆ. ಯಮುನಾ ನದಿಯ ನೀರಿನ ಮಟ್ಟ ಹೆಚ್ಚಾಗಿದೆ. ರೋಹಿಣಿ ಸೆಕ್ಟರ್-16ರಲ್ಲಿ ನಿರ್ಮಾಣದಲ್ಲಿದ್ದ ಕಟ್ಟಡ ಧ್ವಂಸವಾಗಿ ಮೂವರು ಮೃತಪಟ್ಟಿದ್ದಾರೆ.

# ಗಾಲ್ವಾನ್ ಕಣಿವೆ ಸಂಘರ್ಷದ ಹೊರತಾಗಿಯೂ ಹಲವು ಕ್ಷೇತ್ರದಲ್ಲಿ ಚೀನಾ ಮೇಲಿನ ಆರ್ಥಿಕ ಅವಲಂಬನೆ ಹೆಚ್ಚಿದೆ

**ನವದೆಹಲಿ, ಜು.9:** 2020ರ ಗಾಲ್ವಾನ್ ಕಣಿವೆ ಘರ್ಷಣೆಯ ಹೊರತಾಗಿಯೂ ಭಾರತವು ಹಲವಾರು ಕಾರ್ಯತಂತ್ರದ ಕ್ಷೇತ್ರಗಳಲ್ಲಿ ಚೀನಾವನ್ನು ಹೆಚ್ಚು ಅವಲಂಬಿಸಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದ್ದಾರೆ.

ಕೇಂದ್ರವು ದೇಶದ ರಾಷ್ಟ್ರೀಯ ಹಿತಾಸಕ್ತಿಗಳನ್ನು ರಾಜಿ ಮಾಡಿಕೊಳ್ಳುತ್ತಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಮೇಲೆ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಗಾಲ್ವಾನ್ ಕಣಿವೆ ಘರ್ಷಣೆಗೆ ಆರು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ, ಹಿಂಸಾತ್ಮಕ ಗಡಿ ಘರ್ಷಣೆಯಲ್ಲಿ 20 ಭಾರತೀಯ ಸೈನಿಕರು ಸಾವನ್ನಪ್ಪಿದ ನಂತರ ಪ್ರಧಾನಿ ಮೋದಿ ಚೀನಾಕ್ಕೆ "ಕ್ಲೀನ್ ಚಿಟ್" ನೀಡಿದ್ದಾರೆ ನಮ್ಮ ಧೈರ್ಯಶಾಲಿಗಳು ಹುತಾತ್ಮತೆಯನ್ನು ಅರಿಸಿಕೊಂಡರೆ, ಮೋದಿ ಸರ್ಕಾರ ಭಾರತದ ಹಿತಾಸಕ್ತಿಗಳನ್ನು ಚೀನಾಕ್ಕೆ ಒಪ್ಪಿಸಿದೆ ಎಂದರು.

ಭಾರತವು ಚೀನಾದ ಮೇಲಿನ ಅವಲಂಬನೆಯು ಈಗ ದೇಶದ ಕೆಲವು ನಿರ್ಣಾಯಕ ಆರ್ಥಿಕ ವಲಯಗಳ ಮೂಲಕ ಸಾಗುತ್ತದೆ ಆರೋಪಿಸಿದ್ದಾರೆ ಮತ್ತು ಗಾಲ್ವಾನ್ ಘರ್ಷಣೆಯ ನಂತರ ಚೀನಾದಿಂದ ಆಮದು ಗಮನಾರ್ಹವಾಗಿ ಹೆಚ್ಚಾಗಿದೆ ಎಂದಿದ್ದಾರೆ.

ಅಂಕಿಅಂಶಗಳನ್ನು ಉಲ್ಲೇಖಿಸಿದ ಖರ್ಗೆ, 2025-26ರ ವೇಳೆಗೆ ಚೀನಾದಿಂದ ಭಾರತದ ಆಮದು ಶೇ. 101.81 ರಷ್ಟು ಹೆಚ್ಚಾಗಿದೆ, ಇದು ದ್ವಿಪಕ್ಷೀಯ ವ್ಯಾಪಾರ ಕೊರತೆಯನ್ನು $112.1 ಬಿಲಿಯನ್‌ಗೆ ತಳ್ಳಿದೆ. 2024-25ರ ಅವಧಿಯಲ್ಲಿ ಚೀನಾ ಭಾರತದ ಪ್ರತಿಜೀವಕ ಆಮದುಗಳಲ್ಲಿ ಶೇ.86ರಷ್ಟು ಮತ್ತು ಸಕ್ರಿಯ ಔಷಧೀಯ ಪದಾರ್ಥಗಳು, ಬೃಹತ್ ಔಷಧಗಳು ಮತ್ತು ಔಷಧ ಮಧ್ಯವರ್ತಿಗಳ ಆಮದುಗಳಲ್ಲಿ ಶೇ. 74 ರಷ್ಟು ಪಾಲನ್ನು ಹೊಂದಿದೆ ಎಂದು ವಿವರಿಸಿದ್ದಾರೆ.

ರಾಷ್ಟ್ರೀಯ ಭದ್ರತಾ ಕಾಳಜಿಗಳನ್ನು ಉಲ್ಲೇಖಿಸಿದ ಕಾಂಗ್ರೆಸ್ ನಾಯಕ, ನಾಗರಿಕ ಸಮಾಜ ಸಂಸ್ಥೆಗಳ ವರದಿಗಳು ಚೀನಾ ಅರುಣಾಚಲ ಪ್ರದೇಶ ಮತ್ತು ಲಡಾಖ್‌ನಲ್ಲಿ ಭಾರತೀಯ ಭೂಪ್ರದೇಶವನ್ನು ಅತಿಕ್ರಮಿಸುವುದನ್ನು ಮುಂದುವರೆಸಿದೆ ಎಂದು ಸೂಚಿಸುತ್ತವೆ ಎಂದು ಹೇಳಿದರು. ಆಪರೇಷನ್ ಸಿಂಧೂರ ಸಮಯದಲ್ಲಿ ಪಾಕಿಸ್ತಾನವನ್ನು ಬೆಂಬಲಿಸುವಲ್ಲಿ ಚೀನಾದ ಪಾತ್ರವನ್ನು ಸೇನಾ ಉಪ ಮುಖ್ಯಸ್ಥರು ಒಪ್ಪಿಕೊಂಡಿದ್ದಾರೆ ಮತ್ತು ಅಧಿಕೃತವಾಗಿ ದಾಖಲಿಸಲಾಗಿದೆ ಎಂದು ಖರ್ಗೆ ಹೇಳಿದ್ದಾರೆ.

ಭಾರತದ ಪ್ರಾದೇಶಿಕ ಸಮಗ್ರತೆಯನ್ನು ಕಾಪಾಡಲು ಮತ್ತು ದೇಶೀಯ ಉತ್ಪಾದನೆಯನ್ನು ಬಲಪಡಿಸಲು ಸರ್ಕಾರ ದೃಢ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಬಿಜೆಪಿ ನಿರಂತರವಾಗಿ ಸಮರ್ಥಿಸಿಕೊಂಡಿದೆ, ಆದರೆ ಕಾಂಗ್ರೆಸ್ ಸರ್ಕಾರದ ಚೀನಾ ನೀತಿಯನ್ನು ಪದೇ ಪದೇ ಪ್ರಶ್ನಿಸಿದೆ ಮತ್ತು ಸ್ವಾವಲಂಬನೆಯನ್ನು ಉತ್ತೇಜಿಸುವ ಅಧಿಕೃತ ಹೇಳಿಕೆಗಳ ಹೊರತಾಗಿಯೂ ಬೀಜಿಂಗ್ ಮೇಲಿನ ಆರ್ಥಿಕ ಅವಲಂಬನೆ ಆಳವಾಗುತ್ತಲೇ ಇದೆ ಎಂದು ಆರೋಪಿಸಿದೆ.

### ಕೇಂದ್ರ ಸರ್ಕಾರ ರಾಷ್ಟ್ರೀಯ ಹಿತಾಸಕ್ತಿಯಲ್ಲಿ ರಾಜಿ ಮಾಡಿಕೊಳ್ಳುತ್ತಿದೆ: ಮಲ್ಲಿಕಾರ್ಜುನ ಖರ್ಗೆ ಆರೋಪ



### ವಿದ್ಯುತ್ ವಾಹನಗಳ ಶೇ.66ರಷ್ಟು ಬಿಡಿಭಾಗ ಚೀನಾದಿಂದಲೇ ಆಮದು

ವಿದ್ಯುತ್ ವಾಹನ ವಲಯದ ಬಗ್ಗೆ ಮಾತನಾಡಿ ಭಾರತದ ವಿದ್ಯುತ್ ಚಾಲಿತ ವಾಹನಗಳ ಬಿಡಿಭಾಗಗಳ ಆಮದುಗಳಲ್ಲಿ ಶೇ. 66 ರಷ್ಟು ಚೀನಾದಿಂದಲೇ ಬರುತ್ತಿವೆ, ಆದರೆ ಭಾರತೀಯ ವಿದ್ಯುತ್ ವಾಹನಗಳಲ್ಲಿ ಬಳಸಲಾಗುವ ಲಿಥಿಯಂ-ಐಯಾನ್ ಬ್ಯಾಟರಿಗಳಲ್ಲಿ ಶೇ.75ರಷ್ಟು ಆಮದು ಮಾಡಿಕೊಳ್ಳಲಾಗುತ್ತಿದೆ, ಅವುಗಳಲ್ಲಿ ಹೆಚ್ಚಿನವು ಚೀನಾದ ತಯಾರಕರಿಂದ ಬಂದಿವೆ ಎಂದು ಖರ್ಗೆ ಹೇಳಿದ್ದಾರೆ. 2025-26ರ ಅವಧಿಯಲ್ಲಿ ಭಾರತವು ತನ್ನ ಶಾಶ್ವತ ಮ್ಯಾಗ್ನೆಟ್‌ಗಳಲ್ಲಿ ಸುಮಾರು ಶೇ. 93 ರಷ್ಟು ಚೀನಾದಿಂದ ಆಮದು ಮಾಡಿಕೊಂಡಿದೆ ಎಂದು ಖರ್ಗೆ ಆರೋಪಿಸಿದ್ದಾರೆ.

### ನವೀಕರಿಸಬಹುದಾದ ಇಂಧನ ನೀತಿಗೆ ಟೀಕೆ

ಸರ್ಕಾರದ ನವೀಕರಿಸಬಹುದಾದ ಇಂಧನ ನೀತಿಯನ್ನು ಟೀಕಿಸಿದ ಕಾಂಗ್ರೆಸ್ ಅಧ್ಯಕ್ಷರು, ಆತ್ಮನಿರ್ಭರ ಭಾರತ್ ಉಪಕ್ರಮದ ಅಡಿಯಲ್ಲಿ ಸ್ವಾವಲಂಬನೆಗೆ ಒತ್ತು ನೀಡಿದ್ದರೂ, 2025-26ರಲ್ಲಿ ಚೀನಾ ಭಾರತದ 99 ಪ್ರತಿಶತಕ್ಕಿಂತ ಹೆಚ್ಚಿನ ಸಿಲಿಕಾನ್ ವೇಫರ್ ಆಮದುಗಳನ್ನು ಪೂರೈಸಿದೆ ಎಂದು ಆರೋಪಿಸಿದರು, ಇದನ್ನು ಅವರು ಸೌರಕೋಶ ಉತ್ಪಾದನೆಯ ಅಡಿಪಾಯ ಎಂದು ಬಣ್ಣಿಸಿದರು. ಸರ್ಕಾರಿ ವಿದ್ಯುತ್ ಯೋಜನೆಗಳಿಗೆ ನಾಲ್ಕು ಚೀನೀ ಕಂಪನಿಗಳಿಗೆ ಬಿಡ್ ಮಾಡಲು ಸರ್ಕಾರ ನಿರ್ಬಂಧ ಸಡಿಲಿಸಿದೆ ಎಂದು ಖರ್ಗೆ ಆರೋಪಿಸಿದರು, ಪ್ರಧಾನಿ ತಮ್ಮ "ಜೂಲಾ ಸ್ನೇಹಿತ"ಗಾಗಿ "ರೆಡ್ ಕಾರ್ಪೆಟ್" ಹಾಸಿದ್ದಾರೆ ಎಂದು ಖರ್ಗೆ ದೂರಿದರು.

# ಎಚ್‌ಎಂಟಿ ಜಾಗದ ಮೇಲೆ ಕರ್ನಾಟಕಕ್ಕೆ ಸರ್ಕಾರಕ್ಕೆ ಹಕ್ಕಿಲ್ಲ : ಎಚ್.ಡಿ. ಕುಮಾರಸ್ವಾಮಿ

**ಬೆಂಗಳೂರು, ಜು.9:** ಎಚ್‌ಎಂಟಿ ಜಾಗಕ್ಕೂ ಅರಣ್ಯ ಇಲಾಖೆಗೂ ಯಾವುದೇ ಸಂಬಂಧ ಇಲ್ಲ. ಆ ಜಮೀನಿನ ಮೇಲೆ ಅರಣ್ಯ ಇಲಾಖೆಗೆ ಯಾವುದೇ ರೀತಿ ಹಕ್ಕು ಇರುವುದಿಲ್ಲ. ಬೇಕಿದ್ದರೆ ಈ ಬಗ್ಗೆ ಮಾತನಾಡುತ್ತಿರುವವರು ದಾಖಲೆಗಳನ್ನು ಪರಿಶೀಲನೆ ಮಾಡಲಿ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

ಹೆಚ್‌ಎಂಟಿ ಭೂಮಿ ವಶಕ್ಕೆ ಸಂಬಂಧಿಸಿ ಅರಣ್ಯಾಧಿಕಾರಿ ಒಬ್ಬರು ನೀಡಿರುವ ನೋಟಿಸ್ ವಿಚಾರದಲ್ಲಿ ಸಚಿವ ಈಶ್ವರ ಖಂಡ್ರೆ ನೀಡಿರುವ ಹೇಳಿಕೆಯ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಕೇಂದ್ರ ಸಚಿವರು; ಎಚ್‌ಎಂಟಿ ಭೂಮಿಯ ಮೇಲೆ ಹಿಂದಿನ ಅರಣ್ಯ ಸಚಿವರಿಗೆ ಯಾಕೋ ವಿಪರೀತ ಆಸಕ್ತಿ ಇದೆ. ಯಾವ ಕಾರಣಕ್ಕೆ ಅವರು ಈ ಪರಿಯ ಆಸಕ್ತಿ ತೋರುತ್ತಿದ್ದಾರೆ ಎನ್ನುವುದು ಅರ್ಥವಾಗುತ್ತಿಲ್ಲ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಚ್‌ಎಂಟಿ ಜಮೀನಿನ ಪಕ್ಕದಲ್ಲಿಯೇ ಜಕ್ಕೂರು ವಿಮಾನ ಚಾಲನಾ ತರಬೇತಿ ಕೇಂದ್ರವಿದೆ. ಅದರ ಎದುರಿಗೆ ಇರುವ ಜಕ್ಕೂರು ಪ್ಲಾಂಟೇಶನ್‌ನಲ್ಲಿ ಅನೇಕರು ಮನೆಗಳನ್ನು ಕಟ್ಟಿಕೊಂಡಿದ್ದಾರೆ. ಅಲ್ಲಿ ಸಾಕಷ್ಟು ಅರಣ್ಯ ಭೂಮಿ ಗುಳುಂ ಆಗಿದೆ. 444 ಎಕರೆ ಭೂಮಿಯಲ್ಲಿ ಜೈವಿಕ ಉದ್ಯಾನ ಮಾಡುವುದು ನಮ್ಮ ಗುರಿ ಎಂದು ಹೇಳಿದ್ದೀರಿ. ಅರಮನೆ ಜಾಗವನ್ನು ವಶಕ್ಕೆ ತೆಗೆದುಕೊಳ್ಳುತ್ತೇವೆ ಎಂದು ಹೇಳಿದ್ದೆ ಹೇಳಿದ್ದು. ಅಲ್ಲಿ ನೋಡಿದರೆ ಉದ್ದಕ್ಕೂ ಕಲ್ಯಾಣ ಮಂಟಪಗಳು ತಲೆ ಎತ್ತಿ ನಿಂತಿವೆ. ಆ ಕಲ್ಯಾಣ ಮಂಟಪಗಳಿಗೆ ಯಾವ ಆಧಾರದ ಮೇಲೆ ಅನುಮತಿ ಕೊಟ್ಟಿದ್ದೀರಿ, ಜೈವಿಕ ಉದ್ಯಾನವನ ಮಾಡುವುದು ಅಂದರೆ ಇದೇನಾ ಖಂಡ್ರೆ ಅವರೇ ಎಂದು ಎಚ್‌ಡಿಕೆ ಪ್ರಶ್ನಿಸಿದರು.

ಎಚ್‌ಎಂಟಿ ಜಾಗದ ಬಗ್ಗೆ ಯಾವುದೇ ಗೊಂದಲಗಳಿಲ್ಲ. ಅದಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳು ನಮ್ಮ ಬಳಿ ಇವೆ. ಯಾವುದೇ ಕಾರಣಕ್ಕೂ ಹೆಚ್‌ಎಂಟಿ ಭೂಮಿಯನ್ನು ಮುಟ್ಟಲು ಆಗುವುದಿಲ್ಲ. ನ್ಯಾಯಾಲಯದ ತಡೆಯಾಜ್ಞೆ ಕೂಡ ನೀಡಿದೆ. ಇಷ್ಟೆಲ್ಲಾ ಮಾತನಾಡುವ ಈಶ್ವರ್ ಖಂಡ್ರೆ ಅವರು ಅರಣ್ಯ ಸಚಿವರಾಗಿದ್ದಾಗ ಎರಡು ವರ್ಷಗಳಿಂದ ಎಲ್ಲೆಲ್ಲಿ ಭೂಮಿ ಉಳಿಸಿದ್ದಾರೆ ಅರಣ್ಯ ಭೂಮಿ ದೊಡ್ಡ ಮಟ್ಟದಲ್ಲಿ ಅರಣ್ಯ ಭೂಮಿಯನ್ನು ಲೂಟಿ ಮಾಡಿದ್ದಾರೆ. ಅದನ್ನೆಲ್ಲಾ ವಾಪಸ್ ಪಡೆಯುವುದು ಯಾವಾಗ ಎಂದು ಸ್ವಲ್ಪ ಹೇಳುವಿರಾ ಎಂದು ಪ್ರಶ್ನಿಸಿದರು.

### ಸರ್ಕಾರದ್ದು ಎನ್ನುತ್ತಿರುವವರು ಮೊದಲು ದಾಖಲೆಗಳನ್ನು ಪರಿಶೀಲಿಸಲಿ: ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ



### ರಾಜ್ಯಕ್ಕೆ ವಾಪಸ್ ಬಂದೇ ಬರುತ್ತೇನೆ

ನಾನು ನಮ್ಮ ಪಕ್ಷದ ರಾಜ್ಯಾಧ್ಯಕ್ಷ. ಹೀಗಾಗಿ ಪಕ್ಷದ ಸಂಘಟನೆಯ ಜವಾಬ್ದಾರಿ ನನಗಿದೆ. ರಾಜ್ಯಕ್ಕೆ ವಾಪಸ್ ಬಂದೇ ಬರುತ್ತೇನೆ. ಆದರೆ ಈಗಲೇ ಅಲ್ಲ ಎಂದ ಅವರು; ನಾನು ರಾಜ್ಯಕ್ಕೆ ವಾಪಸ್ ಬರುತ್ತೇನೆ ಎಂದರೆ ಅದು ಈಗಲೇ ಎಂದಲ್ಲ. ಸದ್ಯಕ್ಕೆ ನಾನು ಕೇಂದ್ರ ಸಚಿವನಾಗಿದ್ದೇನೆ, ಇನ್ನೂ ಮೂರು ವರ್ಷ ಸಂಸದನಾಗಿ ಅಧಿಕಾರಾವಧಿ ಇದೆ. ಹಾಗಾಗಿ ಇವತ್ತೇ, ನಾಳೆ ದಿನವೇ ಬರುತ್ತೇನೆ ಎಂದಲ್ಲ. ಕೇಂದ್ರದಲ್ಲಿ ನನಗೆ ಜವಾಬ್ದಾರಿ ನೀಡಲಾಗಿದೆ, ಅದನ್ನು ನಿಭಾಯಿಸುತ್ತಲೇ ರಾಜ್ಯದಲ್ಲಿ ಪಕ್ಷ ಸಂಘಟನೆಯನ್ನೂ ಮಾಡುತ್ತೇನೆ. ಕೇಂದ್ರ ಮತ್ತು ರಾಜ್ಯ ಎರಡೂ ಕಡೆಗಳಲ್ಲಿ ನಾನು ಸಕ್ರಿಯವಾಗಿ ಕೆಲಸ ಮಾಡುತ್ತೇನೆ ಎಂದು ಅವರು ಪ್ರಶ್ನೆ ಒಂದಕ್ಕೆ ಉತ್ತರ ನೀಡಿದರು. ಹಿರಿಯೂರು ವಿಧಾನಸಭೆ ಕ್ಷೇತ್ರದ ಉಪ ಚುನಾವಣೆ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು; ಹಿರಿಯೂರು ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕು ಎಂದು ನಮ್ಮ ಪಕ್ಷದಲ್ಲಿ ಒತ್ತಡ ಇದೆ. ಈ ಬಗ್ಗೆ ಬಿಜೆಪಿ ಉನ್ನತ ನಾಯಕರ ಜತೆ ಚರ್ಚೆ ನಡೆಸಿದ್ದೇನೆ. ಹಿರಿಯೂರು ಕ್ಷೇತ್ರದ ಮುಖಂಡರ ಜತೆ ಎರಡು ಮೂರು ಸಭೆಗಳನ್ನು ನಡೆಸಿದ್ದೇನೆ. ಸಮಯ ಇದೆ, ನೋಡೋಣ ಎಂದರು.

### ನಿಮ್ಮದೇ ಸರ್ಕಾರವಿದೆ ತನಿಖೆ ಮಾಡಿ

ಎಚ್‌ಎಂಟಿ ಜಾಗದಲ್ಲಿ 280 ಎಕರೆ ನೆಡುತೋಪು ಇದೆ ಎಂದು ಖಂಡ್ರೆ ಹೇಳಿದ್ದಾರೆ. ಬನ್ನಿ, ನೆಡುತೋಪು ಎಲ್ಲಿದೆ ಎಂದು ಹೋಗಿ ನೋಡೋಣ. ರಾಜ್ಯದ ಎಲ್ಲಾ ಮಾಧ್ಯಮಗಳನ್ನು ಕರೆದುಕೊಂಡು ಅವರ ಸಮಕ್ಷಮದಲ್ಲಿಯೇ ವೀಕ್ಷಣೆ ಮಾಡೋಣ. ಅಲ್ಲಿ ಏನಾದರೂ ಎಚ್‌ಎಂಟಿ ದುರ್ಬಳಕೆ ಮಾಡುತ್ತಿದ್ದೀಯಾ ಅಥವಾ ಬೇರೆ ಪಟ್ಟಭದ್ರರು ಅಲ್ಲಿನ ಜಾಗವನ್ನು ಕಬ್ಬಳಿಸಿದ್ದಾರಾ ಎನ್ನುವುದು ತಿಳಿಯುತ್ತದೆ. ಈಗ ರಾಜ್ಯದಲ್ಲಿ ಈಶ್ವರ ಖಂಡ್ರೆ ಅವರ ಪಕ್ಷದ್ದೇ ಸರ್ಕಾರ ಇದೆಯಲ್ಲ, ತನಿಖೆ ಮಾಡಲಿ. ನಮಗೇನು ಆಕ್ಷೇಪ ಇಲ್ಲ ಎಂದು ಖಂಡ್ರೆ ಅವರಿಗೆ ಎಚ್‌ಡಿಕೆ ಸವಾಲು ಹಾಕಿದರು.

## ನಿತ್ಯ ಪಂಚಾಂಗ 10.07.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

**ಕದಳೀಗೌರೀ ವ್ರತ, ರಂಭಾ ತೃತೀಯಾ, ಕೈವಾರ ಮಹಾರಾಜ ಆರಾಧನೆ, ಮೊಹರಂ ತಿಂಗಳ ಆರಂಭ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಬೆಳಗಾವಿಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಅದ್ಧೂರಿ ಸ್ವಾಗತ

**ಬೆಳಗಾವಿ, ಜು.9:** ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಬೆಳಗಾವಿಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಜಿಲ್ಲಾ ಕಾಂಗ್ರೆಸ್ ನಾಯಕರು, ಶಾಸಕರು ಹಾಗೂ ಕಾರ್ಯಕರ್ತರು ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಗುರುವಾರ ಅದ್ಧೂರಿ ಸ್ವಾಗತ ಕೋರಿದರು. ವಿಮಾನ ನಿಲ್ದಾಣ ಬಳಿ ಡಿ.ಕೆ. ಶಿವಕುಮಾರ್ ಅವರನ್ನು ಸಚಿವರಾದ ಎಂ.ಬಿ. ಪಾಟೀಲ, ಸತೀಶ ಜಾರಕಿಹೊಳಿ, ಶಾಸಕರಾದ ಲಕ್ಷ್ಮೀ ಹೆಬ್ಬಾಳ್ಕರ್, ಅಶೋಕ ಪಟ್ಟಣ, ಬಾಬಾಸಾಹೇಬ ಪಾಟೀಲ, ಆಸೀಫ್ ಸೇಠ್, ವಿಜಯಾನಂದ ಕಾಶಪ್ಪನವರ, ಮಹೇಂದ್ರ ತಮ್ಮಣ್ಣವರ, ವಿಶ್ವಾಸ ವೈದ್ಯ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ ಸೇರಿದಂತೆ ಪಕ್ಷದ ಮುಖಂಡರು ಸ್ವಾಗತಿಸಿದರು. ಬಳಿಕ ಮುಖ್ಯಮಂತ್ರಿಗಳು ಪೊಲೀಸ್ ಗೌರವ ವಂದನೆ ಸ್ವೀಕರಿಸಿದರು.

ವಿಮಾನ ನಿಲ್ದಾಣದ ಹೊರಭಾಗದಲ್ಲಿ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರು ಜಮಾಯಿಸಿದ್ದು, ಮುಖ್ಯಮಂತ್ರಿ ಅವರ ವಾಹನ ಸಾಗುತ್ತಿದ್ದಂತೆ ಜೆಸಿಬಿಗಳ ಮೂಲಕ ಹೂವಿನ ಮಳೆ ಸುರಿಸಲಾಯಿತು. ಪಟಾಕಿ ಸಿಡಿಸಿ, ಘೋಷಣೆಗಳನ್ನು ಕೂಗುವ ಮೂಲಕ ಕಾರ್ಯಕರ್ತರು ಸಂಭ್ರಮಿಸಿದರು.



ಮಾಧ್ಯಮದವರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದಲ್ಲಿ ಸುರಿಯುತ್ತಿರುವ ಮಳೆಯ ಪರಿಸ್ಥಿತಿ, ಬೆಳೆಗಳ ಸ್ಥಿತಿ ಹಾಗೂ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆಗಾಗಿ ರಾಜ್ಯದ ವಿವಿಧ ಭಾಗಗಳಿಗೆ ಪ್ರವಾಸ ಕೈಗೊಂಡಿದ್ದೇನೆ. ಇಂದು ಬೆಳಗಾವಿಗೆ ತಲುಪಿದ್ದೇನೆ. ಸಚಿವರೂ ಜತೆಯಲ್ಲಿದ್ದು, ಈ ಭಾಗದ ಶಾಸಕರೊಂದಿಗೆ ಸಭೆ ನಡೆಸಿ ಅಭಿವೃದ್ಧಿ ಹಾಗೂ ಜನಸಾಮಾನ್ಯರ ಸಮಸ್ಯೆಗಳ ಕುರಿತು ಚರ್ಚೆ ನಡೆಸಲಿದ್ದೇನೆ ಎಂದು ಹೇಳಿದರು.

ಬೆಳಗಾವಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಿಮಿತ್ತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಗುರುವಾರ ಬೆಳಗಾವಿಯ ಸುವರ್ಣ ವಿಧಾನಸೌಧಕ್ಕೆ ಭೇಟಿ ನೀಡಿ, ರಾಜ್ಯದ ಅಭಿವೃದ್ಧಿ, ಜನರ ಸುಖ–ಸಮೃದ್ಧಿ ಹಾಗೂ ಉತ್ತಮ ಆಡಳಿತಕ್ಕಾಗಿ ವಿಶೇಷ ಪೂಜೆ ಸಲ್ಲಿಸಿದರು. ಜತೆಗೆ ಮುಖ್ಯಮಂತ್ರಿ ಕೊಠಡಿಯೊಳಗೆ ಹೋಗುವಾಗ ಹೊಸ್ತಿಲಿಗೆ ಬಾಗಿ ಕೈ ಮುಗಿದು ಪ್ರವೇಶಿಸಿದರು.

ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಸುವರ್ಣ ವಿಧಾನಸೌಧಕ್ಕೆ ಆಗಮಿಸಿದ ಡಿ.ಕೆ. ಶಿವಕುಮಾರ್ ಅವರು ಸಂಪ್ರದಾಯಬದ್ಧವಾಗಿ ಪೂಜೆಯಲ್ಲಿ ಭಾಗವಹಿಸಿ ರಾಜ್ಯದ ಸರ್ವತೋಮುಖ ಅಭಿವೃದ್ಧಿ, ರೈತರ ನೆಮ್ಮದಿ, ಉತ್ತಮ ಮಳೆ, ಜನಕಲ್ಯಾಣ ಮತ್ತು ಆಡಳಿತ ಯಶಸ್ವಿಯಾಗಲೆಂದು ಪ್ರಾರ್ಥಿಸಿದರು.ಪೂಜೆಯ ಬಳಿಕ ಮುಖ್ಯಮಂತ್ರಿ ಅವರು ಸುವರ್ಣ ವಿಧಾನಸೌಧದ ವಿವಿಧ ವಿಭಾಗಗಳನ್ನು ವೀಕ್ಷಿಸಿ, ಬಳಿಕ ಬೆಳಗಾವಿ ವಿಭಾಗದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಅಭಿವೃದ್ಧಿ ಕಾಮಗಾರಿಗಳು, ಆಡಳಿತ ವ್ಯವಸ್ಥೆ ಹಾಗೂ ಜನಪರ ಯೋಜನೆಗಳ ಅನುಷ್ಠಾನದ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವರಾದ ಎಂ.ಬಿ. ಪಾಟೀಲ, ಸತೀಶ ಜಾರಕಿಹೊಳಿ, ಯು.ಟಿ. ಖಾದರ್, ಈಶ್ವರ ಖಂಡ್ರೆ ಸೇರಿದಂತೆ ರಾಜ್ಯ ಸರ್ಕಾರದ ವಿವಿಧ ಸಚಿವರುಇದ್ದರು. ಶಾಸಕಿ ಲಕ್ಷ್ಮೀ ಹೆಬ್ಬಾಳಕರ, ವಿವಿಧ ಜಿಲ್ಲೆಗಳ ಶಾಸಕರು, ಹಿರಿಯ ಅಧಿಕಾರಿಗಳು ಹಾಗೂ ಸಾರ್ವಜನಿಕ ಪ್ರತಿನಿಧಿಗಳು ವಿಶೇಷ ಪೂಜೆಯಲ್ಲಿ ಭಾಗವಹಿಸಿ ರಾಜ್ಯದ ಅಭಿವೃದ್ಧಿಗಾಗಿ ಪ್ರಾರ್ಥಿಸಿದರು.

## ಪಕ್ಷದ ಹಿತದೃಷ್ಟಿಯಿಂದ ಕಾರ್ಯನಿರ್ವಹಣೆ ಸಂಸದ ಡಾ.ಕೆ.ಸುಧಾಕರ್

**ಬೆಂಗಳೂರು, ಜು.9:** ಪಕ್ಷದ ಅಡಿಯಲ್ಲಿ ಪಕ್ಷಕ್ಕೆ ನಷ್ಟ ಆಗದಂತೆ ಸದೃಢವಾಗಿ ನಮ್ಮ ಕಾರ್ಯವ್ಯಾಪ್ತಿಯಲ್ಲಿ ಹೇಗೆ ಸಂಘಟನೆ ಮಾಡಬೇಕು, ಪಕ್ಷವನ್ನು ಒಳ್ಳೆಯ ರೀತಿ ಕಟ್ಟಬೇಕೆಂಬ ಬಗ್ಗೆ ಅಂಶಗಳು ಚರ್ಚೆ ಆಗಿವೆ ಎಂದು ಸಂಸದ ಡಾ.ಸುಧಾಕರ್ ತಿಳಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಉಸ್ತುವಾರಿ ಡಾ.ರಾಧಾಮೋಹನ್ ದಾಸ್ ಅಗ್ರವಾಲ್ ಅವರು ನಮ್ಮನ್ನು ಕರೆದಿದ್ದರು. ನಮ್ಮ ಭಾಗದಲ್ಲಿ ಅನ್ಯೋನ್ಯವಾಗಿ ಬಿಜೆಪಿಯನ್ನು ಸದೃಢವಾಗಿ ಕಟ್ಟಬೇಕು; ಪರಸ್ಪರ ಏನೇ ಭಿನ್ನಾಭಿಪ್ರಾಯ ವಿದ್ದರೂ ಅದು ಪಕ್ಷದ ಮೇಲೆ ಪ್ರಭಾವ ಆಗಬಾರದು. ಪಕ್ಷಕ್ಕೆ ನಷ್ಟ ಆಗಬಾರದೆಂದು ಹೇಳಿದ್ದು, ಒಪ್ಪಿದ್ದೇವೆ. ಸಣ್ಣಪುಟ್ಟ ಅಭಿಪ್ರಾಯ ಹೇಳಿದ್ದೇವೆ ಎಂದು ತಿಳಿಸಿದರು.

ಪಕ್ಷ ಸಂಘಟನೆ ವೇಳೆ ಸ್ವಲ್ಪ ವ್ಯತ್ಯಾಸಗಳನ್ನು ಹೊಟ್ಟೆಯಲ್ಲಿ ಇಟ್ಟುಕೊಂಡು ಪಕ್ಷದ ಹಿತದೃಷ್ಟಿಯಿಂದ ನಾವೆಲ್ಲ ಒಳ್ಳೆಯ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ನುಡಿದರು. ಬೇಡಿಕೆಯೂ ಇಲ್ಲ; ದೂರುಗಳೂ ಇಲ್ಲ. ಇದು ಪ್ರಬುದ್ಧ ನಾಯಕರ ನಡುವಿನ ಚರ್ಚೆ ಅಷ್ಟೇ ಎಂದರು.

## ಎಸ್‌ಐಆರ್: ಸಾಮೂಹಿಕ ಫಾರ್ಮ್ ಭರ್ತಿಗೆ ರಾಧಾಮೋಹನ್ ದಾಸ್ ಅಗರ್‌ವಾಲ್ ಆಕ್ಷೇಪ

**ಬೆಂಗಳೂರು, ಜು.9:** ಧಾರ್ಮಿಕ ಸ್ಥಳ, ಕಾಂಗ್ರೆಸ್ ನಾಯಕರು ಸೂಚಿಸಿದ ಸ್ಥಳಗಳಲ್ಲಿ ಸಾಮೂಹಿಕವಾಗಿ ಎಸ್‌ಐಆರ್ ಎನ್ಯುಮರೇಷನ್ ಫಾರ್ಮ್ ತುಂಬಿಸುತ್ತಿದ್ದು ಇದು ಸರಿಯಲ್ಲ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯ ಉಸ್ತುವಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರು ಆಕ್ಷೇಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಪರವಾಗಿ ಎಸ್.ಐಆರ್ ಬಳಸಿಕೊಳ್ಳಲು ಪ್ರಯತ್ನ ನಡೆದಿದೆ. ಬಿಎಲ್‌ಒಗಳು ಮನೆಗೆ ತೆರಳದ ಕುರಿತು ನಾವು ದೂರು ನೀಡಿದ್ದೇವೆ. ಕಡ್ಡಾಯವಾಗಿ ಮನೆಮನೆಗೆ ತೆರಳಿ ಫಾರ್ಮ್ ವಿತರಿಸಲು ಚುನಾವಣಾ ಆಯೋಗ ಸೂಚಿಸಿದೆ ಎಂದು ವಿವರಿಸಿದರು. ನಮ್ಮ ಬಿಎಲ್‌ಎ 2 ಕಾರ್ಯಕರ್ತರ ಸಭೆ ನಡೆಸಲಾಗಿದೆ; ಪ್ರಶಿಕ್ಷಣ ಕೊಡಲಾಗಿದೆ ಎಂದು ಹೇಳಿದರು.


ರಾಜ್ಯ ಸರಕಾರವು ಬಿಜೆಪಿಯ ಬಿಎಲ್‌ಎ 2 ಅನ್ನು ಬಳಸಿಕೊಳ್ಳುತ್ತಿಲ್ಲ ಎಂದು ಟೀಕಿಸಿದರು. ಪಕ್ಷದ ಆಂತರಿಕ ವಿಚಾರಗಳನ್ನು ಜನಪ್ರತಿನಿಧಿಗಳ ಜೊತೆ ಚರ್ಚಿಸಿದ್ದಾಗಿ ಪ್ರಶ್ನೆಗೆ ಉತ್ತರ ಕೊಟ್ಟರು. ಪ್ರಿಯಾಂಕ್ ಖರ್ಗೆ ಅವರ ಮಾತನ್ನು ಯಾರೂ ಗಮನಿಸುತ್ತಿಲ್ಲ. ಕುಂಕುಮದ ವಿಚಾರದಲ್ಲೂ ಅವರ ಮಾತು ಸರಿಯಲ್ಲ ಎಂದು ಟೀಕಿಸಿದರು. ಅಡ್ಡ ಮತದಾನ ಮಾಡಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಮತ್ತೊಂದು ಪ್ರಶ್ನೆಗೆ ಉತ್ತರ ನೀಡಿದರು. ಬಿಜೆಪಿ– ಜೆಡಿಎಸ್ ನಡುವೆ ನಿರಂತರ ಸಂಪರ್ಕವಿದ್ದು, ಮಾತುಕತೆ ನಡೆಯುತ್ತದೆ. ಸಮನ್ವಯ ಸಮಿತಿ ರಚಿಸಿದ್ದು ನಮ್ಮ ಪಕ್ಷದ ವತಿಯಿಂದ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಇದರಲ್ಲಿ ಇದ್ದಾರೆ ಎಂದು ಪ್ರಶ್ನೆಗೆ ಉತ್ತರಿಸಿದರು.

**ವಿರೋಧಿಗಳು ಪಾಪ ಮಾಡುವುದು ನಮ್ಮ ಹಿತಕ್ಕಾಗಿ:** ನಮ್ಮ ವಿರೋಧಿಗಳು ಮುಸ್ಲಿಂ ತುಷ್ಟೀಕರಣ ಮಾಡುತ್ತಿರುವುದು, ಭ್ರಷ್ಟಾಚಾರದಲ್ಲಿ ತಲ್ಲೀನರಾಗಿ ಇರುವುದು, ನಮ್ಮನ್ನು ದುರ್ಬಲರೆಂದು ಭಾವಿಸುವುದು ಮತ್ತು ಎಲ್ಲ ಪಾಪ ಮಾಡುವುದು ನಮ್ಮ ಹಿತದಲ್ಲೇ ಇರುತ್ತದೆ. ಇದರ ಬಗ್ಗೆ ನಮಗೆ ಹೇಳಲೇನೂ ಇಲ್ಲ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು.

**ಮಮತಾ ಬ್ಯಾನರ್ಜಿಗೆ ಕೊಟ್ಟ ಮಾದರಿಯ ಉತ್ತರ:** 2028ರ ರಾಜ್ಯ ವಿಧಾನಸಭಾ ಚುನಾವಣೆಗೆ ಜನರು ಸನ್ನದ್ಧರಾಗಿ ಕುಳಿತಿದ್ದಾರೆ. ಪಶ್ಚಿಮ ಬಂಗಾಲದಲ್ಲಿ ಜನರು ಮಮತಾ ಬ್ಯಾನರ್ಜಿಗೆ ಉತ್ತರ ಕೊಟ್ಟ ಮಾದರಿಯಲ್ಲೇ ರಾಹುಲ್ ಗಾಂಧಿ, ಶಿವಕುಮಾರ್, ಸಿದ್ದರಾಮಯ್ಯನವರ ಸರಕಾರಕ್ಕೆ ಮತದಾರರು ಉತ್ತರ ಕೊಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನನ್ನ ಕೆಲಸದ ಸಫಲತೆ, ಅಸಫಲತೆ ಕುರಿತು ನಮ್ಮ ಕಾರ್ಯಕರ್ತರಲ್ಲಿ ಪ್ರಶ್ನಿಸಿ ಎಂದು ಅವರು ತಿಳಿಸಿದರು.



ಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ರೈತರು, ಕನ್ನಡ ಪರ ಸಂಘಟನೆಗಳ ಪ್ರತಿನಿಧಿಗಳು, ಸಾರ್ವಜನಿಕರಿಂದ ಗುರುವಾರ ಅಹವಾಲುಗಳನ್ನು ಸ್ವೀಕರಿಸಿದರು.




## ಒಂದೆರಡು ವಾರದಲ್ಲಿ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆ: ಸಚಿವ ಪ್ರಿಯಾಂಕ್ ಖರ್ಗೆ ವಿಶ್ವಾಸ

**ಬೆಂಗಳೂರು, ಜು.9:** ಒಂದೆರಡು ವಾರದಲ್ಲಿ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಯಾಗಲಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೂರ್ಣಪ್ರಮಾಣದಲ್ಲಿ ಸಂಪುಟ ವಿಸ್ತರಣೆ ಮಾಡುವುದಾಗಿ ಮುಖ್ಯಮಂತ್ರಿಯವರೇ ಹೇಳಿದ್ದಾರೆ. ಸರ್ಕಾರ ನಡೆಯಲು ಅಧಿಕಾರ ವಿಕೇಂದ್ರೀಕರಣವಾಗಬೇಕು. ಎಲ್ಲರಿಗೂ ಅನುಕೂಲವಾಗಬೇಕೆಂದು ಎಂದರು.

ಕಾಂಗ್ರೆಸ್‌ನವರು ಒಟ್ಟಿಗೆ ಕಾಫಿ ಕುಡಿದರೂ ಪ್ರತ್ಯೇಕ ಸಭೆಯೆಂದು ಬಿಂಬಿಸಲಾಗುತ್ತದೆ. ಒಟ್ಟಾಗಿ ಊಟ ಮಾಡಲು ಯಾವುದಾದರೂ ನಿರ್ಬಂಧ ವಿದೆಯೇ. ಮಲ್ಲಿಕಾರ್ಜುನ ಖರ್ಗೆ ನನ್ನ ತಂದೆ. ದೆಹಲಿಗೆ ಹೋದಾಗ ನಾನು ಮನೆಗೆ ಹೋದರೆ, ಪ್ರಿಯಾಂಕ ಖರ್ಗೆಯಿಂದ ಎಐಸಿಸಿ ಅಧ್ಯಕ್ಷರ ಭೇಟಿ ಎಂದು ವರದಿ ಪ್ರಕಟವಾಗುತ್ತದೆ. ನಾನು ವಾಸವಿರುವುದು ಅವರ ಮನೆಯಲ್ಲೇ. ಈ ರೀತಿಯ ಸುದ್ದಿಗಳಿಗೆ ಏನೆಂದು ಸ್ಪಷ್ಟನೆ ನೀಡಬೇಕು ಎಂದರು. ಜಾಗತಿಕ ಹೂಡಿಕೆ ವಿದೇಶಾಂಗ ವ್ಯವಹಾರಗಳ



ಸಚಿವಾಲಯ ಸ್ಥಾಪಿಸುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಇದು ಎನ್‌ಐಆರ್‌ಗೆ ಸಂಬಂಧಪಟ್ಟ ವಿಷಯ ಅಲ್ಲ. ಬಂಡವಾಳ ಹೂಡಿಕೆ, ಉದ್ಯೋಗವಕಾಶಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಸದ್ಯಕ್ಕೆ ಈ ವಿಚಾರಗಳನ್ನು ಬೇರೆ ಬೇರೆ ಇಲಾಖೆಗಳು ನಿರ್ವಹಣೆ ಮಾಡುತ್ತಿವೆ. ಹೊಸ ಇಲಾಖೆ ರಚಿಸುವುದರಿಂದ ಯಾವುದೇ ಇಲಾಖೆ ಅಧಿಕಾರ ವ್ಯಾಪ್ತಿಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಲಾಗುವುದು. ಶಿಷ್ಟಾಚಾರ ಮತ್ತು ನೀತಿಗಳಿಗೂ ತೊಂದರೆಯಾಗದಂತೆ ಮತ್ತು ಗಡಿ ರೇಖೆ ಮೀರದಂತೆ ಇಲಾಖೆ ರೂಪಿಸಬೇಕು ಎಂದರು.

### ಎಂಇಎಸ್‌ಗೆ ಕಾನೂನುನೆರವು ನೀಡುವ ಮಹಾರಾಷ್ಟ್ರ ಸರ್ಕಾರದ ನಿರ್ಧಾರಕ್ಕೆ ಕಿಡಿ

ಎಂಇಎಸ್ (ಮಹಾರಾಷ್ಟ್ರ ಏಕೀಕರಣ ಸಮಿತಿ) ಸಂಘಟನೆಗೆ ಕಾನೂನುನೆರವು ನೀಡುವ ಮಹಾರಾಷ್ಟ್ರ ಸರ್ಕಾರದ ನಿರ್ಧಾರಕ್ಕೆ ಕರ್ನಾಟಕ ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ನಮ್ಮ ನೆಲ, ಜಲ, ಭಾಷೆ ವಿಚಾರ ಬಂದಾಗ ನಾವು ಹಿಂದೆ ಸರಿಯುವುದಿಲ್ಲ ಎಂದು ಕಿಡಿ ಕಾರಿದ್ದಾರೆ. ಮಹಾರಾಷ್ಟ್ರ, ಗೋವಾ, ತಮಿಳುನಾಡು, ಆಂಧ್ರ ಯಾರೇ ಇರಬಹುದು. ಏನೇ ಗಡಿ ವಿಚಾರ ಇದ್ರೂ ಕಾನೂನಾತ್ಮಕವಾಗಿ ಹೋರಾಟ ಮಾಡಬೇಕು. ಯಾವುದೋ ಸಂಘಟನೆಯವರು ಹೇಳ್ತಾರೆ, ಮುಖ್ಯಮಂತ್ರಿ ಹೇಳುತ್ತಾರೆ ಎಂದು ಬೇಕಾದ ರೀತಿ ಅಡ್ಡಾದಿಡ್ಡಿ ಗೆರೆ ಎಳೆಯೋಕೆ ಬರಲ್ಲ. ಇದನ್ನು ಎಚ್ಚರಿಕೆ ಎಂದಾದರೂ ತಿಳಿದುಕೊಳ್ಳಲಿ ಅಥವಾ ಮನವಿ ಅಂತಾದರೂ ತಿಳಿದುಕೊಳ್ಳಲಿ ಎಂದರು.

## ಸಾಲಮನ್ನಾ: ಕೇಂದ್ರದ ಮೇಲೆ ಬಿಜೆಪಿ ಒತ್ತಡ ಹೇರಲಿ

ಕೃಷಿಸಾಲ ಮನ್ನಾ ಮಾಡಲಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಕೇಂದ್ರ ಸರ್ಕಾರದಿಂದ ಹೆಚ್ಚಿನ ಹಣ ಕೊಡಿಸಲಿ, ಪ್ರಧಾನಮಂತ್ರಿಯವರು ಈ ಬಗ್ಗೆ ಗಮನ ಹರಿಸಿ ರಾಷ್ಟ್ರ ಮಟ್ಟದಲ್ಲಿ ನಿರ್ಧಾರ ತೆಗೆದುಕೊಳ್ಳಲಿ ಎಂದರು. ವಿಬಿಜಿ–ರಾಮ್‌ಜಿ ಯೋಜನೆಗೂ ರಾಜ್ಯ ಸರ್ಕಾರವೇ ಹಣ ಕೊಡಬೇಕು. ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಿಗೂ ರಾಜ್ಯ ಪಾಲುದಾರರಾಗಬೇಕು, ಸಾಲ ಮನ್ನಾವನ್ನು ರಾಜ್ಯವೇ ಮಾಡಬೇಕು. ಹಾಗಿದ್ದರೆ ಕೇಂದ್ರ ಸರ್ಕಾರದ ಜವಾಬ್ದಾರಿ ಏನು ಎಂದರು. ಯಡಿಯೂರಪ್ಪರವರು ಮುಖ್ಯಮಂತ್ರಿಯಾಗಿದ್ದಾಗ ಸಾಲ ಮನ್ನಾ ಮಾಡಲು ಒತ್ತಾಯಿಸಲಾಯಿತು. ನಾವು ನೋಟು ಮುದ್ರಿಸುವ ಯಂತ್ರ ಇಟ್ಟಿಲ್ಲ ಎಂದಿದ್ದರು. ಬರ ನಿರ್ವಹಣೆಗೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಹೆಚ್ಚಿನ ನೆರವು ನೀಡಬೇಕಿದೆ ಎಂದು ಆಗ್ರಹಿಸಿದ್ದಲ್ಲದೇ, ರೈತರ ಸಾಲ ಮನ್ನಾಗೆ ದೆಹಲಿಗೆ ಹೋಗಿ ಪ್ರಧಾನಿಯವರ ಮೇಲೆ ಬಿಜೆಪಿಯವರು ಒತ್ತಡ ಹಾಕಲಿ. ಕೇವಲ ಮನ್ ಕೀ ಬಾತ್ ಕೇಳಿಕೊಂಡು ಕುಳಿತುಕೊಳ್ಳಬೇಡಿ ಎಂದರು.

## ಪತ್ರಕರ್ತರ ಸಮುದಾಯಕ್ಕೆ ತಗಡೂರು ಸೇವೆ ಅನನ್ಯ

**ಬೆಂಗಳೂರು,ಜು.9:** ಪತ್ರಕರ್ತರ ಸಮುದಾಯಕ್ಕೆ ಧ್ವನಿಯಾಗಿ ದುಡಿಯುತ್ತಿರುವ ಮತ್ತು ವಿಶೇಷವಾಗಿ ಕೋವಿಡ್ ಕಾಲಘಟ್ಟದಲ್ಲಿ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾಗಿ ಶಿವಾನಂದ ತಗಡೂರು ಅವರು ಸಲ್ಲಿಸಿದ ಸೇವೆ ಶ್ಲಾಘನೀಯ ಎಂದು ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜಮೂರ್ತಿ ಅವರು ಸ್ಮರಿಸಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಬೆಂಗಳೂರಿನಲ್ಲಿ ಎರಡು ದಿನಗಳ ಕಾಲ ಆಯೋಜಿಸಿದ್ದ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಅವರು ಮಾತನಾಡಿದರು.




ಮಾಧ್ಯಮ ಕ್ಷೇತ್ರಕ್ಕೆ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರನ್ನು ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನಾಧ್ಯಕ್ಷರಾದ ನಾಡೋಜ ಗೊ.ರು. ಚನ್ನಬಸಪ್ಪ ಹಾಗೂ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಶಿವಾನಂದ ತಗಡೂರು ಅವರನ್ನು ಅಭಿನಂದಿಸಿದರು.

ಚನ್ನಬಸವ ಸ್ವಾಮೀಜಿ, ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜ ಮೂರ್ತಿ, ಡಾ. ಅವಿನಾಶ್ ಕವಿ, ಫಾಲನೇತ್ರ ಸೇರಿದಂತೆ ಸಾಹಿತ್ಯ, ಸಾಂಸ್ಕೃತಿಕ ಹಾಗೂ ಗಣ್ಯರು ಉಪಸ್ಥಿತರಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಅಭಿವೃದ್ಧಿ, ಪಾರದರ್ಶಕತೆ,ಶಿಸ್ತು ಸರ್ಕಾರದ ಮೂಲಮಂತ್ರ

## ಜನಸೇವೆಯೇ ಆಡಳಿತದ ಧರ್ಮ; ಕರ್ತವ್ಯಲೋಪ ಸಹಿಸುವುದಿಲ್ಲ, ಮನೆ ಬಾಗಿಲಿಗೆ ಸರ್ಕಾರವನ್ನು ತಲುಪಿಸುವ ಜವಾಬ್ದಾರಿ: ಸಿಎಂ ಡಿ.ಕೆ.ಶಿವಕುಮಾರ್

**ಬೆಳಗಾವಿ, ಜು.8:** ಆಡಳಿತದಲ್ಲಿ ಶಿಸ್ತಿಗೆ ಯಾವುದೇ ರಾಜಿ ಇಲ್ಲ ಎಂದು ಎಚ್ಚರಿಸಿದ ಮುಖ್ಯಮಂತ್ರಿ, ಸಭೆಯ ಮಧ್ಯೆ ಯಾವುದೇ ಅಧಿಕಾರಿ ಮೊಬೈಲ್‌ನಲ್ಲಿ ಮಾತನಾಡುತ್ತಿರುವುದು ಕಂಡುಬಂದರೆ, ಸಭೆ ಮುಗಿಯುವ ವೇಳೆಗೆ ಅವರ ಅಮಾನತು ಆದೇಶ ಸಿದ್ಧವಾಗಿರುತ್ತದೆ. ಅಭಿವೃದ್ಧಿ, ಪಾರದರ್ಶಕತೆ ಮತ್ತು ಶಿಸ್ತು ಸರ್ಕಾರದ ಮೂಲಮಂತ್ರವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಸುವರ್ಣಸೌಧದಲ್ಲಿ ನಡೆದ ಬೆಳಗಾವಿ ವಿಭಾಗಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಆಡಳಿತದ ಕಾರ್ಯಕ್ಷಮತೆ, ಜನಸೇವೆ, ಅಭಿವೃದ್ಧಿ ಮತ್ತು ಅಧಿಕಾರಿಗಳ ಹೊಣೆಗಾರಿಕೆ ಕುರಿತು ಸ್ಪಷ್ಟ ಹಾಗೂ ಕಟ್ಟುನಿಟ್ಟಿನ ಸಂದೇಶ ನೀಡಿದರು.

ನಾವು ರಾಜಕಾರಣಿಗಳು ಐದು ವರ್ಷಕ್ಕೊಮ್ಮೆ ಜನರ ಮುಂದೆ ಹೋಗಿ ಜನಾದೇಶ ಕೇಳುತ್ತೇವೆ. ಆದರೆ ಅಧಿಕಾರಿಗಳು ಪ್ರತಿದಿನ ಜನರ ವಿಶ್ವಾಸಕ್ಕೆ ಉತ್ತರದಾಯಿಗಳಾಗಿರಬೇಕು. ಕರ್ತವ್ಯ ನಿರ್ವಹಿಸದಿರುವುದು ಕೇವಲ ಆಡಳಿತ ವೈಫಲ್ಯವಲ್ಲ, ಅದು ಜನತೆಗೆ ಮಾಡುವ ದ್ರೋಹ. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ಷೇತ್ರದಲ್ಲೇ ನೆಲೆಸಬೇಕು.

ಜನರ ಸಮಸ್ಯೆಗಳನ್ನು ಕೇಳಲು ಅಧಿಕಾರಿಗಳು ಜನರ ಬಳಿಯೇ ಇರಬೇಕು. ಸಣ್ಣ ಕೆಲಸಗಳಿಗೂ ಜನರನ್ನು ಒಂದು ಕಚೇರಿಯಿಂದ ಮತ್ತೊಂದು ಕಚೇರಿಗೆ ಅಲೆದಾಡಿಸುವ ಸಂಸ್ಕೃತಿ ಕೊನೆಗಾಣಬೇಕು. ಸಾಧ್ಯವಾದಷ್ಟು ಸಮಸ್ಯೆಗಳು ಸ್ಥಳೀಯ ಮಟ್ಟದಲ್ಲೇ ಇತ್ಯರ್ಥವಾಗಬೇಕು.

ಜಿಲ್ಲಾಮಟ್ಟದ ಅಧಿಕಾರಿಗಳು ಅಧೀನ ಅಧಿಕಾರಿಗಳ ಕಾರ್ಯಚಟುವಟಿಕೆಗಳ ಬಗ್ಗೆ ನಿತ್ಯ ಮಾಹಿತಿ ಹೊಂದಿರಬೇಕು. ಯಾವ ಸಮಸ್ಯೆ ಪರಿಹರಿಸಿದರು ಎಂಬ ದಾಖಲೆ ಪ್ರತಿದಿನ ದಾಖಲಿಸಬೇಕು. ಫೀಲ್ಡ್ ಆಡಳಿತವೇ ಉತ್ತಮ ಆಡಳಿತದ ಮಾನದಂಡ. ಜನರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಒದಗಿಸಲು ಸರ್ಕಾರ ಸ್ಥಾಪಿಸಿರುವ ಪ್ರಜಾಸೇವಾ ಇಲಾಖೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸೂಚಿಸಿದರು.



### ಇ-ಖಾತೆ ಕ್ರಾಂತಿ

ನಗರಾಭಿವೃದ್ಧಿಯಲ್ಲಿ ಯೋಜನಾಬದ್ಧತೆ ಅನಿವಾರ್ಯ ಎಂದು ಹೇಳಿದ ಡಿ.ಕೆ. ಶಿವಕುಮಾರ್, ಅವೈಜ್ಞಾನಿಕ ಬಡಾವಣೆಗಳಿಗೆ ಅವಕಾಶವಿಲ್ಲ. ನಗರಗಳು ಮತ್ತು ಪಟ್ಟಣಗಳು ಮುಂದಿನ ತಲೆಮಾರಿನ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಯೋಜನಾಬದ್ಧವಾಗಿ ಬೆಳೆಯಬೇಕು. ಸರ್ಕಾರದ ನೀತಿ ತೀರ್ಮಾನಗಳನ್ನು ಅಧಿಕಾರಿಗಳು ಅಕ್ಷರಶಃ ಜಾರಿಗೆ ತರಬೇಕು ಕಂದಾಯ ಇಲಾಖೆಯ ಇ–ಖಾತೆ ಕ್ರಾಂತಿಯನ್ನು ಉಲ್ಲೇಖಿಸಿದ ಸಿಎಂ, ಒಂದು ರೂಪಾಯಿಯೂ ವೆಚ್ಚವಿಲ್ಲದೆ ಜನರ ಮನೆ ಬಾಗಿಲಿಗೆ ಇ–ಖಾತೆ ತಲುಪಿಸುವ ವ್ಯವಸ್ಥೆ ದೇಶದಲ್ಲೇ ಮಾದರಿಯಾಗಿದೆ. ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗದೆ ರಾಜ್ಯದ ಪ್ರತಿಯೊಂದು ಜಿಲ್ಲೆಗೆ ವಿಸ್ತರಿಸಲಾಗುತ್ತಿದೆ ಎಂದು ತಿಳಿಸಿದರು.

### ಎಸ್‌ಐಆರ್‌ನಲ್ಲಿ ರಾಜಕಾರಣಕ್ಕೆ ಅವಕಾಶವಿಲ್ಲ

ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ವಿಚಾರದಲ್ಲಿ ರಾಜಕಾರಣಕ್ಕೆ ಅವಕಾಶವಿಲ್ಲ. ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನದ ಹಕ್ಕು ರಕ್ಷಿಸುವುದು ನಮ್ಮ ಜವಾಬ್ದಾರಿ. ಬಿಎಲ್‌ಒಗಳು ಪ್ರತಿಯೊಂದು ಮನೆಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಬೇಕು. ಅಗತ್ಯ ದಾಖಲೆಗಳನ್ನು ಸರ್ಕಾರವೇ ಒದಗಿಸುತ್ತದೆ. ಒಬ್ಬ ಅರ್ಹ ಮತದಾರನ ಹಕ್ಕೂ ಕಳೆದುಹೋಗಬಾರದು ಎಂದು ಡಿ.ಕೆ. ಶಿವಕುಮಾರ್ ಸೂಚಿಸಿದರು.

### ಇತರ ಪ್ರಮುಖ ಸೂಚನೆಗಳು

1. ಯುವ ಉದ್ಯೋಗ ಸೇತು' ಮೂಲಕ ಖಾಸಗಿ ಉದ್ಯೋಗಗಳಿಗೆ ಹೊಸ ಸಂಪರ್ಕ
2. ಕೆಪಿಎಸ್ ಮಾದರಿಯಲ್ಲಿ ಸಿಎಸ್‌ಆರ್ ಶಾಲೆಗಳು; ಗ್ರಾಮೀಣ ಶಿಕ್ಷಣಕ್ಕೆ ಹೊಸ ಅಧ್ಯಾಯ
3. ಪ್ರತಿ ಕ್ಷೇತ್ರದಲ್ಲಿ 10–20 ಗುಣಮಟ್ಟದ ಶಾಲೆಗಳ ಗುರಿ
4. ವಾರ್ಡ್ ಮಟ್ಟದಲ್ಲಿ ಮತದಾರರ ಸಹಾಯ ಕೇಂದ್ರಗಳ ಸ್ಥಾಪನೆ
5. 10,000 ಭಾರತ್ ಜೋಡೋ ಯುವ ಸಂಘಗಳಿಗೆ 10 ಲಕ್ಷ ರೂ. ಅನುದಾನ
6. ಸರ್ಕಾರಿ ಭೂಮಿಯ ರಾಜ್ಯವ್ಯಾಪಿ ಆಡಿಟ್; ನಿವೇಶನ ರಹಿತರಿಗೆ ನಿವೇಶನ
7. ಜನರನ್ನು ಕಚೇರಿಯಿಂದ ಕಚೇರಿಗೆ ಅಲೆದಾಡಿಸುವ ವ್ಯವಸ್ಥೆ ಅಂತ್ಯಗೊಳಿಸಿ.



ಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಳಗಾವಿಯಲ್ಲಿ ಗುರುವಾರ ದಕ್ಷಿಣ ಭಾರತ ಸಕ್ಕರೆ ಕಾರ್ಖಾನೆಗಳ ಸಂಘದ ಕರ್ನಾಟಕ ವಿಭಾಗದ ಪ್ರತಿನಿಧಿಗಳ ಜತೆ ಸಮಾಲೋಚನೆ ನಡೆಸಿದರು. ಡಿಸಿಎಂ ಪರಮೇಶ್ವರ, ಸಚಿವರಾದ ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ಯು.ಟಿ.ಖಾದರ್, ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತಿತರರು ಉಪಸ್ಥಿತರಿದ್ದರು.

# ನೀರು, ಮೇವು ಕೊರತೆಯಾಗದಂತೆ ಸೂಕ್ತ ಸಿದ್ಧತೆ ಮಾಡಿ ಕೈಗೊಳ್ಳಿ



■ ಅಧಿಕಾರಿಗಳಿಗೆ ಡಿಸಿಎಂ ಡಾ.ಜಿ. ಪರಮೇಶ್ವರ್ ಸೂಚನೆ

ಬೆಳಗಾವಿ, ಜು.9: ಉತ್ತರ ಕರ್ನಾಟಕದಲ್ಲಿ ಈ ಬಾರಿ ಮಳೆಯ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಕುಡಿಯುವ ನೀರು ಹಾಗೂ ಮೇವಿನ ಕೊರತೆಯಾಗದಂತೆ ಸೂಕ್ತ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ವಿಭಾಗಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಹೊಸ ಆಲೋಚನೆಗಳೊಂದಿಗೆ ಆಡಳಿತ ನಡೆಸಲು ಮುಖ್ಯಮಂತ್ರಿ ಹೊಂದಿರುವ ಆಶಯವನ್ನು ಅಧಿಕಾರಿಗಳು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದರು.

ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಅಭಿವೃದ್ಧಿ ಕಾಮಗಾರಿಗಳ ಜೊತೆಗೆ ಕಾನೂನು ಸುವ್ಯವಸ್ಥೆ ಕಾಪಾಡುವ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿರ್ವಹಿಸಬೇಕು. ಸಾರ್ವಜನಿಕರ ಬಳಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸಿ, ತ್ವರಿತವಾಗಿ ಪರಿಹಾರ ಕಲ್ಪಿಸುವತ್ತ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

**ಉ.ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಶೇ.17ರಷ್ಟು ಮಳೆ ಕೊರತೆ:** ಈ ವರ್ಷ ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಸರಾಸರಿ ಶೇ.17ರಷ್ಟು ಮಳೆ ಕೊರತೆ ದಾಖಲಾಗಿರುವುದರಿಂದ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಾರ್ಯಪಡೆಗಳು ನಿಯಮಿತವಾಗಿ ಸಭೆ ನಡೆಸಿ ಪರಿಸ್ಥಿತಿಯ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಬೇಕು ಎಂದು ಡಾ.ಜಿ.ಪರಮೇಶ್ವರ್ ನಿರ್ದೇಶನ ನೀಡಿದರು. ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಅಗತ್ಯವಿದ್ದಲ್ಲಿ ವಿವಿಧ ಜಲಮೂಲಗಳಿಂದ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಬೇಕು. ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗುವ ಪ್ರದೇಶಗಳಲ್ಲಿ ಮೇವಿನ ಕಿಟ್ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಮಳೆಯ ನಿಖರ ಮಾಹಿತಿಯನ್ನು ಪಡೆಯಲು ರಾಜ್ಯದ ಮಳೆಮಾಪನ ಕೇಂದ್ರಗಳನ್ನು ಆಧುನೀಕರಿಸುವ ಅಗತ್ಯವಿದ್ದು, ಅದಕ್ಕಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಜು.13ರಂದೇ ಪ್ರಮಾಣವಚನ ಕಾರ್ಯಕ್ರಮ?

■ ಸಂಪುಟ ವಿಸ್ತರಣೆ: ಜು.12ರಂದು ರಾಹುಲ್ ಭೇಟಿಗೆ ಸಮಯ ಕೋರಿದ ಡಿ.ಕೆ.ಶಿವಕುಮಾರ್

**ಬೆಂಗಳೂರು, ಜು.9:** ಸಿಎಂ ಡಿ.ಕೆ. ಶಿವಕುಮಾರ್ ಜುಲೈ 12ರಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಬಹುನಿರೀಕ್ಷಿತ ಸಚಿವ ಸಂಪುಟ ವಿಸ್ತರಣೆಗೆ ಅಂತಿಮ ಅನುಮೋದನೆ ಪಡೆಯುವ ನಿರೀಕ್ಷೆಯಿದ್ದು, ಜುಲೈ 13 ರಂದು ಪ್ರಮಾಣವಚನ ಸ್ವೀಕಾರ ಮಾಡುವ ಸಾಧ್ಯತೆಯಿದೆ ಎಂದು ಕಾಂಗ್ರೆಸ್‌ನ ಉನ್ನತ ಮೂಲಗಳಿಂದ ತಿಳಿದುಬಂದಿದೆ. ರಾಹುಲ್ ಜುಲೈ 12 ರಂದು ನವದೆಹಲಿಯಲ್ಲಿ ಲಭ್ಯವಿದ್ದು, ಸಚಿವ ಸ್ಥಾನದ ಆಕಾಂಕ್ಷಿಗಳ ಅಂತಿಮ ಪಟ್ಟಿಗೆ ಅಂಕಿತ ಪಡೆಯಲು ಡಿಕೆ ಶಿವಕುಮಾರ್ ಕಾಲಾವಕಾಶ ಕೋರಿದ್ದಾರೆ. ಪ್ರಸ್ತಾವಿತ ಪಟ್ಟಿಯನ್ನು ಹೈಕಮಾಂಡ್ ಅನುಮೋದಿಸಿದರೆ, ಹೊಸ ಸಚಿವರು ಜು.13ರಂದೇ ಪ್ರಮಾಣ ವಚನ ಸ್ವೀಕರಿಸುವ ನಿರೀಕ್ಷೆಯಿದೆ. ಜು.14 ಮತ್ತು 15ರ ಮೊದಲು ಈ ಪ್ರಕ್ರಿಯೆ ಪೂರ್ಣಗೊಳಿಸಲು ಕಾಂಗ್ರೆಸ್ ಉತ್ಸುಕವಾಗಿದೆ ಎನ್ನಲಾಗಿದೆ. ಜು.14ರಂದು ಅಮಾವಾಸ್ಯೆ ಮತ್ತು ಜು.15 ಆಷಾಢ ಮಾಸದಲ್ಲಿ ಬರುವುದರಿಂದ ನಾಯಕರು ಆ ದಿನಗಳನ್ನು ತಪ್ಪಿಸಲು ಬಯಸುತ್ತಾರೆ. ಈ ನಡುವೆ ಶಿವಕುಮಾರ್ ಅವರು ಬುಧವಾರ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಭೇಟಿಮಾಡಿ ಪ್ರಮಾಣವಚನ ಸ್ವೀಕಾರ ಸಮಾರಂಭದ ಸಂಭಾವ್ಯ ದಿನಾಂಕಗಳ ಕುರಿತು ಚರ್ಚಿಸಿದ್ದಾರೆ ಮತ್ತು ಲಭ್ಯವಿರುವಂತೆ ವಿನಂತಿಸಿಕೊಂಡಿದ್ದಾರೆ ಎನ್ನಲಾಗಿದೆ.

# ಕಾರ್ಯಾಚರಣೆ ಬೀದಿಬದಿ ವ್ಯಾಪಾರಿಗಳ ವಿರುದ್ಧವಲ್ಲ, ಸುಪ್ರೀಂ ಆದೇಶ ಪಾಲನೆಯಷ್ಟೇ

■ ಬಡವ–ಶ್ರೀಮಂತ ಎಂಬ ತಾರತಮ್ಯ ಇಲ್ಲದೆ ಪಾದಚಾರಿಗಳ ಸುರಕ್ಷತೆಗಷ್ಟೇ ಗಮನ: ಸಚಿವ ಕೃಷ್ಣಬೈರೇಗೌಡ ಸ್ಪಷ್ಟನೆ


**ಬೆಂಗಳೂರು, ಜು.9:** ನಗರದಲ್ಲಿ ನಡೆಯುತ್ತಿರುವಂತ ಬೀದಿಬದಿ ವ್ಯಾಪಾರಿಗಳ ತೆರವು ಕಾರ್ಯಾಚರಣೆಗೆ ವ್ಯಾಪಕ ಆಕ್ರೋಶ, ವಿರೋಧ ವ್ಯಕ್ತವಾಗುತ್ತಿದ್ದಂತೆ ಪ್ರತಿಕ್ರಿಯೆ ನೀಡಿರುವ ಸಚಿವ ಕೃಷ್ಣಬೈರೇಗೌಡ, ಕಾರ್ಯಾಚರಣೆ ಬೀದಿಬದಿ ವ್ಯಾಪಾರಿಗಳ ವಿರುದ್ಧವಲ್ಲ. ಕೇವಲ ಸುಪ್ರೀಂ ಕೋರ್ಟ್ ನಿರ್ದೇಶನವನ್ನು ಜಾರಿಗೊಳಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಇಂದು ಬೀದಿಬದಿ ವ್ಯಾಪಾರಿಗಳ ವಿವಿಧ ಸಂಘಟನೆಗಳ ಜತೆ ಸಭೆ ನಡೆಸಿದ್ದೇನೆ. ಸುಪ್ರೀಂ ಕೋರ್ಟ್‌ನ ನಿರ್ದೇಶನದ ಹಿನ್ನೆಲೆಯಲ್ಲಿ ಫುಟ್‌ಪಾತ್‌ನಲ್ಲಿ ಆಗಿರುವ ಒತ್ತುವರಿ ತೆರವು ಮಾಡುವ ಕೆಲಸ ನಡೆಯುತ್ತಿದೆ ಎಂದರು.

ಬೆಂಗಳೂರಲ್ಲಿ ಕಳೆದ ಮೂರು ವರ್ಷದಿಂದ 931 ಪಾದಚಾರಿಗಳು ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಜತೆಗೆ ಸುಮಾರು 3,200 ಮಂದಿ ಗಂಭೀರ ಗಾಯ ಅಲ್ಲದೆ, 3,500 ಜನ ಸಣ್ಣಪುಟ್ಟ ಗಾಯಗಳಿಗೆ ಒಳಗಾಗಿದ್ದಾರೆ. ಇದನ್ನೆಲ್ಲ ಗಮನಿಸಿರುವ ಸುಪ್ರೀಂ ಕೋರ್ಟ್ ಪಾದಚಾರಿಗಳಿಗೆ ಓಡಾಡುವಂತದ್ದು ಮೂಲಭೂತ ಹಕ್ಕು ಅದನ್ನು ಸರ್ಕಾರ ಅವರಿಗೆ ಸಿಗುವ ಹಾಗೆ ಮಾಡಿಕೊಡಬೇಕು. ಹಾಗಾಗಿ ಪಾದಚಾರಿ ಮಾರ್ಗಗಳಲ್ಲಿರುವ ಎಲ್ಲಾ ಒತ್ತುವರಿಗಳನ್ನು ತೆರವು ಮಾಡಬೇಕು ಎಂದು ನಿರ್ದೇಶಿಸಿದೆ. ಹಾಗಾಗಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದಿದ್ದಾರೆ.

**ಬೀದಿಬದಿ ವ್ಯಾಪಾರಿಗಳಿಗೆ ನೆರವು ನೀಡುವಂತೆ ಸೂಚನೆ:** ಕಾರ್ಯಾಚರಣೆಯಲ್ಲಿ ಬೀದಿಬದಿ ವ್ಯಾಪಾರಿಗಳ ಮೇಲೆ ಆಗಿರುವ ಪರಿಣಾಮಗಳ ಸಂಖ್ಯೆ ಕಡಿಮೆ. ಬೀದಿಬದಿ ವ್ಯಾಪಾರಿಗಳ ಕಾನೂನು ಪ್ರಕಾರ ನಮಗೆ ಐಡಿ ಕೊಡಬೇಕು, ವ್ಯಾಪಾರ ಮಾಡೋದಕ್ಕೆ ಜಾಗ ನಿಗದಿ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ಈ ಸಂಬಂಧ ಜಿಬಿಎ ಕಮಿಷನರ್‌ಗೆ ಸೂಚನೆ ಕೊಟ್ಟಿದ್ದೇನೆ. ತಕ್ಷಣ ಪ್ರಾವಿಷನಲ್ ಟೌನ್ ವೆಂಡಿಂಗ್ ಕಮಿಟಿ ಮಾಡಿ, ಅದರ ಮುಖಾಂತರ ಬೀದಿಬದಿ ವ್ಯಾಪಾರಿಗಳಿಗೆ ಅವರ ಜೀವನ ಬದುಕು ರೂಪಿಸಿಕೊಳ್ಳೋದಕ್ಕೆ ಅಗತ್ಯವಿರುವ ಸಹಾಯ ಮಾಡುವಂತೆ ಸೂಚಿಸಿದ್ದೇನೆ ಎಂದಿದ್ದಾರೆ. ಸುರಕ್ಷಿತ ಪಾದಚಾರಿ ಮಾರ್ಗ ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯಾಚರಣೆ ಮಾಡುತ್ತಿದ್ದೇವೆ. ಬೆಂಗಳೂರಲ್ಲಿ 15ರಿಂದ 18 ಸಾವಿರ ಕಿಲೋಮೀಟರ್ ರಸ್ತೆ ಇದೆ. ಆದರೆ ನಮ್ಮ ಗುರಿ 1,500 ಕಿಲೋಮೀಟರ್ ಮಾತ್ರ, ಅಂದರೆ ಶೇಕಡಾ 10%ರಷ್ಟು ಮಾತ್ರ ಎಂದು ಕೃಷ್ಣಬೈರೇಗೌಡ ವಿವರಿಸಿದ್ದಾರೆ.

ಸುಪ್ರೀಂ ಕೋರ್ಟ್‌ನ ಸೂಚನೆ ಅನ್ವಯ ಕಾರ್ಯಾಚರಣೆ ಮಾಡಲೇಬೇಕಾಗಿದೆ. ಬೆಂಗಳೂರು ಸುಧಾರಣೆ ಆಗಬೇಕು



ಅಂದರೆ ಸಲೀಸಾಗಿ ಯಾವುದೂ ಆಗಲ್ಲ. ಕಠಿಣ ನಿರ್ಧಾರ ಕೈಗೊಂಡಾಗ ಕೆಲವರಿಂದ ಪ್ರತಿರೋಧ ಇದ್ದೇ ಇರುತ್ತೆ. ಒಬ್ಬರಿಗೆ ಅನುಕೂಲವಾದರೆ, ಮತ್ತೊಬ್ಬರಿಗೆ ತೊಂದರೆ ಆಗುತ್ತೆ. ಇದಕ್ಕೆಲ್ಲ ಜನರ ಸಹಕಾರ ಅಗತ್ಯ. ಕೆಲವರು ಈ ವಿಷಯದಲ್ಲಿ ಬಹಳ ಅಸಹ್ಯವಾಗಿ, ಅಗೌರವವಾಗಿ ಮಾತನಾಡಿದ್ದಾರೆ. ನಿಷ್ಠುರ ಆದರೂ ಪರವಾಗಿಲ್ಲ ಸಾರ್ವಜನಿಕರ ಕೆಲಸ ಆಗಬೇಕು ಅಷ್ಟೇ. ಶ್ರೀಮಂತರು–ಬಡವರು ಅನ್ನೋ ತಾರತಮ್ಯ ಇಲ್ಲದೆ ಫುಟ್‌ಪಾತ್ ಸುರಕ್ಷತೆಗಾಗಿ ಒಂದೊಂದೇ ಕಾರ್ಯಾಚರಣೆ ಕೈಗೊಳ್ಳಲಾಗುವುದು.

–ಕೃಷ್ಣಬೈರೇಗೌಡ, ಸಚಿವ

### ಕಾರ್ಯಾಚರಣೆಯ ವಿವರ

- **1,581 ಕಡೆ ಕಟ್ಟಡಗಳ ಎದುರು ನಿರ್ಮಿಸಿದ್ದ ಮೆಟ್ಟಿಲು ಹಾಗೂ ರ್‍ಯಾಂಪ್‌ಗಳ ತೆರವು**
- **1,790 ಕಡೆ ಅಂಗಡಿ ಮುಂಭಾಗ ಶೀಟ್‌ಗಳನ್ನು ಹಾಕಿಕೊಂಡು ಶಾಶ್ವತ ನಿರ್ಮಾಣಗಳ ತೆರವು**
- **2,200 ಲೊಕೇಶನ್‌ಗಳಲ್ಲಿ ಫುಟ್‌ಪಾತ್ ಮೇಲೆ ಅಳವಡಿಸಿದ್ದ ಜಾಹೀರಾತು ಫಲಕ ಹಾಗೂ ಸೈನ್‌ಬೋರ್ಡ್‌ಗಳ ತೆರವು**

# ವ್ಯವಸ್ಥಿತ ನಿರ್ವಹಣೆಗಾಗಿ ಪ್ರತ್ಯೇಕ ಎನ್‌ಆರ್‌ಐ ಇಲಾಖೆ ಅಗತ್ಯ



**ಬೆಂಗಳೂರು, ಜು.9:** ರಾಜ್ಯ ಸರ್ಕಾರವು ಹೊಸದಾಗಿ ಎನ್‌ಆರ್‌ಐ ಇಲಾಖೆ ರಚನೆ ಸಂಬಂಧ ಸಚಿವ ಸಂಪುಟದ ಕೆಲವರಿಂದ ವಿರೋಧ ವ್ಯಕ್ತವಾಗಿದೆ ಎಂಬ ಊಹಾಪೋಹಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ ನೀಡಿದ್ದಾರೆ. ಹೊಸ ಇಲಾಖೆ ರಚನೆಗೆ ಯಾವುದೇ ವಿರೋಧವಿಲ್ಲ, ಬದಲಾಗಿ ವ್ಯವಸ್ಥಿತ ನಿರ್ವಹಣೆಗಾಗಿ ಇಂತಹದೊಂದು ಪ್ರತ್ಯೇಕ ಇಲಾಖೆಯ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

ರಾಜ್ಯದ ಅಪಾರ ಮಾನವ ಸಂಪನ್ಮೂಲ ಜಗತ್ತಿನ ಬೇರೆ ಬೇರೆ ದೇಶಗಳಲ್ಲಿ ಹರಡಿಕೊಂಡಿದೆ. ಹೊಸ ನೀತಿಗಳನ್ನು ಜಾರಿಗೆ ತಂದಾಗ ಅದು ಅನಿವಾಸಿ ಕನ್ನಡಿಗರಿಗೆ ಮತ್ತು ರಾಜ್ಯಕ್ಕೆ ಹೇಗೆ ಉಪಯೋಗವಾಗುತ್ತದೆ ಎಂಬುದನ್ನು ಸಮಗ್ರವಾಗಿ ಅಧ್ಯಯನ ಮಾಡಬೇಕಾಗುತ್ತದೆ. ಸದ್ಯ ಈ ಕಾರ್ಯಗಳು ಬೇರೆ ಬೇರೆ ಇಲಾಖೆಗಳ ಮೂಲಕ ನಡೆಯುತ್ತಿವೆ. ಆದರೆ, ಇವುಗಳನ್ನೆಲ್ಲಾ ಒಗ್ಗೂಡಿಸಿ ಸಮರ್ಥವಾಗಿ ನಿರ್ವಹಣೆ ಮಾಡಲು ಒಂದು ಪ್ರತ್ಯೇಕ ಇಲಾಖೆಯ ಅವಶ್ಯಕತೆಯಿದೆ ಎಂದು ಪ್ರಿಯಾಂಕ್ ಖರ್ಗೆ ವಿವರಿಸಿದರು.

ಯಾರ ಅಧಿಕಾರವನ್ನೂ ಕಸಿದುಕೊಳ್ಳುತ್ತಿಲ್ಲ! ಹೊಸ ಇಲಾಖೆ ರಚನೆಯಿಂದ ಬೇರೆ ಇಲಾಖೆಗಳ ಅಧಿಕಾರ ಮೊಟಕುಗೊಳ್ಳುತ್ತದೆ ಎಂಬ ಆತಂಕ ನಿವಾರಿಸಿದ ಅವರು, "ಹೊಸ ಇಲಾಖೆ ಮಾಡುವುದರಿಂದ ಯಾರ ಅಧಿಕಾರವನ್ನೂ ಕಸಿದುಕೊಳ್ಳುತ್ತಿಲ್ಲ. ಸರ್ಕಾರದ ಶಿಷ್ಟಾಚಾರ ಮತ್ತು ನೀತಿ–ನಿಯಮಗಳಿಗೆ ಸಮಸ್ಯೆ ಆಗದಂತೆ ಹೊಸ ಇಲಾಖೆಯ ರೂಪುರೇಷೆ ಸಿದ್ಧಪಡಿಸಲಾಗುತ್ತಿದೆ. ಅತ್ಯುತ್ತಮವಾದ ಕಾರ್ಯಕ್ಷಮತೆ ಹೊಂದಿರುವ ಇಲಾಖೆ ಇದಾಗಬೇಕು ಎಂಬುದು ನಮ್ಮ ಉದ್ದೇಶವಾಗಿದೆ. ಹೀಗಾಗಿಯೇ ಸರ್ಕಾರ ಎನ್‌ಆರ್‌ಐ ಇಲಾಖೆಯನ್ನು ಸ್ಥಾಪಿಸುತ್ತಿದೆ. ಒಂದು ಪ್ರತ್ಯೇಕ ಇಲಾಖೆ ಇದ್ದರೆ ಮಾತ್ರ ಈ ಯೋಜನೆಗಳು ವ್ಯವಸ್ಥಿತವಾಗಿ ಸಾಗಲು ಅನುಕೂಲವಾಗುತ್ತದೆ. ಹೀಗಾಗಿ, ಹೊಸ ಇಲಾಖೆ ರಚನೆಯ ಪ್ರಕ್ರಿಯೆ ಪ್ರಸ್ತುತ ನಡೆಯುತ್ತಿದ್ದು, ಶೀಘ್ರದಲ್ಲೇ ಇದು ಕಾರ್ಯರೂಪಕ್ಕೆ ಬರಲಿದೆ ಎಂದು ಸಚಿವರು ಭರವಸೆ ನೀಡಿದ್ದಾರೆ.

# ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಗ್ಯಾರಂಟಿಗಾಗಿ 18,410 ಕೋಟಿ ವೆಚ್ಚ: ದಿನೇಶ್ ಗೂಳಿಗೌಡ



**ಬೆಂಗಳೂರು, ಜು.9:** ಜಿಬಿಎ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ 18,410.46 ಕೋಟಿ ರೂ. ವೆಚ್ಚ ಮಾಡಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಹೇಳಿದರು.

ಜಿಬಿಎ ಬೆಂಗಳೂರು ನಗರ ವ್ಯಾಪ್ತಿಯ ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿ, ಗೃಹಲಕ್ಷ್ಮಿ ಯೋಜನೆಯಡಿ 8,86,422 ಮಹಿಳೆಯರಿಗೆ ಇದುವರೆಗೂ 4964.40 ಕೋಟಿ ರೂ. ಹಣ ಸಂದಾಯ ಮಾಡಲಾಗಿದೆ. ಪ್ರತಿ ಮಹಿಳೆಯರಿಗೆ ವೈಯಕ್ತಿಕವಾಗಿ ಇದುವರೆಗೆ 30 ಕಂತುಗಳಲ್ಲಿ ತಲಾ 60 ಸಾವಿರ ಹಣವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ. ಗೃಹಜ್ಯೋತಿ ಯೋಜನೆಯಡಿ 38,18,902 ಮನೆಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು ಇದರ 8311.42 ಕೋಟಿ ರೂ. ಹಣವನ್ನು ಬೆಸ್ಕಾಂಗೆ ಸರ್ಕಾರ ಪಾವತಿಸಿದೆ. ಶಕ್ತಿ ಯೋಜನೆಯಡಿ 235.23 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು 3586.36 ಕೋಟಿ ರೂ. ಮೊತ್ತದ ಟಿಕೆಟ್ ಹಣವನ್ನು ಸಾರಿಗೆ ನಿಗಮಕ್ಕೆ ಸರ್ಕಾರ ಭರಿಸಿದೆ. ಅನ್ನಭಾಗ್ಯ ಯೋಜನೆಯಡಿ ಫಲಾನುಭವಿಗಳಿಗೆ ಅಕ್ಕಿ ಬದಲಿಗೆ 927.13 ಕೋಟಿ ರೂ.ಹಣವನ್ನು ಡಿಬಿಟಿ ಮೂಲಕ ವರ್ಗಾಹಿಸಲಾಗಿದೆ. ಇದಲ್ಲದೇ 30,87,076 ಫಲಾನುಭವಿಗಳಿಗೆ ಆಹಾರಧಾನ್ಯವನ್ನು ಉಚಿತವಾಗಿ ನೀಡಲಾಗಿದ್ದು ಇದಕ್ಕೆ ತಗುಲಿರುವ ಆಹಾರ ಧಾನ್ಯದ ಮೊತ್ತ 568.29 ಕೋಟಿ ರೂ.ಗಳಾಗಿದೆ. ಯುವನಿಧಿ ಯೋಜನೆಯಡಿ 17,664 ನಿರುದ್ಯೋಗ ಯುವಕ ಯುವತಿಯರಿಗೆ 52.86 ಕೋಟಿ ರೂ. ಹಣವನ್ನು ನೀಡಲಾಗಿದೆ ಎಂದು ಅಂಕಿಅಂಶಗಳ ಸಮೇತ ವಿವರಿಸಿದರು.

ಮುಂಬರುವ ಜಿಬಿಎ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರದ ಸಾಧನೆಗಳು ಮತ್ತು ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿಯನ್ನು ಮನೆಮನೆಗೆ ತಲುಪಿಸುವಲ್ಲಿ ಸಮಿತಿ ಸದಸ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಗ್ಯಾರಂಟಿ ಸಮಿತಿ ಸದಸ್ಯರು ಜನರ ಅಭಿಪ್ರಾಯ ಸಂಗ್ರಹಿಸಿ ಸ್ಥಳೀಯ ಮಟ್ಟದಲ್ಲಿ ಜನಸಂಪರ್ಕ ಇಟ್ಟುಕೊಳ್ಳಬೇಕು. ಗ್ಯಾರಂಟಿ ಯೋಜನೆಗಳ ಪ್ರಚಾರವನ್ನು ಮತ್ತಷ್ಟು ಪರಿಣಾಮಕಾರಿಯಾಗಿಸಲು ಫಲಾನುಭವಿಗಳ ಅನಿಸಿಕೆ ಮತ್ತು ಅನುಭವದ ವಿಡಿಯೊಗಳನ್ನು ಸಂಗ್ರಹಿಸಿ ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರ ಮಾಡಬೇಕು ಎಂದರು.

### ಜನಜಾಗೃತಿ ಮೂಡಿಸಿ: ರೇವಣ್ಣ

**ವಾರ್ಡ್, ಬೂತ್ ಮಟ್ಟದಲ್ಲಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಜನಜಾಗೃತಿ ಮೂಡಿಸುವುದು, ಫಲಾನುಭವಿಗಳೊಂದಿಗೆ ನಿರಂತರ ಸಂಪರ್ಕ ಸಾಧಿಸುವಲ್ಲಿ ಜಿಬಿಎ ಮಟ್ಟದ ಗ್ಯಾರಂಟಿ ಸಮಿತಿ ಸದಸ್ಯರು ಹೆಚ್ಚು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ.ರೇವಣ್ಣ ಕರೆ ನೀಡಿದರು. ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ರಚಿಸಲಾಗಿರುವ ಸಮಿತಿಗಳಿಗೆ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವುದು, ಮಾಹಿತಿ, ಶಿಕ್ಷಣ, ಸಂವಹನ ಕಾರ್ಯಕ್ರಮಗಳನ್ನು ಆಯೋಜಿಸುವುದು ಹಾಗೂ ಫಲಾನುಭವಿಗಳ ಸಮಸ್ಯೆಗಳಿಗೆ ಸ್ಪಂದಿಸುವ ಜವಾಬ್ದಾರಿ ಸಮಿತಿ ಸದಸ್ಯರ ಮೇಲಿದೆ ಎಂದರು. ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಬರುವ 28 ವಿಧಾನಸಭಾ ಕ್ಷೇತ್ರದ ಗ್ಯಾರಂಟಿ ಸಮಿತಿ ಅಧ್ಯಕ್ಷರೊಂದಿಗೆ ಪ್ರಗತಿ ಪರಿಶೀಲನೆ ಸಭೆ ನಡೆಸಿದರು.**

# ಅರ್ಹ ಮತದಾರರ ಹೆಸರು ಕೈತಪ್ಪದಂತೆ ಕಾರ್ಯನಿರ್ವಹಿಸಿ: ದಿನೇಶ್ ಗೂಳಿಗೌಡ

### ಕೆ.ಆರ್.ಪೇಟೆ, ಮೇಲುಕೋಟೆ ಕ್ಷೇತ್ರದಲ್ಲಿ ಎಸ್‌ಐಆರ್ ಕುರಿತು ಬಿಎಲ್‌ಎಗಳ ಸಭೆ

**ಕೆ.ಆರ್.ಪೇಟೆ/ಮೇಲುಕೋಟೆ:** ಎಸ್ ಐಆರ್ ಪ್ರಕ್ರಿಯೆಯನ್ನು ಕಾಂಗ್ರೆಸ್ ಪಕ್ಷ ಬಹಳ ಗಂಭೀರವಾಗಿ ಪರಿಗಣಿಸಿದೆ. ಬಿಹಾರ, ಅಸ್ಸಾಂ ಹಾಗೂ ಪಶ್ಚಿಮ ಬಂಗಾಳ ರಾಜ್ಯಗಳಲ್ಲಿ ಆದ ಅನ್ಯಾಯ ಕರ್ನಾಟಕದಲ್ಲಿ ಆಗದಂತೆ ಕಾಂಗ್ರೆಸ್ ನಿಗಾ ವಹಿಸುತ್ತಿದೆ. ಯಾವುದೇ ಅರ್ಹ ಮತದಾರರ ಹೆಸರು ಕೈತಪ್ಪದಂತೆ ಬಿಎಲ್‌ಎಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಮಂಡ್ಯ ಜಿಲ್ಲೆಯ ಎಸ್ ಐಆರ್ ಉಸ್ತುವಾರಿ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

ಕೆ.ಆರ್.ಪೇಟೆ ಮತ್ತು ಮೇಲುಕೋಟೆ ಕ್ಷೇತ್ರಗಳಲ್ಲಿ ಎಸ್‌ಐಆರ್ ಕುರಿತು ಬಿಎಲ್‌ಎಗಳ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಸಾಗುತ್ತಿದೆ.

ಸಾರ್ವಜನಿಕರು ಈ ಪ್ರಕ್ರಿಯೆಗೆ ಸಂಪೂರ್ಣ ಸಹಕಾರ ನೀಡುವ ಮೂಲಕ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಅಭಿಯಾನವನ್ನು ಯಶಸ್ವಿಗೊಳಿಸುವ ಜವಾಬ್ದಾರಿ ಪ್ರತಿಯೊಬ್ಬ ಬಿಎಲ್‌ಎ ಮೇಲಿದೆ ಎಂದು ತಿಳಿಸಿದರು.

ಮರಣ ಹೊಂದಿರುವವರು ಹಾಗೂ ವಿಳಾಸ ಬದಲಾವಣೆ ಮಾಡಿಕೊಂಡಿರುವವರ ವಿವರಗಳನ್ನು ಪರಿಷ್ಕರಿಸುವ ಜತೆಗೆ, 18 ವರ್ಷ ಪೂರ್ಣಗೊಳಿಸಿರುವ ಪ್ರತಿ ಯುವಕ–ಯುವತಿಯ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸುವ ಜವಾಬ್ದಾರಿ ಬಿಎಲ್ ಎಗಳ ಮೇಲಿದೆ. ಯಾವುದೇ ಅರ್ಹ ಮತದಾರರ ಹೆಸರು ಕೈತಪ್ಪದಂತೆ ಅಧಿಕಾರಿಗಳು ಮತ್ತು ಬಿಎಲ್‌ಎಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕರೆಕೊಟ್ಟರು.

ಮಾಜಿ ಶಾಸಕ ಹಾಗೂ ಎಸ್‌ಐಆರ್ ಉಸ್ತುವಾರಿ ಜಿ.ಎನ್.ನಂಜುಂಡಸ್ವಾಮಿ ಮಾತನಾಡಿ, ಈಗಾಗಲೇ 13 ರಾಜ್ಯಗಳಲ್ಲಿ ಎಸ್‌ಐಆರ್ ಪೂರ್ಣಗೊಂಡಿದ್ದು, ಕರ್ನಾಟಕ ಸೇರಿ 16 ರಾಜ್ಯಗಳಲ್ಲಿ ಪ್ರಕ್ರಿಯೆ ನಡೆಯುತ್ತಿದೆ. ಬಿಹಾರ, ಅಸ್ಸಾಂ ಹಾಗೂ ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ನಂತರ ಅನೇಕ ಕ್ಷೇತ್ರಗಳ ಫಲಿತಾಂಶಗಳು 2ರಿಂದ 3 ಸಾವಿರ ಮತಗಳ ಅಂತರದಲ್ಲಿ ನಿರ್ಧಾರವಾಗಿವೆ. ಪಶ್ಚಿಮ ಬಂಗಾಳದಲ್ಲಿ ಉಂಟಾದ ಪರಿಸ್ಥಿತಿ ಕರ್ನಾಟಕದಲ್ಲಿ ಮರುಕಳಿಸದಂತೆ ಎಚ್ಚರ ವಹಿಸಬೇಕಿದೆ. ಕೆಲವು ರಾಜ್ಯಗಳಲ್ಲಿ ಆಗಿರುವಂತೆ ಕರ್ನಾಟಕದಲ್ಲಿ ಮತದಾರರ ಹೆಸರು ಕೈಬಿಡದಂತೆ ಪಕ್ಷ ಎಚ್ಚರಿಕೆ ನಡೆ ಇಟ್ಟಿದೆ ಎಂದರು.

ಸಭೆಯಲ್ಲಿ ಮಾಜಿ ಶಾಸಕರುಗಳಾದ ಕೆ.ಬಿ.ಚಂದ್ರಶೇಖರ್, ಬಿ.ಎಲ್.ದೇವರಾಜ್, ಪ್ರಕಾಶ್, ರಾಜ್ಯ ಕೈಮಗ್ಗ ನಿಗಮದ ಅಧ್ಯಕ್ಷ ನಾಗೇಂದ್ರ ಕುಮಾರ್, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಕುಮಾರ್ ಹಾಗೂ ಹಲವು ಮುಖಂಡರು ಉಪಸ್ಥಿತರಿದ್ದರು.

# ರಾಮಮಂದಿರದಲ್ಲಿ ಹುಂಡಿ ಹಣ ಕಳ್ಳತನ ತಪ್ಪೊಪ್ಪಿಕೊಂಡ ನಾಲ್ವರು ಆರೋಪಿಗಳು

**ಲಖನೌ,ಜು.9:** ಅಯೋಧ್ಯೆಯ ಶ್ರೀರಾಮ ಮಂದಿರಾದಲ್ಲಿ ಹುಂಡಿ ಹಣ ಕಳ್ಳತನ ಮಾಡಿ ಸಿಕ್ಕಿಬಿದ್ದಿದ್ದ ಎಂಟು ಮಂದಿ ಆರೋಪಿಗಳ ಪೈಕಿ ನಾಲ್ವರು ಆರೋಪಿಗಳು ತಪ್ಪೊಪ್ಪಿಕೊಂಡಿದ್ದಾರೆ. ಕೋರ್ಟ್ ಅನುಮತಿ ಮೇರೆಗೆ ಆರೋಪಿಗಳಾದ ಅನುಕಲ್ಪ್ ಮಿಶ್ರಾ, ಲುವ್ಕುಶ್ ಮಿಶ್ರಾ ಮತ್ತು ಕರುಣೇಶ್ ಪಾಂಡೆಯನ್ನು ಪೊಲೀಸರು ವಿಚಾರಣೆ ನಡೆಸಿದರು. ವಿಚಾರಣೆ ವೇಳೆ ಮೂವರು ಆರೋಪಿಗಳ ಹಣ ಹೇಗೆ ಕಳ್ಳತನ ಮಾಡಲಾಗಿತ್ತು ಎಂದು ವಿವರಿಸಿದ್ದಾರೆ.

ಇದಕ್ಕೂ ಮುನ್ನ ಅವಿನಾಶ್ ಶುಕ್ಲಾ ಕೂಡಾ ತಪ್ಪೊಪ್ಪಿಕೊಂಡಿದ್ದ, ಟಿನ್ನು ಯಾದವ್ ಜೊತೆಗೆ ಸೇರಿ ಕೋಟಿ ಕೋಟಿ ಹಣ ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದ ಇದರ ಬೆನ್ನಲ್ಲೇ ಅನುಕಲ್ಪ್ ಮಿಶ್ರಾ, ಲವಕುಶ್ ಮಿಶ್ರಾ ಮತ್ತು ಕರುಣೇಶ್ ಪಾಂಡೆ ಕೂಡಾ ಕಳ್ಳತನವನ್ನು ಒಪ್ಪಿಕೊಂಡಿದ್ದಾರೆ.

ಹಣ ಕಳ್ಳತನ ಮಾಡಿದ್ದ ಆರೋಪಿಗಳು ಹಣ ಮೂಲವನ್ನು ತೋರಿಸಲು ಸ್ನೇಹಿತರು, ಕುಟುಂಬಸ್ಥರಿಗೆ ಕ್ಯಾಶ್ ನೀಡುತ್ತಿದ್ದರು. ಈ ಹಣವನ್ನು ಅವರ ಖಾತೆಗೆ ಹಾಕಿ ಬಳಿಕ ತಮ್ಮ ಖಾತೆಗೆ ವರ್ಗಾಯಿಸುತ್ತಿದ್ದರು. ಟಿನ್ನು




ಯಾದವ್ ಬಳಿಕ ಎಣಿಕೆ ಕೇಂದ್ರದ ಕೀ ಇತ್ತು, ಹಣ ಕಳ್ಳತನಕ್ಕೆ ಮೇಲ್ವಿಚಾರಣೆಯಲ್ಲಿದ್ದ ಸುಭಾಶ್ ಸಹಕರಿಸುತ್ತಿದ್ದರು. ಕದ್ದ ಹಣವನ್ನು ಸಂಬಂಧಿಕರಿಗೆ ನೀಡುತ್ತಿದ್ದೇವು, ಬಳಿಕ ಅವರ ಖಾತೆಗಳ ಮೂಲಕ ಇತರರ ಖಾತೆಗಳಿಗೆ ವರ್ಗಾವಣೆ ಮಾಡಲಾಗುತ್ತಿತ್ತು ಹಣದ ಮೂಲ ಬದಲಿಸಲು ವ್ಯವಸ್ಥಿತವಾಗಿ ಈ ಪ್ಲ್ಯಾನ್ ಮಾಡಲಾಗಿತ್ತು ಎಂದು ಆರೋಪಿಗಳು ಹೇಳಿದ್ದಾರೆ.

### ನಕಲಿ ರಸೀದಿಗಳನ್ನು ಮುದ್ರಣ

ತನಿಖೆಯ ಸಮಯದಲ್ಲಿ ಆರೋಪಿಗಳಿಂದ ನಕಲಿ ರಸೀದಿಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ತನಿಖೆಯಲ್ಲಿನಕಲಿ ರಸೀದಿ ಮುದ್ರಿಸಿದ್ದು ಒಪ್ಪಿಕೊಂಡಿದ್ದು ದೇಣಿಗೆ ನೀಡುವ ಭಕ್ತರಿಗೆ ನಕಲಿ ರಸೀದಿ ನೀಡಿ ಹಣವನ್ನು ಜೇಬಿಗಿಳಿಸಿಕೊಳ್ಳುತ್ತಿದ್ದರು ಎಂದು ಒಪ್ಪಿಕೊಂಡಿದ್ದಾರೆ.

ಆರೋಪಿಗಳಿಂದ ಮಾಹಿತಿ ಪಡೆದಿರುವ ಪೊಲೀಸರು ಈಗ ಆರೋಪಿಗಳ ಕುಟುಂಬಸ್ಥರು ಹಾಗೂ ಸ್ನೇಹಿತರ ಖಾತೆಗಳನ್ನು ಫ್ರೀಜ್ ಮಾಡಿದ್ದಾರೆ. ಈ ಖಾತೆಗಳ ಹಣ ವರ್ಗಾವಣೆಗಳ ಬಗ್ಗೆ ಸಂಪೂರ್ಣ ಮಾಹಿತಿ ಕಲೆ ಹಾಕಿದ್ದು ಇದರಲ್ಲಿ ಆದಾಯ ಮೀರಿದ ವಹಿವಾಟುಗಳು ನಡೆದಿರುವುದು ಪತ್ತೆಯಾಗಿದೆ.ಹೀಗಾಗೀ ಈ ಖಾತೆಗಳನ್ನು ಪೊಲೀಸರು ಸಾಕ್ಷ್ಯವಾಗಿ ಬಳಸಿಕೊಳ್ಳಲು ನಿರ್ಧರಿಸಿದ್ದಾರೆ.

### ಮುರಿದುಬಿದ್ದ ಅವಿನಾಶ್ ಮಿಶ್ರಾ ಮದುವೆ

ಹಣ ಕಳ್ಳತನ ಆರೋಪದಲ್ಲಿ ಜೈಲಿ ಸೇರಿರುವ ಆರೋಪಿ ಅವಿನಾಶ್ ಮಿಶ್ರಾ ಮದುವೆ ಮುರಿದು ಬಿದ್ದಿದೆ.. ಈ ಹಿಂದೆ ಆತನ ಮದುವೆ ನಿಶ್ಚಯವಾಗಿತ್ತು.. ಯುವತಿಗೆ ಕದ್ದ ಹಣದಲ್ಲಿ ಐಫೋನ್ ಗಿಫ್ಟ್ ಮಾಡಿದ್ದ, ಹಾಗೂ ಎರಡು ಲಕ್ಷಕ್ಕೂ ಅಧಿಕ ಹಣ ಆಕೆಯ ಖಾತೆಗೆ ವರ್ಗಾವಣೆ ಮಾಡಿದ್ದ ಈ ಹಿನ್ನಲೆ ಯುವತಿಯನ್ನು ವಿಚಾರಣೆಗೆ ಒಳಪಡಿಸಲಾಗಿತ್ತು ಈ ಬೆಳವಣಿಗೆ ಬೆನ್ನಲ್ಲೇ ಯುವತಿಯ ಕುಟುಂಬಸ್ಥರು ಮದುವೆ ಮುರಿಯಲು ನಿರ್ಧರಿಸಿದ್ದಾರೆ ಎಂದು ಮೂಲಗಳು ಹೇಳಿವೆ.

# ಟಿಎಂಸಿ ಶಾಂತಿಯುತ ಪ್ರತಿಭಟನೆ ಮೇಲೆ ಬಿಜೆಪಿ ಕಾರ್ಯಕರ್ತರ ದಾಳಿ



**ಕೋಲ್ಕತ್ತಾ, ಜು.9:** ಪಶ್ಚಿಮ ಬಂಗಾಳದಲ್ಲಿ ಇತ್ತೀಚೆಗೆ ಬಿಜೆಪಿ ಅಧಿಕಾರಕ್ಕೇರಿದೆ. ಅದಾದ ಬಳಿಕ ರಾಜಕೀಯ ಸಂಘರ್ಷ ತಾರಕಕ್ಕೇರಿದೆ. ರಾಜ್ಯದಲ್ಲಿ ಮುಖ್ಯ ವಿರೋಧ ಪಕ್ಷವಾಗಿರುವ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಶಾಂತಿಯುತವಾಗಿ ಪ್ರತಿಭಟನೆ ನಡೆಸಲೂ ಅವಕಾಶ ಇಲ್ಲದಂತಾಗಿದೆ. ಇತ್ತೀಚೆಗೆ ಟಿಎಂಸಿ ಆಯೋಜಿಸಿದ್ದ ಪ್ರತಿಭಟನಾ ಮೆರವಣಿಗೆಯ ಮೇಲೆ ಆಡಳಿತಾರೂಢ ಬಿಜೆಪಿ ಕಾರ್ಯಕರ್ತರು ಭಾರಿ ದಾಳಿ ನಡೆಸಿದ್ದಾರೆ.

ಬಾರೂಯಿಪುರದಲ್ಲಿ ನಡೆದ ಅಪ್ರಾಪ್ತೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು ಖಂಡಿಸಿ ಕಲ್ಕತ್ತಾ ಹೈಕೋರ್ಟ್ ಅನುಮತಿ ಪಡೆದು ಟಿಎಂಸಿ ಕೋಲ್ಕತಾದಲ್ಲಿ ರ್‍ಯಾಲಿ ಹಮ್ಮಿಕೊಂಡಿತ್ತು. ಆದರೆ ಈ ರ್‍ಯಾಲಿ ವೇಳೆ ಬಿಜೆಪಿ ಕಾರ್ಯಕರ್ತರು ಟಿಎಂಸಿ ಕಾರ್ಯಕರ್ತರ ಮೇಲೆ ದಾಳಿ ನಡೆಸಿದ್ದು, ಹಿಂಸಾಚಾರ ಭುಗಿಲೆದ್ದಿದೆ.

ದಕ್ಷಿಣ ಕೋಲ್ಕತಾದ ಬಾಲಿಗಂಜ್ನಿಂದ ಹಜ್ರಾ ಕ್ರಾಸಿಂಗ್ವರೆಗೆ ಶಾಂತಿಯುತ ಮೆರವಣಿಗೆಯ ಹಮ್ಮಿಕೊಳ್ಳಲಾಗಿತ್ತು. ಆದರೆ ಮಾರ್ಗದುದ್ದಕ್ಕೂ ಬಿಜೆಪಿ ಕಾರ್ಯಕರ್ತರು ಅಡ್ಡಿಪಡಿಸಿದರು. ಪ್ರತಿಭಟನಾಕಾರರ ದಾರಿಗೆ ಮಾನವ ಸರಪಳಿ ನಿರ್ಮಿಸಿ ಅಡ್ಡಿಪಡಿಸಿದ ಬಿಜೆಪಿ ಕಾರ್ಯಕರ್ತರು, ಟಿಎಂಸಿ ವಿರುದ್ಧ ಘೋಷಣೆಗಳನ್ನು ಕೂಗಿದ್ದಾರೆ. ಇದು ಉಭಯ ಪಕ್ಷಗಳ ನಡುವೆ ತೀವ್ರ ಕೈಕೈ ಮಿಲಾಯಿಸುವಿಕೆಗೆ ಕಾರಣವಾಯಿತು.

ಈ ಘಟನೆಯಲ್ಲಿ ಮಹಿಳಾ ಕಾರ್ಯಕರ್ತೆಯರೂ ಸೇರಿದಂತೆ ಕನಿಷ್ಠ 41 ಟಿಎಂಸಿ ಕಾರ್ಯಕರ್ತರು ತೀವ್ರವಾಗಿ ಗಾಯಗೊಂಡಿದ್ದು, ಅವರನ್ನು ಎಸ್ಎಸ್ಕೆಎಂ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಗೊಂಡವರಲ್ಲಿ ಹಲವರ ಸ್ಥಿತಿ ಗಂಭೀರವಾಗಿದೆ ಎಂದು ವರದಿಯಾಗಿದೆ.

ಈ ಹಿಂಸಾಚಾರದ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಟಿಎಂಸಿ ಮುಖ್ಯಸ್ಥೆ ಹಾಗೂ ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ?ಕೋರ್ಟ್ ಅನುಮತಿ ಪಡೆದು ನಡೆಸುತ್ತಿದ್ದ ರ್‍ಯಾಲಿಯ ಮೇಲೆಯೇ ಬಿಜೆಪಿ ಗೂಂಡಾಗಳು ವ್ಯವಸ್ಥಿತವಾಗಿ ದಾಳಿ ನಡೆಸಿದ್ದಾರೆ? ಎಂದು ನೇರ ಆರೋಪ ಮಾಡಿದ್ದಾರೆ.

ನಮ್ಮ ಮಹಿಳಾ ಕಾರ್ಯಕರ್ತೆಯರ ಮೇಲೆ ಹಲ್ಲೆ ನಡೆಯುತ್ತಿದ್ದರೂ, ರಕ್ತಸಿಕ್ತವಾಗಿ ಕಾರ್ಯಕರ್ತರು ಬೀಳುತ್ತಿದ್ದರೂ ಪೊಲೀಸರು ಮೂಕಸಾಕ್ಷಿಗಳಾಗಿ ನಿಂತಿದ್ದರು. ಶಾಂತಿ ಸುವ್ಯವಸ್ಥೆ ಕಾಪಾಡಬೇಕಾದ ಪೊಲೀಸರು ಬಿಜೆಪಿ ಕಾರ್ಯಕರ್ತರಂತೆ ವರ್ತಿಸುತ್ತಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ನಾಶವಾಗಿದೆ, ಎಂದು ಆಕ್ರೋಶ ಹೊರಹಾಕಿದ್ದಾರೆ.

ಇದರೊಂದಿಗೆ, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಕೇವಲ ಎರಡು ತಿಂಗಳಲ್ಲೇ ಮಹಿಳೆಯರ ಮೇಲಿನ ದೌರ್ಜನ್ಯಗಳು ಹೆಚ್ಚಾಗಿದ್ದು, ಗೂಂಡಾರಾಜ್ ತಲೆದೋರಿದೆ ಎಂದು ವಿಪಕ್ಷಗಳು ಜರೆದಿವೆ. ಮತ್ತೊಂದೆಡೆ, ಪ್ರತಿಭಟನೆಗಳನ್ನು ಹತ್ತಿಕ್ಕಲು ಇತ್ತೀಚೆಗೆ ಮಂಡಿಸಲಾದ ಸಾರ್ವಜನಿಕ ಸುರಕ್ಷತಾ ಮಸೂದೆ 2026 ನಾಗರಿಕರ ಹಕ್ಕುಗಳನ್ನು ಕಸಿಯುವ ಪ್ರಯತ್ನ ಎಂದು ಕಳವಳ ವ್ಯಕ್ತಪಡಿಸಿದೆ.

# ಅನುಕಂಪದ ನೌಕರಿಗಾಗಿ ಹೆತ್ತ ತಾಯಿಯನ್ನೆ ಕೊಲ್ಲಿಸಿದ ಪುತ್ರಿ

**ಜೈಪುರ, ಜು. 9:** ರಾಜಸ್ಥಾನದ ಜೈಪುರದಲ್ಲಿ ಇತ್ತೀಚೆಗೆ ನಡೆದಿದ್ದ ರಸ್ತೆ ಅಪಘಾತವೊಂದು ವಾಸ್ತವದಲ್ಲಿ ಪೂರ್ವಯೋಜಿತ ಕೊಲೆ ಎಂಬುದು ಪೊಲೀಸ್ ತನಿಖೆಯಿಂದ ಬಯಲಾಗಿದೆ. ಅನುಕಂಪದ ಆಧಾರದ ಮೇಲಿನ ಸರ್ಕಾರಿ ಉದ್ಯೋಗ ಹಾಗೂ ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿಯ ಆಸೆಗಾಗಿ ಮಗಳೇ ಸುಪಾರಿ ಹಂತಕರಿಗೆ ಹಣ ನೀಡಿ, ಹೆತ್ತ ತಾಯಿಯನ್ನು ಕಾರು ಹತ್ತಿಸಿ ಕೊಲೆ ಮಾಡಿಸಿರುವ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ.

ಮೃತ ಮಹಿಳೆಯನ್ನು ನೀರಜ್ ಶರ್ಮಾ ಎಂದು ಗುರುತಿಸಲಾಗಿದೆ. ಇವರು ತಮ್ಮ ಮಗಳು ಆಯುಷಿ ಶರ್ಮಾ (24) ಹಾಗೂ 16 ವರ್ಷದ ಬುದ್ಧಿಮಾಂದ್ಯ ಮಗನೊಂದಿಗೆ ಜೈಪುರದ ಏರ್ಪೋರ್ಟ್ ಕಾಲೋನಿಯಲ್ಲಿ ವಾಸವಿದ್ದರು. ನೀರಜ್ ಅವರ ಪತಿ ವಿಜಯ್ ಶರ್ಮಾ ಜೈಪುರ ನ್ಯಾಯಾಲಯದಲ್ಲಿ ಎಲ್ಡಿಸಿ ಆಗಿ ಕೆಲಸ ಮಾಡುತ್ತಿದ್ದರು. ಒಂದು ವರ್ಷದ ಹಿಂದೆ ವಿಜಯ್ ಶರ್ಮಾ ಮೃತಪಟ್ಟ ಬಳಿಕ, ಆ ನೌಕರಿಯನ್ನು ಅನುಕಂಪದ ಆಧಾರದ ಮೇಲೆ ನೀರಜ್ ಶರ್ಮಾ ಅವರಿಗೆ ನೀಡಲಾಗಿತ್ತು. ಆದರೆ, ಎಲ್ಎಲ್ಬಿ ವ್ಯಾಸಂಗ ಮಾಡುತ್ತಿದ್ದ ಪುತ್ರಿ ಆಯುಷಿಗೆ ಆ ನೌಕರಿ ತನಗೆ ಬೇಕೆಂಬ ಹಂಬಲವಿತ್ತು. ತಾಯಿ ಆ ಕೆಲಸವನ್ನು ಒಪ್ಪಿಕೊಂಡಿದ್ದು ಇಬ್ಬರ ನಡುವಿನ ವೈಷಮ್ಯಕ್ಕೆ ಕಾರಣವಾಗಿತ್ತು.

ತಾಯಿಯನ್ನು ಹತ್ಯೆಗೈದು ಆಸ್ತಿ ಹಾಗೂ ಸರ್ಕಾರಿ ನೌಕರಿಯನ್ನು ತನ್ನದಾಗಿಸಿಕೊಳ್ಳಲು ಆಯುಷಿ ಸಂಚು ರೂಪಿಸಿದ್ದಳು. ಇದಕ್ಕಾಗಿ ಆಕೆ ತನ್ನ ಚಿಕ್ಕಪ್ಪನ ಮಗ ಬಲರಾಮ್ ಮತ್ತು ಆತನ ತಂದೆ ಮೋಹನ್ ಶರ್ಮಾ ಅವರೊಂದಿಗೆ ಸೇರಿ ಯೋಜನೆ ಸಿದ್ಧಪಡಿಸಿದ್ದಳು. ಈ ಕೃತ್ಯಕ್ಕೆ ಸಹಾಯ ಮಾಡಿದರೆ ಆಗ್ರಾ ರಸ್ತೆಯಲ್ಲಿರುವ 5 ಕೋಟಿ ರೂ. ಬೆಲೆಬಾಳುವ ಜಮೀನು ಮತ್ತು ಭರತ್ಪುರದಲ್ಲಿರುವ ಸುಮಾರು 5 ಕೋಟಿ



ರೂ. ಮೌಲ್ಯದ ಜಮೀನನ್ನು ನೀಡುವುದಾಗಿ ಆಕೆ ಬಲರಾಮ್ಗೆ ಆಮಿಷ ಒಡ್ಡಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.

ತಾಯಿಯನ್ನು ವಾಹನ ಹತ್ತಿಸಿ ರಸ್ತೆ ಅಪಘಾತದಂತೆ ಬಿಂಬಿಸಲು ಆರೋಪಿಗಳು ನಿರ್ಧರಿಸಿದ್ದರು. ಹತ್ಯೆಗೂ ಒಂದು ತಿಂಗಳ ಮೊದಲು, ಹೇಮಂತ್ ಶರ್ಮಾ ಎಂಬಾತನ ಮೂಲಕ ?ಥಾರ್? ಎಸ್ಯುವಿ ವಾಹನವನ್ನು ನೀರಜ್ ಅವರ ಮೇಲೆ ಹತ್ತಿಸಲು ಯತ್ನಿಸಲಾಗಿತ್ತು. ಈ ವೇಳೆ ಅವರು ಪ್ರಾಣಾಪಾಯದಿಂದ ಪಾರಾಗಿದ್ದರು. ಇದರಿಂದ ಎಚ್ಚೆತ್ತುಕೊಂಡ ನೀರಜ್, ಮನೆಯಿಂದ ಆಚೆ ಹೋಗುವುದನ್ನು ಕಡಿಮೆ ಮಾಡಿದ್ದರಲ್ಲದೆ, ತಮ್ಮ ಮನೆಯ ಸುತ್ತ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿಕೊಂಡಿದ್ದರು.

ಮೊದಲ ಯತ್ನ ವಿಫಲವಾದ ಬಳಿಕ, ಹೇಮಂತ್ ಶರ್ಮಾನಿಗೆ 7 ಲಕ್ಷ ರೂ.ಗಳ ಸುಪಾರಿ ನೀಡಲಾಗಿತ್ತು. ಆತ 35,000 ರೂ. ಕೊಟ್ಟು ಹರಿಯಾಣ ನೋಂದಣಿಯ ಸ್ಕಾರ್ಪಿಯೋ ಕಾರನ್ನು ಬಾಡಿಗೆಗೆ ಪಡೆದು, ಆಕಾಶ್ ಮತ್ತು ಅರವಿಂದ್ ಎಂಬುವವರಿಗೆ ಕೃತ್ಯ ಎಸಗುವ ಜವಾಬ್ದಾರಿ ವಹಿಸಿದ್ದನು. ಜುಲೈ 4 ರಂದು, ನೀರಜ್ ಅವರು ತಮ್ಮ ಬುದ್ಧಿಮಾಂದ್ಯ ಮಗನ ಫಿಸಿಯೋಥೆರಪಿ ಚಿಕಿತ್ಸೆ ಮುಗಿಸಿ ಮನೆಗೆ ಮರಳುತ್ತಿದ್ದಾಗ, ಆಯುಷಿ ಕರೆ ಮಾಡಿ ತುರ್ತು ಕೆಲಸವಿದೆ ಎಂದು ಬೇಗನೆ ಮನೆಗೆ ಬರುವಂತೆ ತಾಯಿಗೆ ತಿಳಿಸಿದ್ದಳು.

ಅವರು 60 ಅಡಿ ಅಗಲದ ರಸ್ತೆಯ ತೀರಾ ಬದಿಯಲ್ಲಿ ನಡೆದುಕೊಂಡು ಬರುತ್ತಿದ್ದಾಗ, 100 ಕಿ.ಮೀ.ಗೂ ಅಧಿಕ ವೇಗದಲ್ಲಿ ಬಂದ ಸ್ಕಾರ್ಪಿಯೋ ಕಾರು ಉದ್ದೇಶಪೂರ್ವಕವಾಗಿ ಅವರಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಸುಮಾರು 100 ಮೀಟರ್ ದೂರಕ್ಕೆ ಎಸೆಯಲ್ಪಟ್ಟ ನೀರಜ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸಾವು ರಸ್ತೆ ಅಪಘಾತದಿಂದ ಸಂಭವಿಸಿದೆ ಎಂದು ನಂಬಿಸಲು ಆಯುಷಿ ಯತ್ನಿಸಿದ್ದಳು. ಆದರೆ, ಆಕೆಯ ವರ್ತನೆಯ ಬಗ್ಗೆ ಮೊದಲೇ ಅನುಮಾನಗೊಂಡಿದ್ದ ನೀರಜ್ ಅವರ ಸಹೋದರ, ಅಪಘಾತದ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಪೊಲೀಸರಿಗೆ ಮನವಿ ಮಾಡಿದ್ದರು. ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ, ವಾಹನ ಸಂಚಾರವಿಲ್ಲದ ಖಾಲಿ ರಸ್ತೆಯ ಬದಿಯಲ್ಲಿ ನಡೆದು ಹೋಗುತ್ತಿದ್ದ ಮಹಿಳೆಗೆ ಉದ್ದೇಶಪೂರ್ವಕವಾಗಿ ಕಾರು ಡಿಕ್ಕಿ ಹೊಡೆಸಿರುವುದು ಸ್ಪಷ್ಟವಾಗಿದೆ. ಕಾರು ಬಾಡಿಗೆಗೆ ಪಡೆದಿದ್ದ ಹೇಮಂತ್ ಶರ್ಮಾನನ್ನು ವಿಚಾರಣೆಗೊಳಪಡಿಸಿದಾಗ ಆತ ಮೋಹನ್ ಶರ್ಮಾ ಹೆಸರು ಬಾಯ್ಬಿಟ್ಟಿದ್ದಾನೆ. ಈ ಆಧಾರದ ಮೇಲೆ ಆಯುಷಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಕೊಲೆಯ ಸಂಪೂರ್ಣ ರಹಸ್ಯ ಬಯಲಾಗಿದೆ.

ತಾನು ಎಸಗಿದ ಕೃತ್ಯದ ಬಗ್ಗೆ ಆಯುಷಿ ವಿಚಾರಣೆ ವೇಳೆ ಯಾವುದೇ ಪಶ್ಚಾತ್ತಾಪ ವ್ಯಕ್ತಪಡಿಸಿಲ್ಲ ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಮತ್ತೋರ್ವ ಪ್ರಮುಖ ಆರೋಪಿ ಬಲರಾಮ್ ಸದ್ಯ ತಲೆಮರೆಸಿಕೊಂಡಿದ್ದಾನೆ.

# ಟಿಎಂಸಿ ನಿರಾಳ: ಬ್ಯಾಂಕ್ ಖಾತೆಗಳ ಬಳಕೆಗೆ ಹೈಕೋರ್ಟ್ ಅಸ್ತು

**ಕೋಲ್ಕತ್ತಾ, ಜು. 9:** ತೃಣಮೂಲ ಕಾಂಗ್ರೆಸ್ (ಟಿಎಂಸಿ) ಹಾಗೂ ಪಶ್ಚಿಮ ಬಂಗಾಳ ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರಿಗೆ ಕೋಲ್ಕತ್ತಾ ಹೈಕೋರ್ಟ್‌ನಿಂದ ದೊಡ್ಡ ರಿಲೀಫ್ ಸಿಕ್ಕಿದೆ. ಟಿಎಂಸಿ ಬಂಡಾಯ ಶಾಸಕ ಬಿಸ್ವನಾಥ್ ದಾಸ್ ನೀಡಿದ ದೂರಿನ ಮೇರೆಗೆ ಪಶ್ಚಿಮ ಬಂಗಾಳ ಪೊಲೀಸರು ಮುಟ್ಟುಗೋಲು ಹಾಕಿಕೊಂಡಿದ್ದ ಟಿಎಂಸಿಯ ಮೂರು ಪ್ರಮುಖ ಬ್ಯಾಂಕ್ ಖಾತೆಗಳನ್ನು ದಿನನಿತ್ಯದ ವೆಚ್ಚಗಳಿಗಾಗಿ ಬಳಸಲು ಕೋಲ್ಕತ್ತಾ ಹೈಕೋರ್ಟ್ ಗ್ರೀನ್ ಸಿಗ್ನಲ್ ನೀಡಿದೆ.

ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೌಗತ ಭಟ್ಟಾಚಾರ್ಯ ಅವರ ಪೀಠವು ನಿವೃತ್ತ ನ್ಯಾಯಾಧೀಶರಾದ ಜಸ್ಟಿಸ್ ಸುಬ್ರತಾ ತಾಲೂಕ್ದಾರ್ ಅವರನ್ನು ವಿಶೇಷ ಅಧಿಕಾರಿಯನ್ನಾಗಿ ನೇಮಕ ಮಾಡಿದೆ. ಸೆಪ್ಟೆಂಬರ್ 30ರವರೆಗೆ ತಾಲೂಕ್ದಾರ್ ಅವರ ಕಟ್ಟುನಿಟ್ಟಿನ ಮೇಲ್ವಿಚಾರಣೆಯಲ್ಲಿ ಮಾತ್ರ ಟಿಎಂಸಿ ಖಾತೆಗಳನ್ನು ನಿರ್ವಹಿಸಬಹುದಾಗಿದೆ.

ಬ್ಯಾಂಕ್ ಖಾತೆಯಲ್ಲಿರುವ ಹಣವನ್ನು ಕೇವಲ ಪಕ್ಷದ ದಿನನಿತ್ಯದ ನಿರ್ವಹಣೆ, ದೈನಂದಿನ ವೆಚ್ಚಗಳು ಮತ್ತು ಕಾನೂನು ಹೋರಾಟದ ವೆಚ್ಚಗಳಿಗಾಗಿ ಮಾತ್ರ ಬಳಸಬೇಕು. ಇದನ್ನು ಹೊರತುಪಡಿಸಿ ಬೇರೆ ಯಾವುದೇ ಪ್ರಮುಖ ಅಥವಾ ಸಣ್ಣ ವೆಚ್ಚಗಳಿಗೆ ಹಣ ಬಳಸುವಂತಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಇನ್ನು ಬ್ಯಾಂಕ್‌ನಿಂದ ಹಣ ಹಿಂಪಡೆಯಲು ಟಿಎಂಸಿಯ ಇಬ್ಬರು ಅಧಿಕೃತ ಸಹಿದಾರರು ಚೆಕ್ಗಳನ್ನು ವಿಶೇಷ ಅಧಿಕಾರಿಗೆ ಸಲ್ಲಿಸಬೇಕು. ಅವರು ಪರಿಶೀಲಿಸಿ ಕೌಂಟರ್ ಸಹಿ ಮಾಡಿದ ನಂತರವಷ್ಟೇ ಬ್ಯಾಂಕ್ಗೆ ಪ್ರಸ್ತುತಪಡಿಸಿ ಹಣ ಪಡೆಯಬಹುದಾಗಿದೆ. ಇನ್ನು ವಿಶೇಷ ಅಧಿಕಾರಿಗೆ ಮಾಸಿಕ 1.25 ಲಕ್ಷ ಗೌರವಧನವನ್ನು ಇದೇ ಖಾತೆಯಿಂದ ನೀಡಲು ಕೋರ್ಟ್ ಸೂಚಿಸಿದೆ.



ವಿಧಾನಸಭಾ ಚುನಾವಣೆಯಲ್ಲಿ ಟಿಎಂಸಿ ಸೋಲನ್ನು ಅನುಭವಿಸಿದ ಬೆನ್ನಲ್ಲೇ, ಪಕ್ಷದ ಬಂಡಾಯ ಶಾಸಕ ಬಿಸ್ವನಾಥ್ ದಾಸ್ ಹಣ ದುರುಪಯೋಗದ ಆರೋಪ ಮಾಡಿ ಜೂನ್ 18ರಂದು ಸಂಜೆ 6 ಗಂಟೆಗೆ ದೂರು ನೀಡಿದ್ದರು. ದೂರು ದಾಖಲಾದ ಮರುದಿನವೇ ಅಂದರೆ ಜೂನ್ 19ರಂದು ಬಿಧಾನನಗರ ಪೊಲೀಸರು ತರಾತುರಿಯಲ್ಲಿ ಟಿಎಂಸಿ ಖಾತೆಗಳನ್ನು ಡೆಬಿಟ್ ಫ್ರೀಜ್ ಮಾಡಿದ್ದರು. ಪೊಲೀಸರ ಈ ಕ್ರಮವನ್ನು ಹೈಕೋರ್ಟ್ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿತ್ತು.

ಸಾಮಾನ್ಯ ಅಥವಾ ಬಡ ನಾಗರಿಕರು ಪೊಲೀಸ್ ಠಾಣೆಗೆ ಹೋದರೆ ಇಷ್ಟು ವೇಗವಾಗಿ ಸ್ಪಂದಿಸದ ಪೊಲೀಸರು, ಈ ಪ್ರಕರಣದಲ್ಲಿ ಮಿಂಚಿನ ವೇಗದಲ್ಲಿ ಖಾತೆಗಳನ್ನು ಸ್ಥಗಿತ ಮಾಡಿದ್ದು ಏಕೆ ಎಂದು ನ್ಯಾಯಮೂರ್ತಿಗಳು ಪ್ರಶ್ನಿಸಿದ್ದರು. ಹಾಗೆಯೇ, ಇಷ್ಟು ದೊಡ್ಡ ಕ್ರಮ ಕೈಗೊಳ್ಳಲು ಪೊಲೀಸರ ಬಳಿ ಸದ್ಯಕ್ಕೆ ಯಾವುದೇ ನಿರ್ದಿಷ್ಟ ಸಾಕ್ಷ್ಯಾಧಾರಗಳಿಲ್ಲ. ಶಾಸಕರ ದೂರು ಕೂಡ ಯಾವುದೇ ನಿರ್ದಿಷ್ಟ ವಹಿವಾಟಿನ ಆಧಾರವಿಲ್ಲದ ಕೇವಲ ಸಾರಾಸಗಟು ಆರೋಪದಂತೆ ಕಾಣಿಸುತ್ತಿದೆ ಎಂದು ಪೀಠ ಅಸಮಾಧಾನ ವ್ಯಕ್ತಪಡಿಸಿತ್ತು.

# ಮಹಾರಾಷ್ಟ್ರ ಪ್ರವಾಹ: ಕೊಚ್ಚಿಹೋದ 3,000 ಗ್ಯಾಸ್ ಸಿಲಿಂಡರ್ಗಳು

**ಮುಂಬೈ, ಜು. 9:** ಮಹಾರಾಷ್ಟ್ರದ ರಾಯಗಢ ಜಿಲ್ಲೆಯಲ್ಲಿ ಸುರಿಯುತ್ತಿರುವ ಭೀಕರ ಮಳೆ ಮತ್ತು ಪ್ರವಾಹದ ನಡುವೆ ಅತ್ಯಂತ ಅಪಾಯಕಾರಿ ಹಾಗೂ ಆತಂಕಕಾರಿ ಘಟನೆ ಸಂಭವಿಸಿದೆ. ಖಲಾಪುರ ತಾಲ್ಲೂಕಿನಲ್ಲಿರುವ ಹಿಂದೂಸ್ತಾನ್ ಪೆಟ್ರೋಲಿಯಂ ಗ್ಯಾಸ್ ಬಾಟ್ಲಿಂಗ್ ಸ್ಥಾವರಕ್ಕೆ ಪ್ರವಾಹದ ನೀರು ನುಗ್ಗಿದ ಪರಿಣಾಮ, ಬರೋಬ್ಬರಿ 3,000 ಎಲ್ಪಿಜಿ ಗ್ಯಾಸ್ ಸಿಲಿಂಡರ್‌ಗಳು ನೀರಿನಲ್ಲಿ ಕೊಚ್ಚಿಹೋಗಿವೆ. ಇವುಗಳಲ್ಲಿ ಬಹುತೇಕ ಸಿಲಿಂಡರ್ಗಳು ಹತ್ತಿರದ ಪಾತಾಳಗಂಗಾ ನದಿಯಲ್ಲಿ ಸಾಲುಸಾಲಾಗಿ ತೇಲುತ್ತಿರುವುದು ಕಂಡುಬಂದಿದ್ದು, ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿದೆ.

ನದಿಯಲ್ಲಿ ಸಾವಿರಾರು ಸಿಲಿಂಡರ್ಗಳು ತೇಲಿಬರುತ್ತಿರುವುದನ್ನು ಕಂಡ ನದಿ ತೀರದ ಗ್ರಾಮಸ್ಥರು ಮತ್ತು ಸ್ಥಳೀಯ ನಿವಾಸಿಗಳು, ಜೀವದ ಹಂಗು ತೊರೆದು ಆ ಸಿಲಿಂಡರ್ಗಳನ್ನು ದಡಕ್ಕೆ ಎಳೆದು ತಂದು ತಂತಮ್ಮ ಮನೆಗಳಿಗೆ ಕೊಂಡೊಯ್ಯುತ್ತಿದ್ದಾರೆ ಎಂಬ ವರದಿಗಳು ಅಧಿಕಾರಿಗಳ ನಿದ್ದೆ ಕೆಡಿಸಿವೆ.

ಘಟನೆಯು ಖಲಾಪುರದ ಎಂಐಡಿಸಿ ಕೈಗಾರಿಕಾ ಪ್ರದೇಶದಲ್ಲಿರುವ ಎಚ್ಪಿಸಿಎಲ್ ಪ್ಲಾಂಟ್ನಲ್ಲಿ ನಡೆದಿದೆ. ಪ್ರವಾಹದ ನೀರಿನ ರಭಸಕ್ಕೆ ಸಿಲಿಂಡರ್ಗಳನ್ನು ಸಂಗ್ರಹಿಸಿಡಲಾಗಿದ್ದ



ಆವರಣವೇ ಮುಳುಗಿಹೋಗಿ, ಈ ಅವಾಂತರ ಸೃಷ್ಟಿಯಾಗಿದೆ.

ಪರಿಸ್ಥಿತಿಯ ಗಂಭೀರತೆಯನ್ನು ಅರಿತ ರಾಯಗಢ ಜಿಲ್ಲಾಧಿಕಾರಿಗಳು ಸಾರ್ವಜನಿಕರಿಗೆ ಕಠಿಣ ಮುನ್ನೆಚ್ಚರಿಕೆ ಸಂದೇಶ ರವಾನಿಸಿದ್ದಾರೆ.ನದಿಯಲ್ಲಿ ಕೊಚ್ಚಿಬಂದಿರುವ ಸಿಲಿಂಡರ್‌ಗಳು ತುಂಬಿವೆಯೇ ಅಥವಾ ಖಾಲಿಯಿವೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ನೀರಿನ ರಭಸಕ್ಕೆ ಅವುಗಳ ವಾಲ್ವ್ ಹಾನಿಗೊಳಗಾಗಿ ಅನಿಲ ಸೋರಿಕೆಯಾಗುವ ಭೀತಿ ಇರುತ್ತದೆ.

ಯಾವುದೇ ನಾಗರಿಕರು ಈ ಸಿಲಿಂಡರ್‌ಗಳನ್ನು ತಮ್ಮ ವೈಯಕ್ತಿಕ ಬಳಕೆಗೆ ಮನೆಗೆ ಕೊಂಡೊಯ್ಯಬಾರದು, ಅವುಗಳನ್ನು ತೆರೆಯಲು ಪ್ರಯತ್ನಿಸಬಾರದು. ಇದು ಭೀಕರ ಸ್ಫೋಟಕ್ಕೆ ಕಾರಣವಾಗಬಹುದು.

ನದಿದಡದಲ್ಲಿ ಸಿಲಿಂಡರ್ ಸಿಕ್ಕರೆ ತಕ್ಷಣವೇ ಹತ್ತಿರದ ತಹಶೀಲ್ದಾರ್ ಕಚೇರಿ ಅಥವಾ ಸ್ಥಳೀಯ ಗ್ಯಾಸ್ ವಿತರಕರಿಗೆ ಒಪ್ಪಿಸಬೇಕು ಎಂದು ಆಡಳಿತ ಆದೇಶಿಸಿದೆ.


ರೈಲ್ವೆ ಹಳಿಗಳು ಮತ್ತು ಕೈಗಾರಿಕಾ ಪ್ರದೇಶಗಳ ಪಕ್ಕದಲ್ಲೇ ಹಾದುಹೋಗುವ ಪಾತಾಳಗಂಗಾ ನದಿಯು ಪ್ರಸ್ತುತ ಅಪಾಯದ ಮಟ್ಟ ಮೀರಿ ಹರಿಯುತ್ತಿರುವುದರಿಂದ, ನದಿ ಪಾತ್ರದ ಜನರನ್ನು ಈಗಾಗಲೇ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗುತ್ತಿದೆ. ಸದ್ಯಕ್ಕೆ ಈ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಅಥವಾ ಗಾಯಗಳಾದ ವರದಿಯಾಗಿಲ್ಲ. ಎಚ್‌ಪಿಸಿಎಲ್ ಕಂಪನಿಯ ತಜ್ಞರು ಮತ್ತು ವಿಪತ್ತು ನಿರ್ವಹಣಾ ಸಿಬ್ಬಂದಿ ದೋಣಿಗಳ ಮೂಲಕ ನದಿಯಲ್ಲಿ ತೇಲುತ್ತಿರುವ ಸಿಲಿಂಡರ್‌ಗಳನ್ನು ಮರಳಿ ವಶಪಡಿಸಿಕೊಳ್ಳುವ ಕಾರ್ಯಾಚರಣೆ ನಡೆಸುತ್ತಿದ್ದಾರೆ.

# ಬಾವಿಯಲ್ಲಿ 13 ಜಿಂಕೆಗಳ ಮೃತದೇಹ ಪತ್ತೆ

**ಭೋಪಾಲ್, ಜು. 9:** ಮಧ್ಯಪ್ರದೇಶದ ಶಾಜಾಪುರ ಜಿಲ್ಲೆಯ ಖರ್ದೌನ್ಕಲಾ ಗ್ರಾಮದಲ್ಲಿರುವ ಬಾವಿಯೊಂದರಲ್ಲಿ 13 ಜಿಂಕೆಗಳ ಮೃತದೇಹಗಳು ಪತ್ತೆಯಾಗಿವೆ. ಬೀದಿನಾಯಿಯೊಂದರಿಂದ ತಪ್ಪಿಸಿಕೊಳ್ಳಲು ಯತ್ನಿಸುವಾಗ ಜಿಂಕೆಗಳು ಬಾವಿಗೆ ಬಿದ್ದಿರಬಹುದು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಶಂಕಿಸಿದ್ದಾರೆ. ಜಿಂಕೆಗಳನ್ನು ಅಟ್ಟಿಸಿಕೊಂಡು ಹೋಗಿದ್ದ ಒಂದು ನಾಯಿಯೂ ಸಹ ಬಾವಿಯಲ್ಲಿ ಸಾವನ್ನಪ್ಪಿದೆ ಎಂದು ತಿಳಿದುಬಂದಿದೆ.

ಕಳೆದ ಭಾನುವಾರ ರೈತರೊಬ್ಬರ ಕುಟುಂಬಸ್ಥರು ತಮ್ಮ ಹೊಲಕ್ಕೆ ಕೀಟನಾಶಕ ಸಿಂಪಡಿಸಲು ಹೋಗಿದ್ದಾಗ ತೀವ್ರವಾದ ದುರ್ವಾಸನೆ ಬಂದಿದೆ. ಅನುಮಾನಗೊಂಡು ಬಾವಿಯೊಳಗೆ ಇಣುಕಿ ನೋಡಿದಾಗ ಜಿಂಕೆಗಳ ಮೃತದೇಹಗಳು ಕೊಳೆತ ಸ್ಥಿತಿಯಲ್ಲಿ ತೇಲುತ್ತಿರುವುದು ಕಂಡುಬಂದಿದೆ. ರೈತನ ಕುಟುಂಬಸ್ಥರು ತಕ್ಷಣವೇ ಗ್ರಾಮದ ಮುಖಂಡರಿಗೆ ಮಾಹಿತಿ ನೀಡಿದ್ದು, ನಂತರ ಅರಣ್ಯ ಇಲಾಖೆ ಮತ್ತು ಪೊಲೀಸರಿಗೆ ಸುದ್ದಿ ಮುಟ್ಟಿಸಲಾಗಿದೆ ಎಂದು ವರದಿಯಾಗಿದೆ.

ಪ್ರಾಥಮಿಕ ತನಿಖೆಯ ಪ್ರಕಾರ, ಈ ಘಟನೆಯು ಒಂದು ಅಥವಾ ಎರಡು ದಿನಗಳ ಮುಂಚಿತವಾಗಿ ನಡೆದಿರಬಹುದು. ಜಿಂಕೆಗಳ ಹಿಂಡು ವೇಗವಾಗಿ ಓಡಿ ಬರುವಾಗ ತೆರೆದಬಾವಿಯ ಬಳಿ ಬಂದಿದೆ. ಬಾವಿಯ ಸುತ್ತ ನಿರ್ಮಿಸಲಾಗಿದ್ದ ರಕ್ಷಣಾತ್ಮಕ ತಡೆಗೋಡೆಯ ಒಂದು ಭಾಗ ಮುರಿದಿದ್ದರಿಂದ, ಪ್ರಾಣಿಗಳು ನೇರವಾಗಿ ಬಾವಿಗೆ ಬಿದ್ದಿವೆ. ಜಿಂಕೆಗಳನ್ನು ಅಟ್ಟಿಸಿಕೊಂಡು ಬಂದ ಬೀದಿನಾಯಿಯೂ ಬಾವಿಗೆ ಬಿದ್ದಿದೆ ಎಂದು ವನ್ಯಜೀವಿ



ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಘಟನಾ ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಆ ಪ್ರದೇಶವನ್ನು ಸೀಲ್ ಮಾಡಿ, ತನಿಖೆ ಕೈಗೊಂಡಿದ್ದಾರೆ. ಮರಣೋತ್ತರ ಪರೀಕ್ಷೆಯ ವರದಿ ಬಂದ ನಂತರವಷ್ಟೇ ನಿಖರ ಕಾರಣ ತಿಳಿಯಲಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಆದರೆ, ಅಧಿಕಾರಿಗಳು ಆರಂಭದಲ್ಲಿ ಈ ವಿಷಯವನ್ನು ಸಾರ್ವಜನಿಕವಾಗಿ ಮುಚ್ಚಿಡಲು ಯತ್ನಿಸಿದ್ದರು ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಕಲಾಪಿಪಲ್–ಶುಜಾಲ್ಪುರ್ ಭಾಗದಲ್ಲಿ ಜಿಂಕೆಗಳ ಸಂಖ್ಯೆ ಹೆಚ್ಚಾಗಿದ್ದು, ಅವುಗಳು ಆಹಾರ ಹುಡುಕುತ್ತಾ ಪದೇ ಪದೇ ಕೃಷಿ ಭೂಮಿಗೆ ನುಗ್ಗುತ್ತಿರುತ್ತವೆ. ಪರಿಣಾಮ, ಬೆಳೆ ಹಾನಿ ಹೆಚ್ಚಾಗುತ್ತಿದ್ದ ಹಿನ್ನೆಲೆಯಲ್ಲಿ, ಸುಮಾರು ಎರಡು ತಿಂಗಳ ಹಿಂದೆಯಷ್ಟೇ ಅರಣ್ಯ ಇಲಾಖೆಯು ಬೋಮಾ ಕ್ಯಾಪ್ಚರ್ ಪದ್ಧತಿಯ ಮೂಲಕ ಸುಮಾರು 800 ಜಿಂಕೆಗಳನ್ನು ಬೇರೆ ಅಭಯಾರಣ್ಯಗಳಿಗೆ ಸ್ಥಳಾಂತರಿಸಿತ್ತು.

# ಷೇರು ಮಾರುಕಟ್ಟೆ ಹೂಡಿಕೆ ಹೆಸರಿನಲ್ಲಿ 10 ಲಕ್ಷ ವಂಚನೆ: ಮುಂಬಯಿಲ್ಲಿ ಮಹಿಳೆ ಬಂಧನ

**ಮುಂಬಯಿ, ಜು.9:** ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿದರೆ ಲಕ್ಷಾಂತರ ರೂಪಾಯಿ ಲಾಭ ಮಾಡಿ ಕೊಡುವುದಾಗಿ ತಿಳಿಸಿ ವಂಚಿಸಿ ಚೆಕ್ ಬೌನ್ಸ್ ಮತ್ತು ಹಣ ವಂಚನೆಯ ಆರೋಪದ ಮೇಲೆ ಉಡುಪಿ ಕೊಲಳಗಿರಿ ಕುಕ್ಕಿಕಟ್ಟೆ ಮೂಲತಃ ದೀಪಿಕಾ ಮನೋಜ್ ಶೆಟ್ಟಿ ಎಂಬಾಕೆಯನ್ನು ಪೊಲಿಸರು ಬಂಧಿಸಿದ್ದಾರೆ.

ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿದರೆ ಶೇ.10ರಷ್ಟು ಹೆಚ್ಚಿನ ಲಾಭ ನೀಡುವುದಾಗಿ ನಂಬಿಸಿ ಮಹಿಳೆಯೊಬ್ಬರಿಗೆ ಹಾಗೂ ಅವರ ಸಹೋದರನಿಗೆ ಒಟ್ಟು 10 ಲಕ್ಷ ರೂಪಾಯಿ ವಂಚಿಸಿರುವ ಘಟನೆ ಮುಂಬಯಿ ಕಾಂದಿವಲಿ ಪಶ್ಚಿಮದಲ್ಲಿ ನಡೆದಿದೆ. ಘಟನೆಯ ಹಿನ್ನೆಲೆಯಂತೆ ಸುಮಾರು 60 ವರ್ಷ ವಯಸ್ಸಿನ ರಜನಿ ದಯಾನಂದ್ ಶೆಟ್ಟಿ ನೀಡಿದ ದೂರಿನ ಮೇರೆಗೆ ಕಾಂದಿವಲಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ದೂರುದಾರೆ ರಜನಿ ಶೆಟ್ಟಿ ಅವರ ಸೋದರ ಸಂಬಂಧಿ ಹರೀಶ್ ಶೆಟ್ಟಿ ಎಂಬುವರು ನಿರ್ಮಲ್ ಬ್ಯಾಂಗ್ ಎಂಬ ಬ್ರೋಕಿಂಗ್ ಏಜೆನ್ಸಿಯಲ್ಲಿ ಖಾತೆ ಹೊಂದಿದ್ದರು. ಅಲ್ಲಿ ಕೆಲಸ ಮಾಡುತ್ತಿದ್ದ ಉಡುಪಿ ಕೊಲಳಗಿರಿ ಕುಕ್ಕಿಕಟ್ಟೆ ಮೂಲತಃ ದೀಪಿಕಾ ಮನೋಜ್ ಶೆಟ್ಟಿ ಜತೆ ರಜನಿಗೆ ಪರಿಚಯವಾಗಿದ್ದು, ಸೆಪ್ಟೆಂಬರ್ 2024ರಲ್ಲಿ ಕಮಲಾ ವಿಹಾರ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಭೇಟಿಯಾದಾಗ, ದೀಪಿಕಾ ಶೆಟ್ಟಿ ತನಗಿರುವ ಶೇರು ಮಾರುಕಟ್ಟೆಯ ಬಗ್ಗೆ ಪ್ರಸ್ತಾಪಿಸಿದ್ದಳು ಎನ್ನಲಾಗಿದೆ. 1 ಲಕ್ಷ ರೂಪಾಯಿ ಹೂಡಿಕೆ ಮಾಡಿದರೆ ಮೂರು ತಿಂಗಳ ನಂತರ ಪ್ರತಿ ತಿಂಗಳು 20% ರಷ್ಟು ಅಂದರೆ 60 ಸಾವಿರ ರೂಪಾಯಿ ಲಾಭ ನೀಡುವುದಾಗಿ ಆಮಿಷ ಒಡ್ಡಿದ್ದು, ದೀಪಿಕಾಳ ಮಾತನ್ನು ನಂಬಿದ ರಜನಿ ಶೆಟ್ಟಿ ಅವರು ಅಕ್ಟೋಬರ್ 2024 ರಿಂದ ಡಿಸೆಂಬರ್ 2024ರ ಅವಧಿಯಲ್ಲಿ ತಮ್ಮ ಆಕ್ಸಿಸ್ ಬ್ಯಾಂಕ್ ಖಾತೆಯಿಂದ ದೀಪಿಕಾಳ ಪಂಜಾಬ್ ನ್ಯಾಷನಲ್ ಬ್ಯಾಂಕ್ ಖಾತೆಗೆ ಹಂತ–ಹಂತವಾಗಿ ಒಟ್ಟು 9,00,000 ರೂಪಾಯಿಗಳನ್ನು ಆರ್‌ಟಿಜಿಎಸ್ ಮೂಲಕ ವರ್ಗಾಯಿಸಿದ್ದಾರೆ. ಇದೇ ವೇಳೆ ಅವರ ಸಹೋದರ ಹರೀಶ್ ಶೆಟ್ಟಿ ಕೂಡ ತನ್ನ ಭಾರತ್ ಬ್ಯಾಂಕ್ ಖಾತೆಯಿಂದ 2,00,000 ರೂಪಾಯಿಗಳನ್ನು ದೀಪಿಕಾಳ ಖಾತೆಗೆ ಜಮೆ ಮಾಡಿದ್ದಾರೆ.

### ಚೆಕ್ ಬೌನ್ಸ್ ಮತ್ತು ವಂಚನೆ:



ಹಣ ಪಡೆದ ನಂತರ ಒಪ್ಪಂದದಂತೆ ದೀಪಿಕಾ ಲಾಭಾಂಶ ಅಥವಾ ಅಸಲು ಹಣವನ್ನು ಮರುಪಾವತಿಸಿಲ್ಲ. ರಜನಿ ಅವರು ಹಣಕ್ಕಾಗಿ ಒತ್ತಾಯಿಸಿದಾಗ, ದೀಪಿಕಾ ತನ್ನ ಪಂಜಾಬ್ ನ್ಯಾಷನಲ್ ಬ್ಯಾಂಕ್ ಮತ್ತು ಕೆನರಾ ಬ್ಯಾಂಕ್ ಖಾತೆಗಳ ಒಟ್ಟು 8,58,600 ರೂ.ಮೌಲ್ಯದ ಚೆಕ್‌ಗಳನ್ನು ನೀಡಿದ್ದು, ಆ ಚೆಕ್‌ಗಳು ಬ್ಯಾಂಕ್‌ನಲ್ಲಿ ಬೌನ್ಸ್ ಆಗಿವೆ. ತದನಂತರ ದೀಪಿಕಾ ಹಣ ನೀಡದೆ ಸತಾಯಿಸಲು ಹಾಗೂ ತಪ್ಪಿಸಿಕೊಳ್ಳಲು ಆರಂಭಿಸಿದ್ದಳು ಎನ್ನಲಾಗಿದೆ.

ದೂರುದಾರರ ಹೇಳಿಕೆಯಂತೆ ಶೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿ ಭಾರಿ ಲಾಭ ಗಳಿಸಿಕೊಡುವುದಾಗಿ ನಂಬಿಸಿ ದೀಪಿಕಾ ಶೆಟ್ಟಿ ನನ್ನಿಂದ 9 ಲಕ್ಷ ಹಾಗೂ ನನ್ನ ಸಹೋದರನಿಂದ 1 ಲಕ್ಷ ಸೇರಿ ಒಟ್ಟು 10 ಲಕ್ಷ ರೂ. ಪಡೆದು ವಂಚಿಸಿದ್ದಾಳೆ. ತಮಗೆ ವಂಚನೆಯಾಗಿರುವುದು ಖಚಿತವಾಗುತ್ತಿದ್ದಂತೆ ರಜನಿ ಶೆಟ್ಟಿ ಆಕೆಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕಾಂದಿವಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಕಾಂದಿವಲಿ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ನಿರೀಕ್ಷಕ ಸೋಹನ್ ಸುರೇಶ್ ರಾವ್ ಕದಂ ಪ್ರಕರಣದ ತನಿಖೆಯನ್ನು ಕೈಗೆತ್ತಿಕೊಂಡಿದ್ದು, ಮುಖ್ಯ ಪೊಲೀಸ್ ನಿರೀಕ್ಷಕ ಕರಣ್ ಗುಣಾಜಿ ಸೋನಿ ಮಾರ್ಗದರ್ಶನದಲ್ಲಿ ಕಾನೂನು ಕ್ರಮ ಜರುಗಿಸಿ ತನಿಖೆಯನ್ನು ಮುಂದುವರಿಸಿದ್ದು ಆರೋಪಿ ದೀಪಿಕಾ ಶೆಟ್ಟಿ ಹಣವನ್ನು ಮರುಪಾವತಿಸಲು ಅಸಾಧ್ಯವಾದ ಕಾರಣ ವಂಚನೆ ಆರೋಪದಡಿ ಪೊಲಿಸ್ ಕಸ್ಟಡಿಯಿಂದ ಮುಂಬಯಿ ಸೆಂಟ್ರಲ್‌ನ ನಾಗ್ಪಾಡಾ ಅಲ್ಲಿರುವ ಬೈಕುಲ್ಲಾ ಮಹಿಳಾ ಕಾರಾಗೃಹ (ಜಿಲ್ಲಾ ಜೈಲು) ಸೇರಿದ್ದಾರೆ ಎನ್ನಲಾಗಿದೆ.


ಜನಪ್ರತಿನಿಧಿಗಳು ಸರ್ಕಾರಿ ಜಮೀನು ಒತ್ತುವರಿ ಮಾಡುವುದು ಗಂಭೀರ ಅಪರಾಧ

# ಮಾಜಿ ಸಚಿವ ಡಾ.ಸುಧಾಕರ್ ತಂದೆ ಚೌಡರೆಡ್ಡಿ ವಿರುದ್ಧದ ತನಿಖೆ ಮುಂದುವರಿಸಲು ಲೋಕಾಯುಕ್ತಕ್ಕೆ ಹೈಕೋರ್ಟ್ ಅನುಮತಿ

**ಬೆಂಗಳೂರು, ಜು.9:** ರಾಜಕೀಯ ಅಧಿಕಾರಸ್ಥರು ಭೂ ಕಬಳಿಕೆ ಮಾಡುವುದು ಆಡಳಿತದ ಮೇಲಿನ ಸಾರ್ವಜನಿಕ ನಂಬಿಕೆಯನ್ನೇ ಸರ್ವನಾಶ ಮಾಡುತ್ತದೆ ಎಂದಿರುವ ಕರ್ನಾಟಕ ಹೈಕೋರ್ಟ್, ಚಿಂತಾಮಣಿ ಶಾಸಕರೂ ಆದ ಮಾಜಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರ ತಂದೆ ಚೌಡರೆಡ್ಡಿ ವಿರುದ್ಧ ಸರ್ಕಾರಿ ಜಮೀನು ಕಬಳಿಕೆ ಪ್ರಕರಣದ ತನಿಖೆ ಮುಂದುವರಿಸಲು ಲೋಕಾಯುಕ್ತರ ಪೊಲೀಸರಿಗೆ ಅನುಮತಿಸಿದೆ.

ಸರ್ಕಾರಿ ಜಮೀನು ಒತ್ತುವರಿ ಆರೋಪ ಸಂಬಂಧ ತಮ್ಮ ವಿರುದ್ಧ ಲೋಕಾಯುಕ್ತ ಪೊಲೀಸರು ದಾಖಲಿಸಿರುವ ಎಫ್‌ಐಆರ್ ರದ್ದುಗೊಳಿಸಬೇಕು ಎಂದು ಕೋರಿ ಚಿಂತಾಮಣಿ ಕ್ಷೇತ್ರದ ಮಾಜಿ ಶಾಸಕ ಚೌಡರೆಡ್ಡಿ ಹಾಗೂ ಚಿಂತಾಮಣಿಯ ಈ ಹಿಂದಿನ ಪೌರಾಯುಕ್ತರಾಗಿದ್ದ ಬಿ ಎಚ್ ನಾರಾಯಣಪ್ಪ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠವು ವಜಾಗೊಳಿಸಿದೆ.

ಚಿಂತಾಮಣಿ ತಾಲ್ಲೂಕು ಕನ್ನಂಪಲ್ಲಿ ಗ್ರಾಮದ ಸರ್ವೇ ನಂಬರ್ 11ರಲ್ಲಿನ 1.19 ಗುಂಟೆ ಸರ್ಕಾರಿ ಖರಾಬು ಜಮೀನನ್ನು ಚೌಡರೆಡ್ಡಿ ಅವರು ಒತ್ತುವರಿ ಮಾಡಿ ಬೇರೆಯವರಿಗೆ ಮಾರಾಟ ಮಾಡಿದ್ದಾರೆ ಎಂಬ ಆರೋಪವಿದೆ. ಚೌಡರೆಡ್ಡಿ ಪುತ್ರರಾದ ಎಂ ಸಿ ಬಾಲಾಜಿ ಮತ್ತು ಎಂ ಸಿ ಸುಧಾಕರ (ಹಾಲಿ ಚಿಂತಾಮಣಿ ಶಾಸಕ) ಪ್ರಕರಣದ ನೇರ ಫಲಾನುಭವಿಗಳಾಗಿದ್ದರೂ, ಅವರು ಆರೋಪಿಗಳಾಗಿಲ್ಲ. ಅಪರಾಧದ ಜಾಲದಿಂದ ಹೇಗೆ ಹೊರಗಿದ್ದಾರೆ ಎಂಬುದೇ ಆಶ್ಚರ್ಯಕರವಾಗಿದೆ ಎಂದು ಪೀಠ ಅಭಿಪ್ರಾಯ ವ್ಯಕ್ತಪಡಿಸಿದೆ.




ಅಲ್ಲದೇ, ಸಾರ್ವಜನಿಕರ ನಂಬಿಕೆಗಳನ್ನು ಪೋಷಿಸಬೇಕಾದ ಸರ್ಕಾರಿ ಸೇವಕರೇ ತಪ್ಪು ಮಾಡಿರುವುದು ಹಾಗೂ ಆ ತಪ್ಪುಗಳ ಫಲಾನುಭವಿಗಳಾಗಿರುವುದು ಆಘಾತಕಾರಿ. ಸಾರ್ವಜನಿಕರು ಸರ್ಕಾರಿ ಜಮೀನು ಒತ್ತುವರಿ ಮಾಡುವುದು ಗಂಭೀರ ಅಪರಾಧ. ಅದರಲ್ಲೂ ರಾಜಕೀಯ ಅಧಿಕಾರಸ್ಥರು ಭೂ ಕಬಳಿಕೆ ಮಾಡುವುದು ಇನ್ನೂ ದೊಡ್ಡ ಅಪರಾಧ. ಈ ಕೃತ್ಯ ಆಡಳಿತದ ಮೇಲಿನ ಸಾರ್ವಜನಿಕ ನಂಬಿಕೆಯನ್ನೇ ಸರ್ವನಾಶ ಮಾಡುತ್ತದೆ ಪೀಠ ಅಭಿಪ್ರಾಯ ವ್ಯಕ್ತಪಡಿಸಿದೆ.

ಅರ್ಜಿದಾರರ ವಿರುದ್ಧದ ಆರೋಪಗಳು ಗಂಭೀರವಾಗಿದ್ದು, ತನಿಖೆ ನಡೆಸಲು ಅನಿವಾರ್ಯ ಇದಾಗಿದೆ. ಆದ್ದರಿಂದ, ಆರಂಭಿಕ ಹಂತದಲ್ಲಿ ತನಿಖೆಯನ್ನು ತಡೆಯುವುದು ಸತ್ಯವು ಕೋಣೆಯನ್ನು ಪ್ರವೇಶಿಸುವ ಮೊದಲೇ ಬಾಗಿಲು ಮುಚ್ಚಿದಂತಾಗುತ್ತದೆ. 2016ರಲ್ಲಿ ಪ್ರಕರಣ ಸಂಬಂಧ ಲೋಕಾಯುಕ್ತ ಪೊಲೀಸರಿಗೆ ದೂರು ದಾಖಲಾಗಿದೆ. 2017ರಲ್ಲಿ ಎಫ್‌ಐಆರ್ ದಾಖಲಾಗಿದೆ. ಈಗಾಗಲೇ ಸಾಕಷ್ಟು ಸಮಯ ಕಳೆದಿರುವುದರಿಂದ ಲೋಕಾಯುಕ್ತರ ಪೊಲೀಸರು ಗರಿಷ್ಠ ಆರು ತಿಂಗಳ ಒಳಗೆ ತನಿಖೆಯನ್ನು ಪೂರ್ಣಗೊಳಿಸಬೇಕು ಎಂದು ನಿರ್ದೇಶಿಸಿದೆ.

ಪ್ರಕರಣದ ಹಿನ್ನೆಲೆ: ಚಿಂತಾಮಣಿ ತಾಲ್ಲೂಕು ಕನ್ನಂಪಲ್ಲಿ ಗ್ರಾಮದ ಸರ್ವೇ ನಂಬರ್ 11ರಲ್ಲಿನ 1.19 ಗುಂಟೆ ಖರಾಬು ಜಮೀನನ್ನು ಚೌಡರೆಡ್ಡಿ ಅವರು ಒತ್ತುವರಿ ಮಾಡಿ ಬಾಲಾಜಿ ರೆಡ್ಡಿ ಇವರಿಗೆ ನಿಯಮಬಾಹಿರವಾಗಿ ಖಾತೆ ಮಾಡಿಸಿಕೊಡಲಾಗಿದೆ. ಒತ್ತುವರಿ ಮಾಡಲಾದ ಈ ಸರ್ಕಾರಿ ಜಮೀನನ್ನು ನಿವೇಶನಗಳಾಗಿ ವಿಂಗಡಿಸಿ ಬೇರೆವರಿಗೆ ಮಾರಾಟ ಮಾಡಲಾಗಿದೆ ಎಂಬುದಾಗಿ ಆರೋಪಿಸಿ ಸೊನ್ನಶೆಟ್ಟಿಹಳ್ಳಿಯ ಆರ್ ವೆಂಕಟರಮಣ ಅವರು ಚೌಡರೆಡ್ಡಿ, ವಿರುದ್ಧ 2016ರ ಏಪ್ರಿಲ್ 24ರಂದು ಅಂದಿನ ಭ್ರಷ್ಟಾಚಾರ ನಿಗ್ರಹ ದಳಕ್ಕೆ (ಎಸಿಬಿ) ದೂರು ಸಲ್ಲಿಸಿದ್ದರು.

ಅಕ್ರಮ ಎಸಗಲು ಚೌಡಾರೆಡ್ಡಿಗೆ ಚಿಂತಾಮಣಿ ಪೌರಾಯುಕ್ತರಾಗಿದ್ದ ಬಿ.ಎಚ್. ನಾರಾಯಣಪ್ಪ ಸೇರಿದಂತೆ ಹಲವು ಸರ್ಕಾರಿ ಅಧಿಕಾರಿಗಳು ನೆರವು ನೀಡಿ ಅಧಿಕಾರ ದುರುಪಯೋಗ ಮಾಡಿ ಕರ್ತವ್ಯಲೋಪ ಎಸಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿತ್ತು. ಅದರಂತೆ ಲೋಕಾಯುಕ್ತ ಪೊಲೀಸರು, ಚೌಡರೆಡ್ಡಿ ಮತ್ತು ಬಿ ಎಚ್ ನಾರಾಯಣಪ್ಪ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯಿದೆಯ ಅಡಿಯಲ್ಲಿ 2017ರ ಮಾರ್ಚ್ 11ರಂದು ಎಫ್‌ಐಆರ್ ದಾಖಲಿಸಿದ್ದರು. ಅದನ್ನು ರದ್ದುಪಡಿಸಲು ಕೋರಿ ಅರ್ಜಿದಾರರು, 2017ರಲ್ಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆಗ ಎಫ್‌ಐಆರ್‌ಗೆ ಹೈಕೋರ್ಟ್ ತಡೆ ನೀಡಿತ್ತು. ಇದೀಗ ಆ ತಡೆ ತೆರವುಗೊಳಿಸಿರುವ ಹೈಕೋರ್ಟ್ ತನಿಖೆಗೆ ಅನುಮತಿಸಿದೆ.



ಬೆಂಗಳೂರಿನ ಜಿಬಿಎ ಕಚೇರಿ ಮುಂದೆ ಕನ್ನಡ ಕಾರ್ಯಕರ್ತ ವಾಟಾಳ್ ನಾಗರಾಜ್ ಮತ್ತು ಅವರ ಬೆಂಬಲಿಗರು ಗುರುವಾರ ಪಾದಚಾರಿ ಮಾರ್ಗಗಳ ತೆರವು ಕಾರ್ಯಾಚರಣೆಯನ್ನು ವಿರೋಧಿಸಿ ಪ್ರತಿಭಟನೆ ನಡೆಸಿದರು.

# ಪಡಿತರಚೀಟಿ ತಿದ್ದುಪಡಿಗೆ ಸರ್ಕಾರ ಅವಕಾಶ 2027ರ ಮಾರ್ಚ್ 31ರವರೆಗೆ ಗಡುವು

**ಬೆಂಗಳೂರು, ಜು.9:** ಅರ್ಹರ ಬಿಪಿಎಲ್ ಪಡಿತರ ಚೀಟಿಗಳು ರದ್ದಾಗಿದ್ದರೆ ಮತ್ತೆ ಪಡೆಯಬಹುದು ಎಂದಿದ್ದ ಸರ್ಕಾರ ಇದೀಗ ತಿದ್ದುಪಡಿಗೆ ಮತ್ತೆ ಅವಕಾಶ ಕಲ್ಪಿಸಿದೆ.

ಪ್ರಮುಖ ದಾಖಲೆಗಳಲ್ಲಿ ಪಡಿತರ ಚೀಟಿ ಸಹ ಒಂದಾಗಿದೆ. ಇದರಲ್ಲಿ ಯಾವುದೇ ತಪ್ಪಿದ್ದರೂ ಅರ್ಜಿ ಸಲ್ಲಿಕೆ ವೇಳೆ ತಿರಸ್ಕಾರವಾಗುವ ಸಾಧ್ಯತೆ ಇರುತ್ತದೆ. ಆದ್ದರಿಂದ ಇದೀಗ ರಾಜ್ಯದಲ್ಲಿ ಮತ್ತೆ ಪಡಿತರ ಚೀಟಿ ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ. ತಿದ್ದುಪಡಿ ಮಾಡಲು ಬಯಸುವವರು ಗಮನಿಸಲೇಬೇಕಾದ ಪ್ರಮುಖ ಅಂಶಗಳನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ.ಕರ್ನಾಟಕ ರಾಜ್ಯದ ಪಡಿತರ ಚೀಟಿದಾರರಿಗೆ ತಮ್ಮ ಕಾರ್ಡ್‌ನಲ್ಲಿರುವ ತಪ್ಪುಗಳನ್ನು ಸರಿಪಡಿಸಿಕೊಳ್ಳಲು ಸರ್ಕಾರವು ಸುವರ್ಣಾವಕಾಶ ನೀಡಿದೆ. ತಿದ್ದುಪಡಿ ಮಾಡಿಸಲು ಬಯಸುವವರು ನಿಗದಿತ ಅವಧಿಯೊಳಗೆ ಅಗತ್ಯ ದಾಖಲೆಗಳೊಂದಿಗೆ ತಮ್ಮ ಹತ್ತಿರದ ಗ್ರಾಮ ಒನ್, ಕರ್ನಾಟಕ ಒನ್ ಅಥವಾ ಬೆಂಗಳೂರು ಒನ್ ಕೇಂದ್ರಗಳ ಮೂಲಕ ಅರ್ಜಿ ಸಲ್ಲಿಕೆ ಮಾಡಬಹುದಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ತಾಂತ್ರಿಕ ತೊಂದರೆಗಳನ್ನು ತಪ್ಪಿಸಲು ಸರ್ಕಾರವು ನಿರ್ದಿಷ್ಟ ಸಮಯವನ್ನು ನಿಗದಿಪಡಿಸಿರುತ್ತದೆ. ಆದ್ದರಿಂದ ಪಡಿತರ ಚೀಟಿದಾರರು ಕೊನೆಯ ಕ್ಷಣದ ಗಡಿಬಿಡಿ ತಪ್ಪಿಸಲು ಕೂಡಲೇ ಅಗತ್ಯ ದಾಖಲೆಗಳನ್ನು ಸಿದ್ಧಪಡಿಸಿ ಕೊಂಡು ತಿದ್ದುಪಡಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿಕೊಳ್ಳುವುದು ಉತ್ತಮ.

ರೇಷನ್ ಕಾರ್ಡ್ ತಿದ್ದುಪಡಿಗೆ ಆನ್‌ಲೈನ್ ಹಾಗೂ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಮಾಡಲು ಮಾರ್ಚ್ 31ರ 2027ರ ವರೆಗೆ ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಕೆ ವೇಳೆ ನೀವು ನೀಡಿರುವಂತಹ ಎಲ್ಲಾ ದಾಖಲಾತಿಗಳು ಸರಿಯಾಗಿದ್ದರೆ ಮಾತ್ರ ನಿಮಗೆ ಅಪ್‌ಡೇಟ್ ಆಗಿರುವ ಹೊಸ ರೇಷನ್‌ಕಾರ್ಡ್ ನಿಮ್ಮ ಮನೆಗೆ ಬರಲಿದೆ. ಅರ್ಜಿ ಸಲ್ಲಿಸಿದ ನಂತರ ಸಿಗುವ ಸ್ವೀಕೃತಿ ಪತ್ರವನ್ನು ಕಡ್ಡಾಯವಾಗಿ ಸುರಕ್ಷಿತವಾಗಿ ಇಟ್ಟು ಕೊಳ್ಳಿ. ಅರ್ಜಿ ಸಲ್ಲಿಸಿದ 15ರಿಂದ 30 ದಿನಗಳ ಒಳಗಾಗಿ ತಿದ್ದುಪಡಿಸ ಮಾಡಲಾದ ಹೊಸ ರೇಷನ್ ಕಾರ್ಡ್ ನಿಮ್ಮ ಕೈ ಸೇರಲಿದೆ. ತುರ್ತು ಅಗತ್ಯ ಇದ್ದರೆ ಮಾತ್ರ ಪ್ರಕ್ರಿಯೆಗಳು ಪೂರ್ಣಗೊಂಡ 7 ರಿಂದ 10 ದಿನಗಳಲ್ಲಿ ಸಿಗಲಿದೆ.

ಅಧಿಕಾರಿಗಳಿಗೆ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್‌ಗುಪ್ತ ಸೂಚನೆ

# ವಿದ್ಯುತ್ ಪೂರೈಕೆಯಲ್ಲಿ ಅಡಚಣೆಯಾಗದಂತೆ ಕಾರ್ಯತಂತ್ರ ರೂಪಿಸಿ

**ಬೆಂಗಳೂರು, ಜು.9:** ಎಲ್‌ನಿನೋ ಪ್ರಭಾವದಿಂದ ಉಂಟಾಗಿರುವ ಹವಾಮಾನ ವೈಪರೀತ್ಯದಿಂದಾಗಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ಅಡಚಣೆಯಾಗದಂತೆ ನೋಡಿಕೊಳ್ಳಲು ಕಾರ್ಯತಂತ್ರ ರೂಪಿಸುವಂತೆ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಸೂಚಿಸಿದ್ದಾರೆ.



ರಾಜ್ಯದ ಪ್ರಸ್ತುತ ವಿದ್ಯುತ್ ಸ್ಥಿತಿಗತಿಗಳ ಕುರಿತು ಬೆವಿಕಂನ ನಿಗಮ ಕಚೇರಿಯ ಬೆಳಕು ಭವನದಲ್ಲಿ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿದ ಅವರು, ಮಳೆ ಕೊರತೆಯಿಂದ ಜಲ ವಿದ್ಯುತ್ ಉತ್ಪಾದನೆಯಲ್ಲಿ ಪರಿಣಾಮ ಬೀರಬಹುದು. ಹೀಗಾಗಿ ಸಮರ್ಪಕ ವಿದ್ಯುತ್ ಪೂರೈಕೆಗೆ ಪರ್ಯಾಯ ಕ್ರಮ ಕೈಗೊಂಡು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಬಾರಿ ಮಳೆ ಕೊರತೆಯಿಂದ ಜಲ ವಿದ್ಯುತ್ ಉತ್ಪಾದನೆ ಸಾಕಷ್ಟು ಪ್ರಮಾಣದಲ್ಲಿ ಇಲ್ಲ. ಹಾಗಾಗಿ, ರಾಜ್ಯದ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿ ಹೆಚ್ಚು ವಿದ್ಯುತ್ ಉತ್ಪಾದಿಸಲು ಕ್ರಮ ವಹಿಸಬೇಕು.



ಪ್ರಕೃತಿ ವಿಕೋಪದ ನಡುವೆಯೂ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ತೊಂದರೆಯಾಗಬಾರದು ಎಂದು ಮುಖ್ಯ ಮಂತ್ರಿಗಳು ನಿರ್ದೇಶನ ನೀಡಿದ್ದಾರೆ. ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ಈ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಮುಂದಿನ ವರ್ಷದ ಮೇ ಅಂತ್ಯದವರೆಗೆ ಸಮರ್ಪಕ ವಿದ್ಯುತ್ ಪೂರೈಸಲು ಈಗಿನಿಂದಲೇ ಸೂಕ್ತ ಸಿದ್ಧತೆ ಮಾಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಜನರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಸಾಧ್ಯವಾದಷ್ಟು ದೀರ್ಘಾವಧಿ ವಿದ್ಯುತ್ ಖರೀದಿ ಒಪ್ಪಂದಗಳನ್ನು ಮಾಡಿಕೊಂಡು ಆರ್ಥಿಕ ಹೊರೆಯಾಗದಂತೆ ನೋಡಿಕೊಳ್ಳಬೇಕು.–ಕೆ.ಜೆ. ಜಾರ್ಜ್, ಇಂಧನ ಸಚಿವ

ಅದೇ ರೀತಿ ರಾಜ್ಯದಲ್ಲಿ ಸೌರ ಮತ್ತು ಪವನ ವಿದ್ಯುತ್ ಉತ್ಪಾದನೆ ಹೆಚ್ಚಿಸಿ ಅದನ್ನು ಬಳಸಿಕೊಳ್ಳಬೇಕು. ಜತೆಗೆ ಕೋ–ಜನರೇಷನ್ ವಿದ್ಯುತ್ ಘಟಕಗಳಿಂದಲೂ ವಿದ್ಯುತ್ ಪಡೆಯಲು ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.

ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿಯುತ್ತಿರುವುದರಿಂದ ವಿದ್ಯುತ್ ಕಂಬ, ತಂತಿಗಳು ಹಾಗೂ ಟ್ರಾನ್ಸ್ ಫಾರ್ಮರ್‌ಗಳು ಹಾನಿಗೊಳಗಾಗುತ್ತವೆ. ವಿದ್ಯುತ್ ಪೂರೈಕೆಯಲ್ಲೂ ವ್ಯತ್ಯಯವಾಗುತ್ತಿದೆ ಇದನ್ನು ತ್ವರಿತವಾಗಿ ಬಗೆಹರಿಸಿ ಪೂರೈಕೆ ಸುಗಮಗೊಳಿಸಲು ಸಿದ್ಧತೆಗಳನ್ನು ತ್ವರಿತಗೊಳಿಸುವಂತೆ ಎಸ್ಕಾಂಗಳ ವ್ಯವಸ್ಥಾಪಕ ನಿರ್ದೇಶಕರಿಗೆ ಅವರು ಸೂಚಿಸಿದರು.

ಸಭೆಯಲ್ಲಿ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ.ಎ. ರಾಮ ಪ್ರಸಾತ್ ಮನೋಹರ್, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಎನ್. ಶಿವಶಂಕರ, ಪಿಸಿಕೆಎಲ್ ವ್ಯವಸ್ಥಾಪಕ ನಿರ್ದೇಶಕರಾದ ಪಿ.ಕೆ. ವೆಂಕಟೇಶ್, ಕೆಆರ್‌ಇಡಿಎಲ್ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಪಿ. ರುದ್ರಪ್ಪಯ್ಯ ಸೇರಿ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಎಲ್ಲಾ ಎಸ್ಕಾಂಗಳ ವ್ಯವಸ್ಥಾಪಕ ನಿರ್ದೇಶಕರು ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಿದ್ದರು.

# ಸಂಚಾರ ನಿಯಮ ಉಲ್ಲಂಘನೆ: ದಂಡ ಪಾವತಿಯಲ್ಲಿ ರಿಯಾಯಿತಿ ಘೋಷಣೆಯಾದ ಬಳಿಕ 8.82 ಲಕ್ಷ ಪ್ರಕರಣ ಇತ್ಯರ್ಥ, 26.37 ಕೋಟಿ ಸಂಗ್ರಹ

**ಬೆಂಗಳೂರು, ಜು.9:** ಬಾಕಿ ಉಳಿದಿದ್ದ ಟ್ರಾಫಿಕ್ ಇ–ಚಲನ್ ದಂಡ ಪಾವತಿಯಲ್ಲಿ ಶೇ.50 ರಿಯಾಯಿತಿ ಘೋಷಿಸಿದ ಬಳಿಕ ಕೇವಲ 18 ದಿನಗಳಲ್ಲಿ 8.82 ಲಕ್ಷಕ್ಕೂ ಹೆಚ್ಚು ಪ್ರಕರಣಗಳು ಇತ್ಯರ್ಥಗೊಂಡಿದ್ದು, ಸರ್ಕಾರದ ಬೊಕ್ಕಸಕ್ಕೆ 26.37 ಕೋಟಿಗೂ ಅಧಿಕ ಆದಾಯ ಸಂಗ್ರಹವಾಗಿದೆ.

ಜೂನ್ 21ರಿಂದ ಈ ರಿಯಾಯಿತಿ ಯೋಜನೆ ಜಾರಿಗೆ ಬಂದಿದೆ. ಪೊಲೀಸ್ ಇಲಾಖೆಯಿಂದ ದಾಖಲಾಗಿದ್ದ ಬಾಕಿ ಟ್ರಾಫಿಕ್ ಇ–ಚಲನ್ ಪ್ರಕರಣಗಳಿಗೆ ಈ ಯೋಜನೆ ಅನ್ವಯವಾಗುತ್ತಿದೆ.

ರಾಜ್ಯದಲ್ಲಿ ಹಲವು ವರ್ಷಗಳಿಂದ ಟ್ರಾಫಿಕ್ ನಿಯಮ ಉಲ್ಲಂಘನೆಗೆ ಸಂಬಂಧಿಸಿದ ಇ–ಚಲನ್ ಪ್ರಕರಣಗಳು ಬಾಕಿ ಉಳಿದಿದ್ದವು. ಬೆಂಗಳೂರೊಂದರಲ್ಲೇ ಕೋಟ್ಯಂತರ ರೂಪಾಯಿ ಮೌಲ್ಯದ ಇ–ಚಲನ್ ದಂಡಗಳು ಪಾವತಿಯಾಗದೆ ಉಳಿದಿದ್ದವು. ದಂಡ, ಹೆಚ್ಚುವರಿ ಶುಲ್ಕ ಹಾಗೂ ಬಡ್ಡಿ ಹೆಚ್ಚಾಗುತ್ತಿದ್ದ ಕಾರಣ ಅನೇಕ ವಾಹನ ಮಾಲೀಕರು



ಪಾವತಿಯನ್ನು ಮುಂದೂಡುತ್ತಿದ್ದರು. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ರಾಜ್ಯ ಸರ್ಕಾರವು ಒಂದು ಬಾರಿಯ ಕ್ಷಮಾದಾನ ಯೋಜನೆಯಡಿ ದಂಡದ ಮೊತ್ತದಲ್ಲಿ ಶೇ.50 ರಿಯಾಯಿತಿ ಘೋಷಿಸಿತ್ತು. ಬಾಕಿ ಪ್ರಕರಣಗಳ ಇತ್ಯರ್ಥ, ನ್ಯಾಯಾಲಯಗಳ ಮೇಲಿನ ವ್ಯಾಜ್ಯಗಳ ಒತ್ತಡ ಕಡಿಮೆ ಮಾಡುವುದು, ಸಂಚಾರ ಶಿಸ್ತು ಸುಧಾರಿಸುವುದು ಹಾಗೂ ಸರ್ಕಾರದ ಆದಾಯ ಹೆಚ್ಚಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಈ ಹಿಂದೆ ಮಹಾರಾಷ್ಟ್ರ, ದೆಹಲಿ ಹಾಗೂ ತೆಲಂಗಾಣ ರಾಜ್ಯಗಳಲ್ಲಿಯೂ ಇಂತಹ ಕ್ಷಮಾದಾನ ಯೋಜನೆಗಳನ್ನು ಜಾರಿಗೊಳಿಸಲಾಗಿದ್ದು, ಲಕ್ಷಾಂತರ ಬಾಕಿ ಟ್ರಾಫಿಕ್ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ನೆರವಾಗಿತ್ತು.

ಕರ್ನಾಟಕ ಪೊಲೀಸ್ ಇಲಾಖೆ ವಾಹನ ಮಾಲೀಕರಿಗೆ ಎಸ್‌ಎಂಎಸ್ ಹಾಗೂ ಇತರ ಸೂಚನೆಗಳನ್ನು ಕಳುಹಿಸುವ ಮೂಲಕ, ರಿಯಾಯಿತಿ ಅವಧಿಯಲ್ಲಿ ಆನ್‌ಲೈನ್, ಬೆಂಗಳೂರು ಒನ್ ಕೇಂದ್ರಗಳು ಅಥವಾ ಸಂಚಾರ ಪೊಲೀಸ್ ಠಾಣೆಗಳ ಮೂಲಕ ಬಾಕಿ ದಂಡವನ್ನು ಪಾವತಿಸುವಂತೆ ಮನವಿ ಮಾಡುತ್ತಿದೆ.

ಅಧಿಕೃತ ಅಂಕಿಅಂಶಗಳ ಪ್ರಕಾರ, ಜೂನ್ 21ರಿಂದ ಜುಲೈ 8ರವರೆಗೆ ವಿವಿಧ ಪಾವತಿ ವಿಧಾನಗಳ ಮೂಲಕ ಒಟ್ಟು 8,82,290 ಬಾಕಿ ಟ್ರಾಫಿಕ್ ಇ–ಚಲನ್ ಪ್ರಕರಣಗಳು ಇತ್ಯರ್ಥಗೊಂಡಿವೆ.

ಈ 18 ದಿನಗಳ ಅವಧಿಯಲ್ಲಿ ಸರ್ಕಾರ 26,37,79,300 (26.37 ಕೋಟಿ)ರೂ ಮೊತ್ತವನ್ನು ಸಂಗ್ರಹಿಸಿದೆ. ಯೋಜನೆಗೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಇನ್ನೂ ಬಾಕಿ ಇ–ಚಲನ್ ಹೊಂದಿರುವ ವಾಹನ ಮಾಲೀಕರು ಯೋಜನೆ ಮುಕ್ತಾಯವಾಗುವ ಮುನ್ನವೇ ಈ ರಿಯಾಯಿತಿಯ ಪ್ರಯೋಜನ ಪಡೆಯುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ನಿಗದಿತ ಅವಧಿ ಮುಗಿದ ಬಳಿಕ ಪೂರ್ಣ ಪ್ರಮಾಣದ ದಂಡ, ಹೆಚ್ಚುವರಿ ಶುಲ್ಕ ಹಾಗೂ ಅಗತ್ಯವಿದ್ದರೆ ಕಾನೂನು ಕ್ರಮಗಳು ಮತ್ತೆ ಜಾರಿಗೆ ಬರಲಿವೆ ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

# ಭ್ರಷ್ಟಾಚಾರ ಆರೋಪಕ್ಕೆ 160 ಪುಟಗಳ ದಾಖಲೆ ಸಮೇತ ಉತ್ತರಿಸಿದ ಶಾಸಕ ಸುರೇಶ್‌ಕುಮಾರ್

**ಬೆಂಗಳೂರು, ಜು.9:** ತಮ್ಮ ವಿರುದ್ಧದ ಭ್ರಷ್ಟಾಚಾರ ಆರೋಪ ಮಾಡಿ ಲೋಕಾಯುಕ್ತಕ್ಕೆ ದೂರು ಸಲ್ಲಿಕೆ ಸಂಬಂಧ 160 ಪುಟಗಳ ದಾಖಲೆಗಳೊಂದಿಗೆ ರಾಜಾಜಿನಗರ ಕ್ಷೇತ್ರ ಶಾಸಕ ಎಸ್. ಸುರೇಶ್‌ಕುಮಾರ್ ಉತ್ತರ ನೀಡಿದ್ದಾರೆ.

ತಮ್ಮ ವಿರುದ್ಧ ಓರ್ವ ವ್ಯಕ್ತಿ ಕರ್ನಾಟಕ ಲೋಕಾಯುಕ್ತರ ಬಳಿ ದೂರು ಸಲ್ಲಿಸಿರುವುದು ಮಾಧ್ಯಮಗಳ ಮೂಲಕ ತಿಳಿದಿದ್ದು, ದೂರಿನ ಅಂಶಗಳನ್ನು ಅಧ್ಯಯನ ಮಾಡಿದ ನಂತರ ಲೋಕಾಯುಕ್ತರಿಗೆ ಉತ್ತರ ನೀಡುವುದಾಗಿ ತಕ್ಷಣವೇ ತಿಳಿಸಿದ್ದೆ. ಹೀಗಾಗಿ ಲೋಕಾಯುಕ್ತರಿಂದ ಯಾವುದೇ ನೋಟೀಸ್ ಅಥವಾ ಸಂದೇಶ ಬರದಿದ್ದರೂ ಸ್ವಯಂ ಪ್ರೇರಿತವಾಗಿ ಸುದೀರ್ಘ ಉತ್ತರ ನೀಡಿರುವುದಾಗಿ ತಿಳಿಸಿದ್ದಾರೆ.

ಜನಪ್ರತಿನಿಧಿಗಳು ಟೆಂಡರ್ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ನಿಯಮಾನುಸಾರ ಅವಕಾಶವಿಲ್ಲ. ಹೀಗಾಗಿ ಟೆಂಡರ್ ಕುರಿತಂತೆ ಯಾವುದೇ ಕಡತದ ಮೇಲೆ ನಾವು



ನಿರ್ಧಾರ ಕೈಗೊಂಡು ಸಹಿ ಹಾಕುವ ಅನುಮೋದನೆ ಮಾಡುವ ಅವಕಾಶ ಇರುವುದಿಲ್ಲ. ಇದೆಲ್ಲವೂ ಕಾನೂನು ಮತ್ತು ನಿಯಮಗಳ ಅನುಸಾರವಾಗಿ ಸಂಬಂಧಪಟ್ಟ ಅಧಿಕಾರಿಗಳು ನಡೆಸಬೇಕಿರುವ ಕಾರ್ಯ. ಹೀಗಿರುವಾಗ ನನ್ನ ವಿರುದ್ಧ ಸಲ್ಲಿಸಿರುವ ಈ ದೂರಿನಲ್ಲಿ ತೋರಿಸಿರುವ ಯಾವುದೇ ಅಂಶದಲ್ಲಿ ಕಿಂಚಿತ್ತೂ ಹುರುಳಿಲ್ಲ ಎಂಬುದನ್ನು ಲೋಕಾಯುಕ್ತರಿಗೆ ನೀಡಿರುವ ಉತ್ತರದಲ್ಲಿ ಸ್ಪಷ್ಟಪಡಿಸಿದ್ದೇನೆ ಎಂದು ಸುರೇಶ್ ಕುಮಾರ್ ಹೇಳಿದ್ದಾರೆ.

ಯಾರೋ ಬೇನಾಮಿ ಗುತ್ತಿಗೆದಾರರಿಗೆ ಸಹಾಯ ಮಾಡಿದ್ದೇನೆ, ನಗರ ಪಾಲಿಕೆಗೆ 300 ಕೋಟಿ ರೂ. ನಷ್ಟ ಉಂಟಾಗುವಂತೆ ಮಾಡಿದ್ದೇನೆ ಎಂಬ ಹಸಿ ಸುಳ್ಳಿನಿಂದ ಕೂಡಿರುವ ಆರೋಪವನ್ನು ಸಂಪೂರ್ಣವಾಗಿ ಅಲ್ಲಗೆಳೆದಿದ್ದು, ಆರೋಪ ಮಾಡಿರುವವರು ಆ ಸಂಬಂಧ ಒಂದೇ ಒಂದು ಪುರಾವೆಯನ್ನೂ ಒದಗಿಸಿರುವುದಿಲ್ಲ. ನನ್ನ ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ, ಗುತ್ತಿಗೆ ವಿಚಾರದಲ್ಲಾಗಲಿ ಅಥವಾ ಇನ್ಯಾವುದೇ ಕಾರ್ಯ ದಲ್ಲಾಗಲಿ, ಕಾನೂನುಬಾಹಿರವಾಗಿ ನಿಯಮ ಉಲ್ಲಂಘಿಸಿ ಕಾರ್ಯವೆಸಗಿಲ್ಲ ಎಂದು ಸುರೇಶ್ ಕುಮಾರ್ ಹೇಳಿದ್ದಾರೆ. ಅನೇಕ ಪ್ರಮಾದಗಳನ್ನು ಎಸಗಿರುವ ಗುತ್ತಿಗೆದಾರನ ಪರವಾಗಿ ತನ್ನ ವಿರುದ್ಧ ಈ ದೂರು ಸಲ್ಲಿಸಲಾಗಿದೆ ಎಂಬ ಬಗ್ಗೆಯೂ ಲೋಕಾಯುಕ್ತರ ಗಮನಕ್ಕೆ ತಂದಿದ್ದೇನೆ. ಇದೊಂದು ಶುದ್ಧ ರಾಜಕೀಯ ಪ್ರೇರಿತ. ನನ್ನ ವ್ಯಕ್ತಿತ್ವಕ್ಕೆ ಮಸಿ ಬಳಿಯುವುದೇ ಈ ಸುಳ್ಳು ದೂರಿನ ಉದ್ದೇಶ ಎಂದು ಸುರೇಶ್ ಕುಮಾರ್ ಹೇಳಿದ್ದಾರೆ.

# ಜಿಬಿಎ ಚುನಾವಣೆ ಮತ್ತೆ ಮುಂದೂಡಬೇಡಿ:ವಿಶ್ವನಾಥ್ ಆಗ್ರಹ

**ಬೆಂಗಳೂರು, ಜು.9:** ನೆಪ ಕಾರಣ ಹೇಳಿ ಮತ್ತೆ ಜಿಬಿಎ ಹಾಗೂ ಇತರೆ ಸ್ಥಳೀಯ ಸಂಸ್ಥೆ ಚುನಾವಣೆಯನ್ನು ಮುಂದೂಡಬಾರದು. ಆದಷ್ಟು ಬೇಗ ಚುನಾವಣೆಯನ್ನು ಸರ್ಕಾರ ನಡೆಸಬೇಕು ಎಂದು ಶಾಸಕ ಎಸ್.ಆರ್.ವಿಶ್ವನಾಥ್ ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗ ಎಸ್‌ಐಆರ್ ನಡೆಯುತ್ತಿದೆ. ಅದು ಸದ್ಯದಲ್ಲೇ ಮುಗಿಯಲಿದೆ. ಕೂಡಲೇ ಜಿಬಿಎ ಚುನಾವಣೆ ನಡೆಸಬೇಕು. ಸದ್ಯ ಜಿಬಿಎ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿಗಳಲ್ಲಿ ಜನಪ್ರತಿನಿಧಿಗಳು ಇಲ್ಲ. ಆದ್ದರಿಂದ ಎಲ್ಲದಕ್ಕೂ ಶಾಸಕರನ್ನೇ ಅವಲಂಬಿಸಬೇಕಾದ ಸ್ಥಿತಿ ಇದೆ. ಇನ್ನಾದರೂ ಕಾರಣ ಹೇಳದೆ ಸ್ಥಳೀಯ ಸಂಸ್ಥೆ ಚುನಾವಣೆ ನಡೆಸಬೇಕು ಎಂದು ಒತ್ತಾಯಿಸಿದರು.

ಜಿಬಿಎ ಚುನಾವಣೆ ಮುಂದೂಡಲು ರಾಜ್ಯ ಸರ್ಕಾರ ಹಲವು ಕಾರಣ ನೀಡಿದೆ. ಸುಪ್ರೀಂಕೋರ್ಟ್ ಸಹ ಮುಂದೂಡಲು ಅವಕಾಶ ನೀಡಿದೆ. ಅದರೆ ಇನ್ನು ಮುಂದೆ ಮುಂದೂಡಲು ಅವಕಾಶ ಇಲ್ಲ ಎಂದು ಸ್ಪಷ್ಟವಾಗಿ ಹೇಳಿದೆ. ಆದ್ದರಿಂದ ಈ ತಿಂಗಳ ಒಳಗೆ ಚುನಾವಣೆ ದಿನಾಂಕ ನಿಶ್ಚಯವಾದರೆ ಒಳ್ಳೆಯದು. ಬಿಜೆಪಿ ಮತ್ತು ಜೆಡಿಎಸ್ ನಡುವೆ ಸಮನ್ವಯ ಸಮಿತಿ ಬೇಕು ಎಂಬ ಬೇಡಿಕೆ ಸರಿ ಇದೆ. ಜಿಬಿಎನಲ್ಲಿ ಜೆಡಿಎಸ್‌ಗೂ ಸ್ಥಾನ ನೀಡಬೇಕು. ಎಲ್ಲಿ ಸ್ಥಾನಗಳನ್ನು ಕೊಡಬೇಕು, ಅಭ್ಯರ್ಥಿಗಳು ಯಾರು ಎಂಬುದನ್ನು ತೀರ್ಮಾನ ಮಾಡಲು ಎರಡೂ ಪಕ್ಷಗಳ ನಡುವೆ ಸಮನ್ವಯ ಸಮಿತಿ ಇರಬೇಕು. ಜಿಬಿಎ ಸಂಬಂಧ ಸಮನ್ವಯ ಸಮಿತಿ ಮಾಡುತ್ತೇವೆ ಎಂದು ಹೇಳಿದ್ದಾರೆ. ಸಮಿತಿ ಶೀಘ್ರದಲ್ಲೇ ಆಗಲಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಜಿಬಿಎ ಚುನಾವಣೆ ಸಂಬಂಧ ಪ್ರಣಾಳಿಕೆ ಮಾಡಲು ಒಂದು ತಂಡ ರಚಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈಚೆಗೆ ನಡೆದ ಸಭೆಯಲ್ಲಿ ಕೆಲವರಿಗೆ ಜವಾಬ್ದಾರಿ ನೀಡಲಾಗಿದೆ. ಶಾಸಕ ಡಾ. ಸಿ ಎನ್ ಅಶ್ವತ್ಥ್ ನಾರಾಯಣ ಅವರ ನೇತೃತ್ವದಲ್ಲಿ ಸಮಿತಿ ಆಗಬಹುದು. ಈಗಾಗಲೇ ಪ್ರತ್ಯೇಕ ಜಿಬಿಎಗಳಿಗೆ ಆಯಾ ಪ್ರದೇಶಕ್ಕೆ



ಅನುಗುಣಕ್ಕೆ ಸರಿಯಾದ ಪ್ರತ್ಯೇಕ ಪ್ರಣಾಳಿಕೆ ಮಾಡುವ ಉದ್ದೇಶ ಇದೆ. ಜಿಬಿಎಗಳಿಗೆ ಅಭ್ಯರ್ಥಿಗಳು ಮತ್ತು ಸಂಘಟನೆಯ ಬಗ್ಗೆ ಚರ್ಚೆ ನಡೆಸಲಾಗುವುದು.ಪಕ್ಷದ ರಾಜ್ಯಾಧ್ಯಕ್ಷರು ಮತ್ತು ವಿರೋಧ ಪಕ್ಷದ ನಾಯಕರು ಬರಲಿದ್ದಾರೆ. ಮಾಜಿ ಮುಖ್ಯಮಂತ್ರಿ ಗಳಾದ ಬಿ.ಎಸ್. ಯಡಿಯೂರಪ್ಪ, ಸದಾನಂದ ಗೌಡ ಎಲ್ಲರೂ ಒಟ್ಟಾಗಿ ಪ್ರವಾಸ ಮಾಡಲಿದ್ದಾರೆ ಎಂದರು.

ಪಕ್ಷದ ಕೆಲವರ ಜೊತೆಗಿನ ಭಿನ್ನಾಭಿಪ್ರಾಯ ಮರೆತು ಸಂಘಟನೆಯಲ್ಲಿ ತೊಡಗಿಸಿಕೊಳ್ಳುತ್ತೇವೆ. ಮುಂದೆ ಬರುವ ಸ್ಥಳೀಯ ಸಂಸ್ಥೆ ಚುನಾವಣೆ ಇರಬಹುದು, ವಿಧಾನಸಭಾ ಚುನಾವಣೆ ಗಮನದಲ್ಲಿಟ್ಟುಕೊಂಡು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಕನಿಷ್ಠ ನಾಲ್ಕು ಶಾಸಕರು ಗೆಲ್ಲಲು ಸಂಸದ ಡಾ. ಕೆ ಸುಧಾಕರ್ ಅವರೊಂದಿಗೆ ಕೆಲಸ ಮಾಡುತ್ತೇನ. ಚಿಕ್ಕಬಳ್ಳಾಪುರದಲ್ಲಿ ನಾಲ್ಕು ಚುನಾವಣೆಗಳಿಗೆ ನಾನು ಉಸ್ತುವಾರಿ ಯಾಗಿ ಕೆಲಸ ಮಾಡಿದ್ದೇನೆ. ಹಿಂದೆ ಅಚಾನಕ್ ಆಗಿ ಮಾತನಾಡಿರಬಹುದು. ನಮ್ಮದೂ ತಪ್ಪು ಇರಬಹುದು. ಅವೆಲ್ಲ ಮರೆತು ಮುಂದೆ ಎಲ್ಲರನ್ನೂ ಒಟ್ಟಾಗಿ ತೆಗೆದುಕೊಂಡು ಹೋಗುತ್ತೇವೆ. ಜೊತೆಯಲ್ಲಿದ್ದು ಪಕ್ಷ ಸಂಘಟನೆ ಮಾಡಲಾಗುವುದ. ಯಲಹಂಕ ಕ್ಷೇತ್ರದಲ್ಲಿ ಎಸ್‌ಐಆರ್ ಗೊಂದಲ ಇಲ್ಲ. ಎಲ್ಲ ಸುಸೂತ್ರವಾಗಿ ನಡೆಯುತ್ತಿದೆ. ಬಿಎಲ್‌ಓಗಳ ಜೊತೆಗೆ ಬಿಎಲ್‌ಎಗಳು ಹೊಂದಾಣಿಕೆಯಿಂದ ಕೆಲಸ ಮಾಡುತ್ತಿದ್ದಾರೆ. ಅರ್ಜಿ ನೀಡಲು ಮನೆಮನೆಗೆ ಹೋಗಲು ಹೇಳಿದ್ದೇವೆ ಎಂದರು.

# ಬೆಂಗಳೂರು ಕಾರ್ಯನಿರತ ಪತ್ರಕರ್ತರ ಸಂಘದಿಂದ ನಾಳೆ ಪತ್ರಿಕಾ ದಿನಾಚರಣೆ

**ಬೆಂಗಳೂರು, ಜು.9:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಂಗಸಂಸ್ಥೆಯಾದ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜುಲೈ 11ರಂದು ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಿದೆ.

ವಿಜಯನಗರದ ಮೆಟ್ರೋ ನಿಲ್ದಾಣದ ಸಮೀಪವಿರುವ ಶ್ರೀ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಶನಿವಾರ ಬೆಳಗ್ಗೆ 11 ಗಂಟೆಗೆ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಹಿರಿಯ ಪತ್ರಕರ್ತರನ್ನು ಸನ್ಮಾನಿಸಲಾಗುವುದು.

ಆದಿಚುಂಚನಗಿರಿ ಶಾಖಾ ಮಠದ ಸೌಮ್ಯನಾಥ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಉದ್ಘಾಟಿಸಲಿದ್ದಾರೆ. ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ನೂತನ ಸದಸ್ಯರಿಗೆ ಸದಸ್ಯತ್ವ ಗುರುತಿನ ಚೀಟಿಗಳನ್ನು ವಿತರಿಸಲಿದ್ದು, ಮಾಜಿ ಸಚಿವರು ಹಾಗೂ ಮಹಾಲಕ್ಷ್ಮಿ




ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಗೋಪಾಲಯ್ಯ ಅವರು ಕಲಾತಂಡಗಳಿಗೆ ಚಾಲನೆ ನೀಡಲಿದ್ದಾರೆ.


ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್. ಸೋಮಶೇಖರ ಗಾಂಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ವಿಜಯವಾಣಿ ದಿನಪತ್ರಿಕೆಯ ಸಂಪಾದಕ ಕೆ.ಎನ್. ಚನ್ನೇಗೌಡ ಅವರು ದಿಕ್ಸೂಚಿ ನುಡಿ ನೀಡಲಿದ್ದು, ನಿಕಟಪೂರ್ವ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಹಿತನುಡಿ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಆಶಯ ನುಡಿಗಳನ್ನು ನೀಡಲಿದ್ದಾರೆ.

ಸಾರ್ವಜನಿಕ ಸ್ಥಳಗಳಲ್ಲಿರುವ ಅನಾಥ ವಾಹನಗಳ ತೆರವಿಗೆ ಇಂದು ಚಾಲನೆ

# 7 ದಿನದ ನಂತರ ವಾಹನ ಜಪ್ತಿ ನಿಯಮಾನುಸಾರ ಹರಾಜು: ಜಿಬಿಎ

**ಬೆಂಗಳೂರು, ಜು.9:** ರಾಜಧಾನಿಯ ರಸ್ತೆ, ಸಾರ್ವಜನಿಕ ಸ್ಥಳಗಳು ಹಾಗೂ ಖಾಲಿ ಪ್ರದೇಶಗಳಲ್ಲಿ ಅನಾಥವಾಗಿ ಬಿಟ್ಟಿರುವ ವಾಹನಗಳ ವಿರುದ್ಧ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಕಠಿಣ ಕ್ರಮಕ್ಕೆ ಮುಂದಾಗಿದೆ. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ನಿರ್ದೇಶನದಂತೆ, ಜಿಬಿಎ ಕಾಯ್ದೆ ಅನ್ವಯ ಜು.10ರಿಂದ ಐದು ನಗರ ಪಾಲಿಕೆಗಳು ಮತ್ತು ಸಂಚಾರ ಪೊಲೀಸರು ಜಂಟಿಯಾಗಿ ಅನಾಥ ವಾಹನಗಳ ತೆರವು ಕಾರ್ಯಾಚರಣೆ ಆರಂಭಿಸಲಿದ್ದಾರೆ.

ನಗರದ ರಸ್ತೆ, ಸಾರ್ವಜನಿಕ ಸ್ಥಳಗಳು ಮತ್ತು ತೆರೆದ ಪ್ರದೇಶಗಳಲ್ಲಿ ಹಲವು ದಿನಗಳಿಂದ ನಿಲ್ಲಿಸಲಾಗಿರುವ ಅನಾಥ ವಾಹನಗಳನ್ನು ಗುರುತಿಸಿ, ನಿಯಮಾನುಸಾರ ತೆರವುಗೊಳಿಸಿ ಹರಾಜು ಹಾಕುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ವಾಹನಗಳಿಂದ ಸಂಚಾರ ದಟ್ಟಣೆ, ಸಾರ್ವಜನಿಕರಿಗೆ ತೊಂದರೆ ಹಾಗೂ ಸ್ವಚ್ಛತೆಗೆ



ಉಂಟಾಗುತ್ತಿರುವ ಸಮಸ್ಯೆಗಳನ್ನು ನಿವಾರಿಸುವ ಉದ್ದೇಶ ದಿಂದ ಈ ಕ್ರಮ ಕೈಗೊಳ್ಳಲಾಗಿದೆ.

ಗುರುತಿಸಲಾದ ಅನಾಥ ವಾಹನಗಳಿಗೆ 7 ದಿನಗಳ ಕಾಲಾವಕಾಶ ನೀಡಿ ಅಧಿಕೃತ ಸ್ಟಿಕ್ಕರ್ ಮಾದರಿಯ ನೋಟಿಸ್ ಅಂಟಿಸಲಾಗುತ್ತದೆ. ನೋಟಿಸ್ ಅಂಟಿಸಿದ ವಾಹನಗಳ ಚಕ್ರಗಳಿಗೆ ವೀಲ್ ಕ್ಲ್ಯಾಂಪ್ ಅಳವಡಿಸಲಾಗುತ್ತದೆ. 7 ದಿನಗಳೊಳಗೆ ವಾಹನ ಮಾಲೀಕರು ವಾಹನವನ್ನು ತೆರವುಗೊಳಿಸದಿದ್ದರೆ, ಟೋಯಿಂಗ್ ಮೂಲಕ ವಾಹನವನ್ನು ಜಪ್ತಿ ಮಾಡಲಾಗುತ್ತದೆ. ಜಪ್ತಿ ಮಾಡಿದ ವಾಹನಗಳನ್ನು ನಿಯಮಾನುಸಾರ ಬಹಿರಂಗ ಹರಾಜು ಮಾಡಲಾಗುತ್ತದೆ.

ರಸ್ತೆ, ಸಾರ್ವಜನಿಕ ಸ್ಥಳ ಅಥವಾ ಖಾಲಿ ಜಾಗಗಳಲ್ಲಿ ನಿಮ್ಮ ಯಾವುದೇ ವಾಹನವನ್ನು ದೀರ್ಘಕಾಲದಿಂದ ಬಿಟ್ಟು ಹೋಗಿದ್ದರೆ, ತಕ್ಷಣವೇ ಅದನ್ನು ನಿಮ್ಮ ಸ್ವಂತ ಜಾಗಕ್ಕೆ ಸ್ಥಳಾಂತರಿಸಿ ಕೊಳ್ಳುವಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮನವಿ ಮಾಡಿದೆ. ಸೂಚನೆಯನ್ನು ಪಾಲಿಸದಿದ್ದರೆ ವಾಹನವನ್ನು ಜಪ್ತಿ ಮಾಡಿ ಹರಾಜು ಹಾಕಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.



ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘದ ಸದಸ್ಯರು ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ವೇತನ ಪರಿಷ್ಕರಣೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

# ಶಾಲಾ ಕಟ್ಟಡ ಶಿಥಿಲ, ಜೀವಭಯದಲ್ಲಿ ಮಕ್ಕಳು

**ಕಲಬುರಗಿ, ಜು. 9:** ಶಿಥಿಲಾವಸ್ಥೆಯ ಕಟ್ಟಡ, ಮಳೆ ಬಂದರೆ ಸೋರುವ ಕೊಠಡಿಗಳು, ಬಿರುಕು ಬಿಟ್ಟ ಗೋಡೆಗಳು, ಮುಟ್ಟಿದರೆ ನಡುಗುತ್ತಿರುವ ಕಟ್ಟಡದ ಕಾಲಂಗಳು, ಇದ್ದರೂ ಬಳಕೆಗೆ ಬಾರದ ಶುದ್ಧ ನೀರಿನ ಘಟಕ, ಮಳೆ ಬಂದರೆ ಸಾಕು ಶಾಲೆಗೆ ನುಗ್ಗುವ ಮುಖ್ಯರಸ್ತೆಯ ನೀರು, ನಿತ್ಯ ಜೀವಭಯದಲ್ಲಿಯೇ ಶಿಕ್ಷಣ ಪಡೆಯುತ್ತಿರುವ ಮಕ್ಕಳು...

ಇದು ಜಿಲ್ಲೆಯ ಏರ್‌ಪೋರ್ಟ್ ರಸ್ತೆಯ ಓಂನಗರ ಬಡಾವಣೆಯಲ್ಲಿರುವ ಹಿರಿಯ ಪ್ರಾಥಮಿಕ ಶಾಲೆಯ ದುಸ್ಥಿತಿ. 1997ರಲ್ಲಿ ಈ ಶಾಲೆ ಆರಂಭವಾಗಿದ್ದು, ಇಲ್ಲಿ ಒಂದರಿಂದ ಏಳರವರೆಗೆ ತರಗತಿಗಳು ನಡೆಯುತ್ತಿವೆ. ಬಡಾವಣೆಯ ಕೂಲಿ ಕಾರ್ಮಿಕರ ಹಾಗೂ ಬಡವರ 120ಕ್ಕೂ ಹೆಚ್ಚು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಶಾಲೆಯಲ್ಲಿ ಏಳು ಕೊಠಡಿಗಳಿದ್ದು, ಈ ಹಿಂದೆ ಶಿಕ್ಷಣ ಇಲಾಖೆ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ, ಕಟ್ಟಡದ ಗುಣಮಟ್ಟ ಪರಿಶೀಲಿಸಿ ಮೂರು ಕೋಣೆಗಳು ಶಿಥಿಲವಾಗಿದ್ದರಿಂದ ತೆರವು ಮಾಡಲು ಆದೇಶ ಮಾಡಲಾಗಿದೆ.

ಇನ್ನು ಎರಡು ಕೋಣೆ ಚೆನ್ನಾಗಿ ಇದೆ ಎಂದು ಹೇಳಿದರೂ ಕೊಠಡಿಗಳು ಶಿಥಿಲಾವಸ್ಥೆ ತಲುಪಿವೆ. ಕೊಠಡಿಗಳ ಕೊರತೆಯಿಂದ ಇಲ್ಲಿಯೇ ಮಕ್ಕಳಿಗೆ ಶಿಕ್ಷಣ ನೀಡಲಾಗುತ್ತಿದೆ. ಇಲ್ಲಿ ಕಳಪೆ



ಕಾಮಗಾರಿಯಿಂದ ಮಕ್ಕಳು ಕುಳಿತುಕೊಳ್ಳುವ ನೆಲದ ಹಾಸು ಕೆಳಕ್ಕೆ ಇಳಿದಿದೆ. ಕಟ್ಟಡದ ಗೋಡೆಗಳು ಬಿರುಕು ಬಿಟ್ಟಿದ್ದು, ಬೀಳುವ ಸ್ಥಿತಿ ತಲುಪಿವೆ. ಕಟ್ಟಡದ ಮುಂದೆ ಹಾಕಲಾದ ಕಾಲಂಗಳು ಬಿರುಕು ಬಿಟ್ಟಿದ್ದು, ಕೈ ತಾಗಿದರೆ ಸಾಕು ಅಲುಗಾಡುತ್ತವೆ. ಕೊಠಡಿಯ ಚಾವಣಿ ಹಾಗೂ ಕಾಲಂಗಳ ಮಧ್ಯೆ ಅಂತರ ಕಾಣುತ್ತಿದೆ. ಏನಾದರೂ ಅನಾಹುತ ಸಂಭವಿಸಿದರೆ ಯಾರು ಹೊಣೆ ಎಂಬುವುದು ಮಕ್ಕಳ ಪೋಷಕರ ಪ್ರಶ್ನೆಯಾಗಿದೆ.

ಒಂದು ಕೋಣೆಯನ್ನು ಆಫೀಸ್ ಕಚೇರಿಯಾಗಿ ಬಳಕೆ ಮಾಡಲಾಗುತ್ತಿದೆ. 2022ರಲ್ಲಿ ಎರಡು ಹೊಸ ಕೋಣೆಗಳನ್ನು ನಿರ್ಮಿಸಲಾಗಿದೆ. ಇಲ್ಲಿ ಆರು ಮತ್ತು ಏಳನೇ ತರಗತಿ ವಿದ್ಯಾರ್ಥಿಗಳಿಗಾಗಿ ಬಳಕೆ ಮಾಡಲಾಗುತ್ತಿದೆ. ಕೊಠಡಿ ಸಮಸ್ಯೆಯಿಂದ ವಿದ್ಯಾರ್ಥಿಗಳು ಸಮಸ್ಯೆ ಎದುರಿಸುತ್ತಿದ್ದಾರೆ. ಕುಳಿತು ಊಟ ಮಾಡಲು ಸೂಕ್ತ ಜಾಗವಿಲ್ಲ. ಶಿಥಿಲ ಕಟ್ಟಡದಲ್ಲಿಯೇ ಕುಳಿತು ಮಕ್ಕಳು ಊಟ ಮಾಡುತ್ತಾರೆ. ಇಕ್ಕಟ್ಟಾದ ಸ್ಥಳದಲ್ಲಿ ಶಾಲೆ ನಿರ್ಮಾಣ ಮಾಡಲಾಗಿದ್ದು, ಮಕ್ಕಳು ಆಟವಾಡಲು ಸ್ಥಳ ಇಲ್ಲ. ಈ ಹಿಂದೆ ನಿರ್ಮಾಣ ಮಾಡಲಾದ ಶಾಲೆಯ ಕಾಂಪೌಂಡ್ ಗೋಡೆಗೆ ಸಮನಾದ ಎತ್ತರಕ್ಕೇ ರಸ್ತೆ ಇದೆ. ಹೀಗಾಗಿ ನಾಯಿ, ಹಂದಿಗಳು ಶಾಲೆಗೆ ನುಗ್ಗುತ್ತಿವೆ. ಶಾಲೆಗೆ ಕಾಂಪೌಂಡ್ ನಿರ್ಮಿಸಬೇಕು. ಹೊಸ ಕೊಠಡಿಗಳು ನಿರ್ಮಾಣ ಮಾಡಬೇಕು ಎನ್ನುತ್ತಾರೆ ಸ್ಥಳೀಯರು.

ಮಳೆ ಬಂದರೆ ಸಾಕು ರಸ್ತೆಯಲ್ಲಿ ರುವ ನೀರು ಶಾಲೆಯ ಒಳಗೆ ನುಗ್ಗುತ್ತದೆ. ನಿತ್ಯ ವಿದ್ಯಾರ್ಥಿಗಳು ಸಮಸ್ಯೆ ಎದುರಿಸುತ್ತಿದ್ದಾರೆ. ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳು ಸಮಸ್ಯೆ ಪರಿಹರಿಸಬೇಕು ಶಿವಶರಣಪ್ಪ ನರೋಣ, ಶಾಲೆಯ ಮುಖ್ಯಶಿಕ್ಷಕ ಶಾಲೆಯಲ್ಲಿ ಮಕ್ಕಳ ಸಂಖ್ಯೆ ಜಾಸ್ತಿಯಾಗಿ ರುವುದರಿಂದ ಶಿಥಿಲಗೊಂಡ ಕೊಠಡಿಗಳನ್ನು ಕೆಡವಿ ನಾಲ್ಕು ಕೋಣೆಗಳ ನಿರ್ಮಾಣ ಮಾಡಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ನಿವಾಸಿಗಳು ತಿಳಿಸಿದರು.

# ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಯ ನಿರ್ಲಕ್ಷ್ಯ ಸಲ್ಲದು: ಖಾದರ್ ಎಚ್ಚರಿಕೆ



**ಬೀದರ್, ಜು. 9:** ಜಿಕಲ್ಲೆಯ ಹುಮನಾಬಾದ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸೂಕ್ತವಾಗಿ ಚಿಕಿತ್ಸೆ ಸಿಗುತ್ತಿಲ್ಲ ಎಂಬ ಆರೋಪಗಳು ಕೇಳಿ ಬರುತ್ತಿರುವ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಭೇಟಿ ನೀಡಿದ ಆರೋಗ್ಯ ಸಚಿವ ಯು.ಟಿ.ಖದರ ಅವರು, ನಿರ್ಲಕ್ಷ್ಯವನ್ನು ಸಹಿಸುವದಿಲ್ಲ ಎಂದು ಎಚ್ಚರಿಕೆ ನೀಡಿದರು.

ಈ ದೂರುಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ, ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವ ಯು.ಟಿ. ಖಾದರ್ ಅವರಿಗೆ ತಿಳಿಸಿದರು.

ನಿತ್ಯವೂ ಸಾವಿರಾರು ಜನರು ಆಸ್ಪತ್ರೆಗೆ ಭೇಟಿ ನೀಡುತ್ತಾರೆ. ಅಂತಹ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಒದಗಿಸುವಂತೆ ಆಗ್ರಹಿಸಿದರು.

ನಂತರ ಸಚಿವರು ಮಾತನಾಡಿ, ವೈದ್ಯಾಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಬಡರೋಗಿಗಳಿಗೆ ಚಿಕಿತ್ಸೆ ನೀಡುವಲ್ಲಿ ನಿರ್ಲಕ್ಷ ವಹಿಸಿದರೆ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ರುದ್ರಂ ಪಾಟೀಲ, ದತ್ತಕುಮಾರ್ ಚಿದ್ರಿ, ಅಫ್ಸರ್ ಮಿಯ್ಯಾ, ಓಂಕಾರ ತುಂಬಾ, ಉಮೇಶ್ ಜಮಗಿ, ಕೇಶಪ್ಪ ಬಿರಾದರ್ ವಿಜಯಕುಮಾರ್ ನಾತೆ, ಶ್ರೀನಾಥ್ ದೇವಣಿ, ಶಂಕರ್ ನಾಗ್ ಸಾಹುಕಾರ, ಅನೀಲ ಮಲ್ಕಾಪುರ್ ವಾಡಿ, ಡಿವೈಎಸ್ಪಿ ಮಡೋಳಪ್ಪ ಪಿ. ಎಸ್, ಸಿಪಿಐ ಸಂತೋಷ್ ತಟ್ಟೆಪಳ್ಳಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಶಿವಕುಮಾರ್ ಸಿದ್ದೇಶ್ವರ, ಸಾರ್ವಜನಿಕ ಆಸ್ಪತ್ರೆ ವೈದ್ಯಾಧಿಕಾರಿ ಬಾಕರ್ ಜಾನಿ, ಡಾ. ಸೈಯದ್ ಮುಸ್ತಾಫಾ ಸೇರಿದಂತೆ ಇತರರು ಇದ್ದರು.

## ಪಶ್ಚಿಮ ಬಂಗಾಳ ಆಗಲು ಬಿಡುವುದಿಲ್ಲ

ಯಾವುದೇ ಕಾರಣಕ್ಕೂ ಕರ್ನಾಟಕ ಪಶ್ಚಿಮ ಬಂಗಾಳ ಆಗಲು ಬಿಡುವುದಿಲ್ಲ. ಅರ್ಹ ಮತದಾರರನ್ನು ಎಸ್‌ಐಆರ್ ಸಂದರ್ಭದಲ್ಲಿ ಕೈಬಿಡಲು ನಾವು ಅವಕಾಶ ಕೊಡುವದಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಹೇಳಿದರು.

ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನಗರಕ್ಕೆ ಆಗಮಿಸಿದ್ದ ಅವರು ಪತ್ರಕರ್ತರೊಂದಿಗೆ ಮಾತ ನಾಡಿ, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕೆಲಸ ಸರ್ಕಾರಕ್ಕೆ ಸಂಬಂಧಿಸಿದ್ದಲ್ಲ. ಇದು ಚುನಾವಣಾ ಆಯೋಗದ ಕೆಲಸ. ಅರ್ಹರು ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎನ್ನುವುದು ನಮ್ಮ ಸರ್ಕಾರದ ಉದ್ದೇಶವಾಗಿದೆ ಎಂದು ತಿಳಿಸಿದರು.

ಯಾರೂ ಕೂಡ ಮತದಾನದ ಹಕ್ಕು ಕಳೆದುಕೊಳ್ಳಬಾರದು. ಇದಕ್ಕೆ ರಾಜ್ಯ ಸರ್ಕಾರ ಆಸ್ಪದ ಮಾಡಿಕೊಡುವುದಿಲ್ಲ. ಮತದಾನದ ಹಕ್ಕು ಖಾತ್ರಿ ಮಾಡುವುದು ಸರ್ಕಾರದ ಉದ್ದೇಶವಾಗಿದೆ. ಏನೇ ಟೀಕೆ ಟಿಪ್ಪಣಿ ಮಾಡುವವರು ಚುನಾವಣಾ ಆಯೋಗದ ಮುಂದೆ ಹೋಗಿ ಹೇಳಬೇಕು. ಎಲ್ಲರೂ 'ಎನ್ಯುಮರೇಷನ್' ಫಾರ್ಮ್ ಭರ್ತಿ ಮಾಡಿ ಕೊಟ್ಟರೆ ಮತದಾನದ ಹಕ್ಕು ಸಿಗುತ್ತದೆ. ಬಡವರು, ನಿರ್ಗತಿಕರಿಗೆ ಇದರ ಬಗ್ಗೆ ಅರಿವು ಇಲ್ಲ. ಕಾಂಗ್ರೆಸ್ ಸರ್ಕಾರ ಅಂಥವರಿಗೆ ಸಹಾಯ ಮಾಡುತ್ತಿದೆ. ಇದು ಎಸ್‌ಐಆರ್ ವೈಫಲ್ಯ ಎಂದು ಹೇಳುವವರ ಬಗ್ಗೆ ನಾನೇನೂ ಪ್ರತಿಕ್ರಿಯಿಸುವುದಿಲ್ಲ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಐದು ವರ್ಷ ಪೂರ್ಣಗೊಳಿಸುತ್ತದೆ. ಈ ಬಗ್ಗೆ ಯಾರಿಗೂ ಸಂಶಯ ಬೇಡ. ನಾವೆಲ್ಲರೂ ಒಗ್ಗಟ್ಟಾಗಿದ್ದೇವೆ. ಜನಸಾಮಾನ್ಯರು ಮತ್ತು ಎಲ್ಲ ವರ್ಗದವರು ಮೆಚ್ಚುವಂಥ ಆಡಳಿತ ಕೊಡುತ್ತೇವೆ. ಜನರ ವಿಶ್ವಾಸವನ್ನು ಗಳಿಸುತ್ತೇವೆ ಎಂದು ಹೇಳಿದರು.

ಕೇಂದ್ರ ನೀತಿ ಆಯೋಗದಿಂದ ಮಹಿಳಾ ಉದ್ಯಮಕ್ಕೆ ಹೆಚ್ಚಿನ ಆದ್ಯತೆ

# ಲಹೋಟಿ ಸ್ಮಾರಕ ಉಪನ್ಯಾಸದಲ್ಲಿ ಮೋಹನ್ ಪಾಲೇಶ ಹೇಳಿಕೆ

–ಡಾ.ಸದಾನಂದ ಪೆರ್ಲ

**ಕಲಬುರಗಿ, ಜು.9 :** ಭಾರತದ ಮಹಿಳೆಯರು ಉದ್ಯಮ ರಂಗದಲ್ಲಿ ಗಣನೀಯ ಸಾಧನೆ ಮಾಡಿ ಭಾರತವು ವಿಶ್ವ ನಾಯಕತ್ವ ವಹಿಸಲು ಸಾಧ್ಯವಾಗಿದೆ ಮತ್ತು ನೀತಿ ಆಯೋಗವು ಮಹಿಳಾ ಉದ್ಯಮಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಪುಣೆಯ ರೋಟರಿ ಜಿಲ್ಲಾ ಮಾಜಿ ಗವರ್ನರ್ ಮೋಹನ್ ಪಾಲೇಶ ಹೇಳಿದರು.

ಕಲಬುರಗಿಯ ಕಲ್ಯಾಣ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ಜುಲೈ 8ರಂದು ಡಾ ಪಿ ಎಸ್ ಶಂಕರ್ ಪ್ರತಿಷ್ಠಾನ ಹಾಗೂ ಲಹೋಟಿ ಮೋಟರ್ಸ್ ಸಹಯೋಗದಲ್ಲಿ ಆಯೋಜಿಸಿದ್ದ ರಮೇಶ್ಚಂದ್ರ ಲಾಹೋಟಿ ಸ್ಮಾರಕ ನಾಲ್ಕನೆಯ ಉಪನ್ಯಾಸ ಮಾಲಿಕೆಯಲ್ಲಿ " "ಮಹಿಳಾ ಉದ್ಯಮಿಗಳ ಉತ್ತೇಜನ ಮತ್ತು ಜೀವನ ಕಲೆ " ಬಗ್ಗೆ ಮಾತನಾಡಿ ದೇಶದಲ್ಲಿ ಶೇ. 22 ರಷ್ಟು ಮಹಿಳಾ ಉದ್ಯಮಿಗಳಿದ್ದು ಎಂಎಸ್‌ಎಂಇ





ರಂಗದಲ್ಲಿ 25 ದಶಲಕ್ಷ ಉದ್ಯೋಗ ಸೃಷ್ಟಿ ಮಾಡಲಾಗಿದೆ.

ಕಿರಣ್ ಮಜುಂದಾರ್, ವಿನುತಾ ಸಿಂಗ್,ಎಂ ಅನಘಾ ಮುಂತಾದ ಪ್ರತಿಷ್ಠಿತ ಮಹಿಳಾ ಸಾಧಕಿಯರ ಉದ್ಯಮ ಕ್ಷೇತ್ರದ ಸಾಧನೆಯಿಂದ ದೇಶ ಮುಂಚೂಣಿಗೆ ಹೆಜ್ಜೆ ಹಾಕುತ್ತಿದೆ .ಗ್ರಾಹಕ ವಸ್ತು, ಸೌಂದರ್ಯ ಪ್ರಸಾಧನ, ಕೌಶಲ್ಯ ಅಭಿವೃದ್ಧಿ, ಆಹಾರ ಸಂಸ್ಕರಣೆ, ಕೃಷಿ ಸಂಸ್ಕರಣೆ ,ಶಿಕ್ಷಣ ಹೀಗೆ ನಾನಾ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿದ್ದಾರೆ. ಮಹಿಳಾ ಉದ್ಯಮಿಗಳ ಆಕರ್ಷಣೆಗಾಗಿ ಸ್ಟಾರ್ಟ್ ಅಪ್,ಮುದ್ರಾ ಯೋಜನೆ ಸೇರಿದಂತೆ ಹಲವು ಉದ್ಯಮಕ್ಕಾಗಿ ಮಹಿಳೆಯರ ಮನೆಬಾಗಿಲಿಗೆ ಹಣಕಾಸು ನೆರವು ಹರಿದು ಬರುತ್ತಿದೆ. ಯೋಜನೆಗಳನ್ನು ಸದ್ಬಳಕೆ ಮಾಡಿ ಅಭಿವೃದ್ಧಿ ಹೊಂದಬೇಕಾಗಿದೆ ಎಂದರು.

ಭಾರತದಲ್ಲಿ ಬದುಕುವ ಕಲೆಗೆ ಸಂಸ್ಕೃತಿ, ಪರಂಪರೆ ದೊಡ್ಡ ಕೊಡುಗೆಯನ್ನು ನೀಡಿದ್ದು ಜೀವನದಲ್ಲಿ ಆಸೆಗೆ ಕಡಿವಾಣ ಹಾಕಿದರೆ ಮಾತ್ರ ಬದುಕು ಸುಂದರವಾಗುತ್ತದೆ ಎಂದು ಮೋಹನ್ ಪಾಲೇಶ ಅಭಿಪ್ರಾಯಪಟ್ಟರು

ಸೇವೆ ಮತ್ತು ತ್ಯಾಗದ ಮೂಲಕ ಎಲ್ಲರ ಮುಖದಲ್ಲಿ ನಗು ಅರಳಿಸುವಂತಾದರೆ ಬದುಕು ಸಾರ್ಥಕವಾಗುತ್ತದೆ ಎಂದರು.

# ಡಾ.ಜಿ.ಮಾದೇಗೌಡ ಸಮಾಜಸೇವಾ ಪ್ರಶಸ್ತಿಗೆ ಶರಣಪ್ಪ ಸಲಾದಪುರ ಆಯ್ಕೆ

**ಮಂಡ್ಯ, ಜು.9:** ಮಂಡ್ಯದ ಡಾ. ಜಿ. ಮಾದೇಗೌಡ ಟ್ರಸ್ಟ್‌ನಿಂದ ನೀಡಲಾಗುವ 2026ನೇ ಸಾಲಿನ ಡಾ. ಜಿ.ಮಾದೇಗೌಡ ರಾಜ್ಯಮಟ್ಟದ ಸಮಾಜ ಸೇವಾ ಪ್ರಶಸ್ತಿಗೆ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ಅವರನ್ನು ಆಯ್ಕೆ ಮಾಡಲಾಗಿದೆ.

ಮಂಡ್ಯದ ಗಾಂಧಿಭವನದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಪ್ರತಿಷ್ಠಾನದ



ಪ್ರಕಟಣೆ ತಿಳಿಸಿದೆ. ರೈತರ ಅಭಿವೃದ್ಧಿ, ಸಮಾಜ ಮುಖಕಾರ್ಯ, ನೈತಿಕ ರಾಜಕಾರಣ ಮತ್ತುಜನಪರ ಸೇವೆಯ ಮೂಲಕ ಸಲ್ಲಿಸಿರುವ ಅಮೋಘ ಕೊಡುಗೆಯನ್ನು ಗೌರವಿಸಿ, ಡಾ. ಜಿ. ಮಾದೇಗೌಡ ಪ್ರತಿಷ್ಠಾನ ವತಿಯಿಂದ 2026ನೇ ಸಾಲಿನ ರಾಜ್ಯ ಮಟ್ಟದ ಸಮಾಜ ಸೇವಾ ಪ್ರಶಸ್ತಿ ಮೊತ್ತ 25 ಸಾವಿರ ನಗದು ಬಹುಮಾನ ಹಾಗೂ ಪ್ರಶಸ್ತಿ ಫಲಕ ನೀಡಿ ಶರಣಪ್ಪ ಸಲಾದಪುರ ಆವರನ್ನು ಗೌರವಿಸಲಾಗುತ್ತಿದೆ ಎಂದು ಟ್ರಸ್ಟ್‌ನ ಪ್ರಕಟಣೆ ತಿಳಿಸಿದೆ.

# ರಾಜ್ಯ ರಾಜಕಾರಣಕ್ಕೆ ಮರಳಿ: ಎಚ್‌ಡಿಕೆಗೆ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಮನವಿ

**ಮಂಡ್ಯ, ಜು.9:** ರಾಜ್ಯದಲ್ಲಿ ಜನಸಾಮಾನ್ಯರು ಮತ್ತು ರೈತರ ಹಿತರಕ್ಷಣೆ ಮಾಡಲು ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರು ತಕ್ಷಣವೇ ಕೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ರಾಜ್ಯ ರಾಜಕಾರಣಕ್ಕೆ ಮರಳಬೇಕು ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಮನವಿ ನೀಡಿದ್ದಾರೆ.

ಮಂಡ್ಯ ಜಿಲ್ಲೆಯ ಸಂತೆಕಸಲಗರೆ ಗ್ರಾಮದಲ್ಲಿ ಮಾತನಾಡಿದ ಅವರು, ಪ್ರಸ್ತುತ ರಾಜ್ಯದಲ್ಲಿ ವಿರೋಧ ಪಕ್ಷಗಳ ಕಾರ್ಯವೈಖರಿ ಹಾಗೂ ಆಡಳಿತ ಪಕ್ಷದ ನಡವಳಿಕೆಗಳ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದ್ದಾರೆ. "ರಾಜ್ಯದಲ್ಲಿ ವಿರೋಧ ಪಕ್ಷ ಎಲ್ಲಿದೆ ಎಂದು ಹುಡುಕಬೇಕಾಗಿದೆ. ವಿಪಕ್ಷ ಅಂದರೆ ಹಿಂದೆ ಒಂದು ಭಯ, ಗೌರವ ಇತ್ತು. ಆದರೆ ಇವತ್ತು ಯಾವುದೇ ವಿರೋಧ ಪಕ್ಷಗಳು ಜನರಿಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ನಿಂತಿಲ್ಲ. ಪಕ್ಷದ ಜವಾಬ್ದಾರಿ ತಗೊಂಡವರು ಕೂಡ ಕೆಲಸ ಮಾಡುತ್ತಿಲ್ಲ. ವಿರೋಧ



ಪಕ್ಷದ ನಾಯಕರುಗಳೇ ನಾಪತ್ತೆಯಾಗಿದ್ದಾರೆ" ಎಂದು ರವೀಂದ್ರ ಶ್ರೀಕಂಠಯ್ಯ ಲೇವಡಿ ಮಾಡಿದರು.

ಪ್ರತಿಪಕ್ಷಗಳು ಸರಿಯಾಗಿ ಕೆಲಸ ಮಾಡದಿರುವುದು ಇಂದಿನ ರಾಜಕೀಯದ ದೊಡ್ಡ ದುರಂತ ಎಂದರು. ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ವಿರುದ್ಧವೂ ವಾಗ್ದಾಳಿ ನಡೆಸಿದ ಮಾಜಿ ಶಾಸಕರು, "ಕಾಂಗ್ರೆಸ್‌ನಲ್ಲಿ ಕೆಲವು ಒಳ್ಳೆಯ ಮಂತ್ರಿಗಳಿದ್ದಾರಾದರೂ, ಇವತ್ತು ಬಹುತೇಕರು ರಿಯಲ್ ಎಸ್ಟೇಟ್ ದಂಧೆಗೆ ಇಳಿದಿದ್ದಾರೆ. ಶಾಸಕರ ಪೊಲೀಸ್ ರೆಕಾರ್ಡ್ ತೆಗೆದು ನೋಡಿದರೆ ಅವರ ಯೋಗ್ಯತೆ ಏನೆಂದು ಗೊತ್ತಾಗುತ್ತದೆ. ಎಲ್ಲರೂ ರೈತರ ಜಮೀನು ಕಿತ್ತುಕೊಂಡು, ಲೇಔಟ್ ಮಾಡಿ ದುಡ್ಡು ಮಾಡಲು ನಿಂತಿದ್ದಾರೆ. ಇವರಿಗೆ ರೈತರ ಕಬ್ಬು ಒಣಗಿದರೆ ಏನು ಚಿಂತೆ ಎಂದು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದು ಸಾಕು, ರಾಜೀನಾಮೆ ಕೊಟ್ಟು ರಾಜ್ಯಕ್ಕೆ ಬನ್ನಿ ಎಂದು ನಾನು ತಗ್ಗಹಳ್ಳಿಯಲ್ಲೇ ಅವರಿಗೆ ಹೇಳಿದ್ದೇನೆ. ರಾಜ್ಯದಲ್ಲಿ ಇವತ್ತು ಸಾಕಷ್ಟು ಸಮಸ್ಯೆಗಳಿವೆ. ರೈತರನ್ನು, ಜನಸಾಮಾನ್ಯರನ್ನು ಉಳಿಸುವ ಆಲೋಚನೆ ಸದ್ಯಕ್ಕೆ ಯಾರಿಗೂ ಇಲ್ಲ. ಕುಮಾರಸ್ವಾಮಿ ಅವರು ರಾಜ್ಯಕ್ಕೆ ಮರಳಿ, ಜನರ ಪರವಾಗಿ ಹೋರಾಟ ಮಾಡಿದರೆ ಮಾತ್ರ ಇಲ್ಲಿನ ಜನಸಾಮಾನ್ಯರು ಉಳಿಯಲು ಸಾಧ್ಯ."ಪ್ರಸ್ತುತ ರಾಜ್ಯ ರಾಜಕಾರಣದಲ್ಲಿ ಸೃಷ್ಟಿಯಾಗಿರುವ ಶೂನ್ಯತೆಯನ್ನು ತುಂಬಲು ಮತ್ತು ರೈತರ ಪರ ಧ್ವನಿಯಾಗಲು ಕುಮಾರಸ್ವಾಮಿ ಅವರ ನಾಯಕತ್ವ ತಕ್ಷಣವೇ ರಾಜ್ಯಕ್ಕೆ ಅಗತ್ಯವಿದೆ ಎಂದು ರವೀಂದ್ರ ಪ್ರತಿಪಾದಿಸಿದ್ದಾರೆ.

# ಅರಬೈಲ್ ಘಾಟ್‌ನ ಬಳಗಾರ್ ಬಳಿ ಅಪಘಾತ: 7 ಮಂದಿ ಸಾವು

**ಕಾರವಾರ, ಜು.9:** ಜಿಲ್ಲೆಯ ಯಲ್ಲಾಪುರ ತಾಲೂಕಿನ ಅರಬೈಲ್ ಘಾಟ್‌ನ ಬಳಗಾರ್ ಬಳಿ ಲಾರಿ ಹಾಗೂ ತೂಫಾನ್ ಕಮರ್ಷಿಯಲ್ ವಾಹನದ ನಡುವೆ ತಡರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ 7 ಜನರು ಸ್ಥಳದಲ್ಲೇ ಮೃತಪಟ್ಟು, ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತರು ಧಾರವಾಡ ಮೂಲದವರು ಎಂದು ತಿಳಿದು ಬಂದಿದ್ದು ಹುಬ್ಬಳ್ಳಿ–ಧಾರವಾಡದಲ್ಲಿ ಸ್ವಿಗ್ಗಿ ಸಂಸ್ಥೆಯಲ್ಲಿ ಪಾರ್ಟ್‌ಟೈಮ್ ಡೆಲಿವರಿ ಬಾಯ್ಸ್ ಆಗಿ ಕೆಲಸ ಮಾಡುತ್ತಿದ್ದರು ಎನ್ನುವ ಮಾಹಿತಿ ಲಭ್ಯವಾಗಿದೆ. ಧಾರವಾಡದಿಂದ ರಾತ್ರಿ ವೇಳೆ ಧರ್ಮಸ್ಥಳ ಹಾಗೂ ಮಂಗಳೂರು ಕಡೆಗೆ ಪ್ರವಾಸ ಹೊರಟಿದ್ದಾಗ ಈ ಘೋರ ದುರಂತ ಸಂಭವಿಸಿದೆ. ತೂಫಾನ್ ವಾಹನದಲ್ಲಿ ಚಾಲಕ ಸೇರಿ ದಂತೆ ಒಟ್ಟು 9 ಜನರಿದ್ದರು. ಅರಬೈಲ್ ಘಾಟ್‌ನ ಬಳಗಾರ್ ತಲುಪುತ್ತಿದ್ದಂತೆ ತೂಫಾನ್ ವಾಹನ ಹಾಗೂ ಲಾರಿ ನಡುವೆ ಮುಖಾಮುಖಿ ಡಿಕ್ಕಿಯಾಗಿದೆ. ಡಿಕ್ಕಿಯ ರಭಸಕ್ಕೆ ತೂಫಾನ್ ವಾಹನ ಸಂಪೂರ್ಣ ನಜ್ಜುಗುಜ್ಜಾಗಿದೆ.

ಮಧುಸೂದನ್ ನಾಯಕ್ ವರದಿ ಮಂಡಿಸಿ

# ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸಿ: ಸಂಸದ ಪಿ.ಸಿ.ಮೋಹನ್ ಆಗ್ರಹ

**ಮೈಸೂರು, ಜು.9:** ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷ ಮಧುಸೂದನ್ ನಾಯಕ್ ನೇತೃತ್ವದಲ್ಲಿ ತಯಾರಾದ 'ಕರ್ನಾಟಕ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ (ಜಾತಿ ಗಣತಿ) ವರದಿಯನ್ನು ಸರ್ಕಾರ ಮುಂದಿನ ವಿಧಾನಮಂಡಲ ಅಧಿವೇಶನ ದಲ್ಲಿ ಮಂಡಿಸಿ ಹಿಂದುಳಿದ ವರ್ಗಗಳಿಗೆ ನ್ಯಾಯ ಕೊಡಬೇಕು ಎಂದು ಸಂಸದ ಪಿ.ಸಿ.ಮೋಹನ್ ಆಗ್ರಹಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಹಿಂದುಳಿದ ವರ್ಗಗಳ ನಾಯಕ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಹಿಂದುಳಿದ ವರ್ಗಗಳಿಗೆ ನಿರಂತರ ಅನ್ಯಾಯವಾಗಿದೆ.

ಹಿಂದುಳಿದ ವರ್ಗಗಳ ಚಾಂಪಿಯನ್ ಎಂದು ಹೇಳಿಕೊಳ್ಳುವ ಸಿದ್ದರಾಮಯ್ಯ 600 ಕೋಟಿ ರೂ. ಸಾರ್ವಜನಿಕ ಹಣವನ್ನು ವಿವಿಧ ಆಯೋಗಗಳ ಹೆಸರಿನಲ್ಲಿ ಖರ್ಚು ಮಾಡಿದರೂ ಹಿಂದುಳಿದ ವರ್ಗಗಳಿಗೆ ನ್ಯಾಯ ಕೊಡಲಿಲ್ಲ ಎಂದು ಗುರುವಾರ ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ಬಿಹಾರ ಹಾಗೂ ತೆಲಂಗಾಣ ಸರ್ಕಾರ ಕೇವಲ ಒಂದೇ ವರ್ಷದಲ್ಲಿ ಸಾಮಾಜಿಕ–ಆರ್ಥಿಕ ಸಮೀಕ್ಷೆ



ನಡೆಸಿ ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸಿದೆ. ಆದರೆ ಕರ್ನಾಟಕದಲ್ಲಿ ಹತ್ತು ವರ್ಷಗಳಾದರೂ ಕಾಂಗ್ರೆಸ್ ಕೇವಲ ಕಾಲಹರಣ ಮಾಡಿದೆ. ಸಿದ್ದರಾಮಯ್ಯ ತಮ್ಮ ಮುಖ್ಯಮಂತ್ರಿ ಸ್ಥಾನಕ್ಕೆ ಗಂಡಾಂತರ ಎದುರಾದಾಗಲೆಲ್ಲಾ ಹಿಂದುಳಿದ ವರ್ಗಗಳ ಜಾತಿ ಗಣತಿಯ ಕಾರ್ಡ್ ಪ್ಲೇ ಮಾಡುತ್ತಿದ್ದರು. ಇದೀಗ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಿದ್ದು, ಅವರು ಆಯೋಗದ ವರದಿ ಜಾರಿ ಗೊಳಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಟಿ.ಎಸ್. ಶ್ರೀವತ್ಸ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಕುಂಬ್ರಹಳ್ಳಿ ಸುಬ್ಬಣ್ಣ, ವಿಭಾಗ ಪ್ರಭಾರಿ ಸ್ವಾಮಿ ಮರಳಪುರ ಹಾಗೂ ಇತರರು ಇದ್ದರು.

ಶೃಂಗೇರಿಯಲ್ಲಿ ಬೃಹತ್ ತಡೆಗೋಡೆಯಲ್ಲಿ ಬಿರುಕು

# ಗೋಡೆ ಕುಸಿದರೆ ಕೆಳಭಾಗದ ಮನೆ ಅಂಗಡಿಗಳು ನದಿಪಾಲಾಗುವ ಆತಂಕ

**ಚಿಕ್ಕಮಗಳೂರು, ಜು.9:** ಜಿಲ್ಲೆಯ ಶೃಂಗೇರಿ ತಾಲೂಕು ಕಚೇರಿಯ ಮುಂಭಾಗದಲ್ಲಿ ನಿರ್ಮಿಸಲಾಗಿರುವ ಬೃಹತ್ ತಡೆಗೋಡೆಯಲ್ಲಿ ಬಿರುಕು ಕಾಣಿಸಿಕೊಂಡಿದ್ದು, ಧಾರಾಕಾರ ಮಳೆಗೆ ತಡೆಗೋಡೆ ಸಂಪೂರ್ಣ ಕುಸಿದು ಬೀಳುವ ಆತಂಕ ಎದುರಾಗಿದೆ.

ತಡೆಗೋಡೆಯಲ್ಲಿನ ಬಿರುಕು ಕ್ಷಣ ಕ್ಷಣಕ್ಕೂ ಹೆಚ್ಚುತ್ತಿದೆ. ಇನ್ನು ಅದರ ಕೆಳಭಾಗದಲ್ಲಿ 4 ಮನೆ, 18ಕ್ಕೂ ಹೆಚ್ಚು ಅಂಗಡಿಗಳಿದ್ದು, ತಡೆಗೋಡೆ ಕುಸಿದರೆ ತುಂಗಾ ನದಿ ಪಾಲಾಗಲಿವೆ. 50 ಅಡಿ ಎತ್ತರ ಹಾಗೂ 120 ಅಡಿ ಅಗಲವಿರುವ ಈ ಬೃಹತ್ ತಡೆಗೋಡೆಯಲ್ಲಿನ ಬಿರುಕು ಕ್ಷಣ ಕ್ಷಣಕ್ಕೂ ಹೆಚ್ಚಾಗುತ್ತಿದೆ. ಪ್ರಸ್ತುತ ಮಳೆಗಾಲವಾಗಿರುವುದರಿಂದ ಮಳೆ ಮತ್ತಷ್ಟು ಹೆಚ್ಚಾದರೆ ತಡೆಗೋಡೆ ಸಂಪೂರ್ಣವಾಗಿ ಕುಸಿದು ಬೀಳುವ ಅಪಾಯವಿದೆ. ಒಂದು ವೇಳೆ ಈ ದುರಂತ ಸಂಭವಿಸಿದರೆ, ತಡೆ ಗೋಡೆಯ ಕೆಳಗಿರುವ ಮನೆ ಹಾಗೂ ಅಂಗಡಿಗಳು ನೇರವಾಗಿ ಭದ್ರಾ ನದಿಯ ಪಾಲಾಗಲಿವೆ. ಇದು ಶೃಂಗೇರಿ ಶಾರದಾ ಮಠಕ್ಕೆ ತೆರಳುವ ಪ್ರಮುಖ ಮಾರ್ಗದಲ್ಲೇ ಇರುವುದರಿಂದ ನಿರಂತರ ಸಾರ್ವಜನಿಕ ಸಂಚಾರವೂ ಇದ್ದು, ಹೆದರಿಕೆ ಶುರುವಾಗಿದೆ.





ಕಳೆದ 2024ರ ಮಳೆಗಾಲದಲ್ಲಿ ಕುಸಿತ ಕಂಡಿದ್ದ ಇದೇ ಜಾಗದಲ್ಲಿ, ಸುಮಾರು 2 ಕೋಟಿ ರೂ ವೆಚ್ಚದಲ್ಲಿ ಈ ಹೊಸ ತಡೆಗೋಡೆಯನ್ನು ನಿರ್ಮಿಸಲಾಗಿತ್ತು. ಆದರೆ, ಕಾಮಗಾರಿ ಪೂರ್ಣಗೊಂಡು ಕೇವಲ ಕೆಲವೇ ತಿಂಗಳು ಕಳೆಯುವುದರೊಳಗಾಗಿ ತಡೆಗೋಡೆ ಸಂಪೂರ್ಣವಾಗಿ ಬಿರುಕು ಬಿಟ್ಟಿದೆ. ಗೋಡೆಯ ಒಳಗೆ ಕೇವಲ ಮಣ್ಣು ತುಂಬಿ ಕಳಪೆ ಕಾಮಗಾರಿ ನಡೆಸಿರುವುದೇ ಇದಕ್ಕೆ ಕಾರಣ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಮಾಜಿ ಸಚಿವರಿಂದ ಪರಿಶೀಲನೆ**

ಜಿಲ್ಲಾಡಳಿತ ಮಾತ್ರ ಇದುವರೆಗೆ ಯಾವುದೇ ಮುಂಜಾಗ್ರತಾ ಕ್ರಮಕೈಗೊಳ್ಳದಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ. ಇನ್ನು ಮಾಜಿ ಸಚಿವ ಡಿಎನ್ ಜೀವರಾಜ್ ನೇತೃತ್ವದ ಬಿಜೆಪಿ ಮುಖಂಡರ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು. ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೋಟಿಗಟ್ಟಲೇ ಹಣ ವೆಚ್ಚ ಮಾಡಿದ್ದರೂ ಕೇವಲ ಮಣ್ಣು ತುಂಬಿ ಅತ್ಯಂತ ಕಳಪೆ ಕಾಮಗಾರಿ ಮಾಡಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸುತ್ತಮುತ್ತಲಿನ ಜನರ ಜೀವ ಮತ್ತು ಆಸ್ತಿ ರಕ್ಷಣೆಗೆ ಮುಂದಾಗಬೇಕು ಎಂದು ಅವರು ಒತ್ತಾಯಿಸಿದರು.

**ತಹಶೀಲ್ದಾರ್ ಪ್ರತಿಕ್ರಿಯೆ**

ಇನ್ನು ಈ ಬಗ್ಗೆ ತಹಶೀಲ್ದಾರ್ ಅನುಪ್ ಪ್ರತಿಕ್ರಿಯೆ ನೀಡಿದ್ದು, ತಡೆಗೋಡೆಯಲ್ಲಿ ಬಿರುಕು ಕಾಣಿಸಿಕೊಂಡಿದೆ. ಕೆಳಭಾಗದಲ್ಲಿ ಇರುವ ಅಂಗಡಿಗಳು ಮತ್ತು ಮನೆಗಳನ್ನು ಖಾಲಿ ಮಾಡಲು ಸೂಚನೆ ನೀಡಿದ್ದೇವೆ. ತಾಲೂಕು ಆಡಳಿತದಿಂದ ಕಾಳಜಿ ಕೇಂದ್ರ ತೆರೆಯುತ್ತೇವೆ. ಆ ಮೂಲಕ ಮುಂಜಾಗ್ರತಾ ಕ್ರಮಕೈಗೊಳ್ಳಲು ಸೂಚನೆ ನೀಡಿದ್ದೇವೆ. ಇನ್ನು ತಜ್ಞರ ತಂಡ ಬೆಂಗಳೂರಿನಿಂದ ಶೃಂಗೇರಿಗೆ ಬರುತ್ತಿದ್ದು, ಅವರ ಅಭಿಪ್ರಾಯ ಪಡೆದು ಮುಂದಿನ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

# ಜೆಸ್ಕಾಂ ಎಇಇ ನಿವಾಸ, ಕಚೇರಿ ಮೇಲೆ ಲೋಕಾಯುಕ್ತ ದಾಳಿ

**ಕಲಬುರಗಿ, ಜು. 9:** ಆದಾಯ ಮೀರಿ ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಜೆಸ್ಕಾಂ (ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪೆನಿ ನಿಯಮಿತ) ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ಅಮೃತರಾವ್ ಯಲಾಲ್ ಅವರ ಮನೆ, ಕಚೇರಿ ಹಾಗೂ ಅವರಿಗೆ ಸಂಬಂಧಿಸಿದ ವಿವಿಧ ಸ್ಥಳಗಳ ಮೇಲೆ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಬುಧವಾರ ಬೆಳಗ್ಗೆ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.

ಕರ್ನಾಟಕ ಲೋಕಾಯುಕ್ತ ಕಲಬುರಗಿ ಪೊಲೀಸ್ ಅಧೀಕ್ಷಕ ಸಿದ್ಧರಾಜು ಸಿ. ಮಾರ್ಗದರ್ಶನದಲ್ಲಿ ಆರು ವಿಶೇಷ ತಂಡಗಳು ಈ ಕಾರ್ಯಾಚರಣೆ ನಡೆಸಿವೆ. ಲೋಕಾಯುಕ್ತ ಅಧಿಕಾರಿಗಳು ನಗರದ ಜಾಗೃತಿ ಕಾಲನಿಯಲ್ಲಿರುವ ನಿವಾಸ, ಸುಲೆಪೇಟನಲ್ಲಿರುವ ಮೂಲ ನಿವಾಸ, ಜಾಗೃತಿ ಕಾಲನಿಯ ಬಸವ ಅಪಾರ್ಟ್ ಮೆಂಟ್ ನಲ್ಲಿರುವ ಸುಮಾರು 40 ಫ್ಲ್ಯಾಟ್ ಗಳು, ಕೊತ್ತಂಬರಿ ಲೇಔಟ್ ನಲ್ಲಿರುವ ಜೆಸ್ಕಾಂ ಕಚೇರಿ, ಜಾಗೃತಿ ಕಾಲನಿಯಲ್ಲಿರುವ ಮಾವನ ಮನೆ, ಹಾಗೂ ಸೇಡಂ ರಸ್ತೆಯ ಫೇಬರ್ ಪ್ಲಾಟಿನಂ ಸ್ಟುಡಿಯೋ ಸೇರಿದಂತೆ ಒಟ್ಟು




ಆರು ಸ್ಥಳಗಳಲ್ಲಿ ಏಕಕಾಲಕ್ಕೆ ಶೋಧ ಕಾರ್ಯಾಚರಣೆ ನಡೆಸಿದರು. ಇದರ ಜೊತೆಗೆ, ನಂದೂರು ಕೈಗಾರಿಕಾ ಪ್ರದೇಶದಲ್ಲಿರುವ ಆಸ್ತಿಗಳು, ಕಲಬುರಗಿ ನಗರದಲ್ಲಿನ ಫ್ಲ್ಯಾಟ್ ಗಳು, ಸುಲೇಪೇಟೆ ಭಾಗದಲ್ಲಿ ಅಂದಾಜು 15 ಎಕರೆ ಜಮೀನು ಹಾಗೂ ವಾಣಿಜ್ಯ ಮಳಿಗೆಗಳಿಗೆ ಸಂಬಂಧಿಸಿದ ದಾಖಲೆಗಳನ್ನೂ ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ ಎಂದು ತಿಳಿದುಬಂದಿದೆ.

ಶೋಧ ಕಾರ್ಯಾಚರಣೆ ವೇಳೆ ಆಸ್ತಿ ದಾಖಲೆಗಳು, ಬ್ಯಾಂಕ್ ವ್ಯವಹಾರಗಳು, ಹೂಡಿಕೆಗಳಿಗೆ ಸಂಬಂಧಿಸಿದ ದಾಖಲೆಗಳು ಹಾಗೂ ಇತರೆ ಮಹತ್ವದ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸಿದರು. ತನಿಖೆ ಮುಂದುವರಿದಿದೆ.

**ಗುಂಡು ಹಾರಿಸಿಕೊಂಡು, ಸಿಎಆರ್ ಕಾನ್‌ಸ್ಟೆಬಲ್ ಆತ್ಮಹತ್ಯೆ:** ಕಲಬುರಗಿ ನಗರದ ಜಗತ್ ವೃತ್ತದ ಬಳಿ ಪೊಲೀಸ್ ವಾಹನದಲ್ಲೇ ಸಿಎಆರ್ ಕಾನ್‌ಸ್ಟೆಬಲ್‌ವೊಬ್ಬರು ಸರ್ಕಾರಿ ರೈಫಲ್‌ನಿಂದ ಗುಂಡು ಹೊಡೆದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಮೃತರನ್ನು ಜೇವರ್ಗಿ ತಾಲೂಕಿನ ನರಿಬೋಳ ಗ್ರಾಮದ ನಿವಾಸಿ ಶಿವಕುಮಾರ್ ಎಂದು ಗುರುತಿಸಲಾಗಿದೆ.ಅವರು ಕಲಬುರಗಿ ಸಿಎಆರ್ ವಿಭಾಗದಲ್ಲಿ ಕಾನ್‌ಸ್ಟೆಬಲ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಮುಖ್ಯಮಂತ್ರಿ ನಗರ ಪ್ರವಾಸದಲ್ಲಿದ್ದ ಹಿನ್ನೆಲೆಯಲ್ಲಿ ಇತರ ಪೊಲೀಸ್ ಸಿಬಂದಿಯೊಂದಿಗೆ ಶಿವಕುಮಾರ್ ಕೂಡ ಬಂದೋಬಸ್ತ್ ಕರ್ತವ್ಯದಲ್ಲಿದ್ದರು. ಕರ್ತವ್ಯದ ವೇಳೆ ಪೊಲೀಸ್ ವಾಹನದಲ್ಲಿದ್ದ 303 ರೈಫಲ್‌ನಿಂದ ಎದೆಗೆ ಗುಂಡು ಹೊಡೆದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪ್ರಾಥಮಿಕ ಮಾಹಿತಿ ತಿಳಿಸಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ನಗರ ಪೊಲೀಸ್ ಆಯುಕ್ತರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ಆತ್ಮಹತ್ಯೆಗೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಇನ್ನೂ ಬಳಕೆಗೆ ಸಿದ್ಧವಾಗದ ಸ್ವಾತಂತ್ರ್ಯ ಹೋರಾಟಗಾರರ ಭವನ



**ಕಲಬುರಗಿ, ಜು. 9:** ಇಲ್ಲಿನ ಕುಸನೂರ ರಸ್ತೆಗೆ ಸಂಪರ್ಕ ಕಲ್ಪಿಸುವ ರಿಂಗ್ ರಸ್ತೆಯ ಬಳಿ ಇರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿದ್ದಯ್ಯ ಪುರಾಣಿಕ ಸಾಂಸ್ಕೃತಿಕ ಸಂಕೀರ್ಣದಲ್ಲಿರುವ ಇಲಾಖೆ ಅಧೀನದಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರ ಭವನವನ್ನು 5 ಕೋಟಿ ವೆಚ್ಚದಲ್ಲಿ ನವೀಕರಣ ಮಾಡಿ ಎಂಟು ತಿಂಗಳು ಕಳೆದರೂ ಸಾರ್ವಜನಿಕ ಬಳಕೆಗೆ ಲಭ್ಯವಾಗಿಲ್ಲ. ಇದರಿಂದಾಗಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ನಗರದ ಡಾ.ಎಸ್.ಎಂ. ಪಂಡಿತ ಜಿಲ್ಲಾ ರಂಗಮಂದಿರವೊಂದನ್ನೇ ಅವಲಂಬಿಸುವಂತಾಗಿದೆ.

ಸ್ವಾತಂತ್ರ್ಯ ಯೋಧರ ಭವನವೂ ಮೊದಲಿಗೆ ಕೋಟ್ಯಂತರ ರೂ ವೆಚ್ಚದಲ್ಲಿ ನಿರ್ಮಾಣಗೊಂಡಿದ್ದರೂ ಬಳಕೆಗೆ ಲಭ್ಯವಾಗಿರಲೇ ಇಲ್ಲ. ಬಿಜೆಪಿ ಸರ್ಕಾರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಸಚಿವರಾಗಿದ್ದ ವಿ. ಸುನಿಲ್‌ಕುಮಾರ್ ಅವರು ಭವನಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದರು. ಈ ಭವನವನ್ನು ನವೀಕರಣಗೊಳಿಸಿ ತಮಗೆ ಬಿಟ್ಟು ಕೊಡುವಂತೆ ರಂಗಾಯಣದ ಹಿಂದಿನ ನಿರ್ದೇಶಕರಾಗಿದ್ದ ಪ್ರಭಾಕರ ಜೋಶಿ ಅವರು ಸಚಿವರಿಗೆ ಮನವಿ ಸಲ್ಲಿಸಿದ್ದರು.

ಫೌಜಿಯಾ ತರನ್ನುಮ್ ಜಿಲ್ಲಾಧಿಕಾರಿಯಾಗಿದ್ದ ಅವಧಿಯಲ್ಲಿ ಆಸಕ್ತಿ ವಹಿಸಿ ಡಾ.ಎಸ್.ಎಂ. ಪಂಡಿತ್ ಜಿಲ್ಲಾ ರಂಗಮಂದಿರ ಹಾಗೂ ಸ್ವಾತಂತ್ರ್ಯ ಯೋಧರ ಭವನದ ನವೀಕರಣ ಕಾರ್ಯವನ್ನು ಕೈಗೆತ್ತಿ ಕೊಂಡಿದ್ದರು. ನಿರಂತರವಾಗಿ ಕಾಮಗಾರಿಯನ್ನು ಪರಿಶೀಲಿಸಿದ್ದರು. ಬೇಗ ಪೂರ್ಣಗೊಳಿಸುವಂತೆ ಒತ್ತಡ ಹಾಕಿದ್ದರ ಪರಿಣಾಮ ಡಾ.ಎಸ್.ಎಂ.ಪಂಡಿತ್ ಜಿಲ್ಲಾ ರಂಗಮಂದಿರ ಪೂರ್ಣಗೊಂಡು ಉದ್ಘಾಟನೆಯೂ ಆಯಿತು.

ಕಳೆದ ವರ್ಷ ಸೆಪ್ಟೆಂಬರ್ 17ರಂದು ಕಲ್ಯಾಣ ಕರ್ನಾಟಕ ಉತ್ಸವದ ವೇಳೆ ಸ್ವಾತಂತ್ರ್ಯ ಹೋರಾಟಗಾರರ ಭವನವನ್ನೂ ಉದ್ಘಾಟನೆಗೆ ಸಿದ್ಧಗೊಳಿಸಲಾಗಿತ್ತು. ಆದರೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಲೋಕೋಪಯೋಗಿ ಇಲಾಖೆಯ ಸಮನ್ವಯದ ಕೊರತೆಯಿಂದಾಗಿ ಇದು ಸಾಧ್ಯವಾಗಲಿಲ್ಲ ಎನ್ನುತ್ತಾರೆ ಅಧಿಕಾರಿಯೊಬ್ಬರು.

ಭವನ ಸಂಪೂರ್ಣವಾಗಿ ಬಳಕೆಗೆ ಯೋಗ್ಯವಾಗಲು ಇನ್ನೂ ಕೆಲಸಗಳು ಬಾಕಿ ಇವೆ. ಮುಖ್ಯವಾಗಿ ಇದಕ್ಕೆ ವಿದ್ಯುತ್ ಸಂಪರ್ಕವೇ ಇಲ್ಲ. ಅಲ್ಲದೇ, ಭವನದ ವೇದಿಕೆಗೆ ಪರದೆ ಅಳವಡಿಕೆ, ಮೆಟ್ಟಿಲುಗಳಿಗೆ ರೇಲಿಂಗ್ ಅಳವಡಿಕೆ ಕೆಲಸ ಬಾಕಿ ಇದೆ. ಅಂದಾಜು 40 ಲಕ್ಷ ಹಣಕಾಸು ನೆರವು ಅಗತ್ಯವಿದೆ. ಹೆಚ್ಚುವರಿ ಅನುದಾನಕ್ಕಾಗಿ ಜಿಲ್ಲಾಧಿಕಾರಿ ಅವರಿಗೆ ಶೀಘ್ರವೇ ಪ್ರಸ್ತಾವ ಸಲ್ಲಿಸಲಾಗುವುದು. ಭವನಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು ಜೆಸ್ಕಾಂಗೆ ಅರ್ಜಿ ಸಲ್ಲಿಸಲಾಗುವುದು. ಅದಾದ ಬಳಿಕ ಬಾಡಿಗೆ ಮೊತ್ತ ನಿಗದಿಗೊಳಿಸಲಾಗುವುದು ಎನ್ನುತ್ತಾರೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಜಗದೀಶ್ವರಿ ನಾಶಿ.

> **ನವೀಕೃತ ಕಟ್ಟಡ ಉದ್ಘಾಟನೆಗೊಂಡ ಬಳಿಕ ರಂಗಾಯಣವು ಇದನ್ನು ರಂಗಚಟುವಟಿಕೆಗಳಿಗಾಗಿ ತನಗೆ ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಮನವಿ ಸಲ್ಲಿಸಲಿದೆ. ರಿಂಗ್ ರೋಡ್ ಸಮೀಪದ ವಿವಿಧ ಸಾಂಸ್ಕೃತಿಕ ಸಂಘಟನೆಗಳೂ ಇದನ್ನು ಬಳಸಿಕೊಳ್ಳಲು ಅವಕಾಶ ನೀಡುವ ಚಿಂತನೆ ಇದೆ. ಸ್ವಾತಂತ್ರ್ಯ ಹೋರಾಟಗಾರರ ಭವನಕ್ಕೆ ವಿದ್ಯುತ್ ಸಂಪರ್ಕಕ್ಕೆ ಜೆಸ್ಕಾಂಗೆ ಅರ್ಜಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ವಾಣಿಜ್ಯ ಉದ್ದೇಶದ ಬದಲು ರಿಯಾಯಿತಿ ದರದಲ್ಲಿ ವಿದ್ಯುತ್ ಪೂರೈಸಲು ಮನವಿ ಸಲ್ಲಿಸಲಾಗುವುದು.**
>
> –ಬಸವರಾಜ ಹೂಗಾರ, ಜಂಟಿ ನಿರ್ದೇಶಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ



9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡಲು ಉಪನ್ಯಾಸಕರನ್ನು ನಿಯೋಜಿಸುವ ಪ್ರಸ್ತಾಪವನ್ನು ವಿರೋಧಿಸಿ ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಸಂಘದ ಸದಸ್ಯರು ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಮನ ತಣಿಸಿದ ಸಂಗೀತ ಸೌರಭ



**ಬೀದರ್, ಜು. 9:** ಎಂಜಲ್ ಕಲ್ಚರಲ್ ಆಯಂಡ್ ಸೋಷಿಯಲ್ ವೆಲ್‌ಫೇರ್ ಸೋಸೈಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಇಲ್ಲಿಯ ಕುಂಬಾರ ವಾಡದ ಕರುನಾಡು ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ್ದ ಸಂಗೀತ ಸೌರಭವು ಸಂಗೀತ ಆಸಕ್ತರ ಮನ ತಣಿಸಿತು.

ಹಿರಿಯ ಕಲಾವಿದರಾದ ದಿಲೀಪ್ ಕಾಡವಾದ, ರೇಣುಕಾ ಎನ್.ಬಿ., ಜಸ್ಸಿ ಸೋನ್ವಾನೆ, ಮೆತೊಶಲ್ ಮಾರ್ಕ್, ವಿಜಯಲಕ್ಷ್ಮಿ, ನಂರತ, ವೈಷ್ಣವಿ, ನಾಗಶ್ರೀ, ನಾಗೇಶ, ರಾಜೇಶ್ವರಿ ಹೂಗಾರ, ಮಾನ್ಯತಾ, ಮುದ್ರಿತಾ, ಆರಾಧನಾ ಮತ್ತಿತರ ಕಲಾವಿದರು ಗಾನ ಸುಧೆ ಹರಿಸಿದರು. ಭಾವಗೀತೆ, ಜನಪದ ಗೀತೆ, ತತ್ವಪದ, ವಚನ ಹಾಗೂ ದೇಶ ಭಕ್ತ ಗೀತೆಗಳು ಸಂಗೀತದ ರಸದೌತಣ ಉಣಬಡಿಸಿದವು.

ಇದಕ್ಕೂ ಮುನ್ನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ. ಸಿದ್ರಾಮಪ್ಪ ಮಾಸಿಮಾಡೆ ಅವರು, ಎಂಜಲ್ ಸಂಸ್ಥೆಯ ಅಧ್ಯಕ್ಷ ಪ್ರವೀಣ್ ಅವರು ಹಲವು ವರ್ಷಗಳಿಂದ ಕಲಾ ಸೇವೆಯಲ್ಲಿ ನಿರತರಾಗಿದ್ದಾರೆ. ಮಕ್ಕಳಿಗೆ ಸಂಗೀತ ವಿದ್ಯೆ ಧಾರೆ ಎರೆಯುತ್ತಿದ್ದಾರೆ. ಕಲೆಯನ್ನು ಉಳಿಸಿ ಬೆಳೆಸಲು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಹಿರಿಯ ಕಲಾವಿದ ದಿಲೀಪ್ ಕಾಡವಾದ ಮಾತನಾಡಿ, ಸಂಗೀತ ಮನುಷ್ಯನ ಜೀವನದ ಅವಿಭಾಜ್ಯ ಅಂಗವಾಗಿದೆ. ಆದರೆ, ಈಚಿನ ದಿನಗಳಲ್ಲಿ ವೇದಿಕೆ ಸಮಾರಂಭಗಳಲ್ಲಿ ರಾಜಕಾರಣಿಗಳು ಹಾಗೂ ಗಣ್ಯರು ಬರುತ್ತಿದ್ದಂತೆಯೇ ಕಲಾವಿದರ ಕೈಯಲ್ಲಿನ ಮೈಕ್ ಕಸಿದು ಅವಮಾನಿಸುವ ಪ್ರವೃತ್ತಿ ಹೆಚ್ಚುತ್ತಿರುವುದು ಕಳವಳಕಾರಿ. ಇದನ್ನು ಎಲ್ಲರೂ ಖಂಡಿಸಬೇಕಾಗಿದೆ ಎಂದರು.

ಸಂಗೀತ ಕಲಿಕೆಯಲ್ಲಿ ಆಸಕ್ತಿ ಹೊಂದಿರುವವರು ಸೋಷಿಯಲ್ ಮೀಡಿಯಾದಲ್ಲಿ ಕೇವಲ ಲೈಕ್‌ಗಳಿಗಾಗಿ ಸಂಗೀತ ಕಲಿಯಬಾರದು, ಗುರು–ಶಿಷ್ಯ ಪರಂಪರೆ, ಕಠಿಣ ಪರಿಶ್ರಮದೊಂದಿಗೆ ಸಂಗೀತ ವಿದ್ಯೆಯನ್ನು ಒಲಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

## ಕಲಬುರಗಿ ನಗರದಲ್ಲಿ ಲಘು ಭೂಕಂಪ,

# ತಡರಾತ್ರಿ ಹೆದರಿ ಮನೆಯಿಂದ ಹೊರಗೆ ಓಡಿಬಂದ ಜನತೆ



**ಕಲಬುರಗಿ, ಜು. 9:** ನಗರದಲ್ಲಿ ತಡರಾತ್ರಿ ಭೂಕಂಪನದ ಅನುಭವವಾಗಿ ಮಲಗಿದ್ದವರು ದಡಬಡಿಸಿ ಎದ್ದು ಹಲವು ಪ್ರದೇಶಗಳ ನಿವಾಸಿಗಳು ಭಯಭೀತರಾಗಿ ಮನೆಗಳಿಂದ ಹೊರಗೆ ಓಡಿಬಂದ ಘಟನೆ ನಡೆದಿದೆ. ನಗರದಲ್ಲಿ ಬುಧವಾರ ತಡರಾತ್ರಿ ಸುಮಾರು 1.30 ಗಂಟೆ ಸುಮಾರಿಗೆ ಕೆಲವೊಂದು ಬಡಾವಣೆಗಳಲ್ಲಿ ಲಘು ಭೂಕಂಪನದ ಅನುಭವವಾಗಿದೆ. ಹರಿಕೃಷ್ಣ ನಗರ ಸೇರಿದಂತೆ ಹಲವು ಪ್ರದೇಶಗಳ ನಿವಾಸಿಗಳು ಗಾಢನಿದ್ರೆಯಲ್ಲಿರುವಾಗ ಭೂಮಿ ನಡುಗಿದಂತಾಗಿ ಆತಂಕಗೊಂಡ ಜನರ ದಡಬಡಿಸಿ ಎದ್ದು ಮನೆಗಳಿಂದ ಹೊರಗೆ ಓಡಿಬಂದರು.

ತಡರಾತ್ರಿ ಸುಮಾರು 1.30 ಗಂಟೆ ವೇಳೆಗೆ ಹರಿಕೃಷ್ಣ ನಗರ, ಮಹಾವೀರ ನಗರ, ಶಾಸ್ತ್ರಿ ನಗರ ಸೇರಿದಂತೆ ಹಲವು ಕಡೆ ಭೂಮಿ ಕಂಪಿಸಿದ ಅನುಭವವಾಗಿದೆ ಎಂದು ನಿವಾಸಿಗಳು ತಿಳಿಸಿದರು. ರಾತ್ರಿ ಮಂಚದ ಮೇಲೆ ಮಲಗಿರುವಾಗಲೇ ಒಂದು ಕ್ಷಣ ಉರುಳಾಡಿಸಿದಂತೆ ಅನುಭವವಾಯಿತು. ಕೂಡಲೇ ಗಾಬರಿಯಿಂದ ಎದ್ದಗ ಅಡುಗೆ ಮನೆಯ ಪಾತ್ರೆಗಳು ನಡುಗಿದ ಶಬ್ದ ಕೇಳಿಸಿತು. ಹಾಗೆಯೇ ಹಾಸಿಗೆಯ ಮೇಲಿಂದ ಎದ್ದು ನೋಡಿದಾಗ ಎಲ್ಲವೂ ಸ್ಥಬ್ದವಾಗಿತ್ತು. ಹೊರಗಡೆ ಜನರ ಮಾತುಗಳು ಕೇಳಿ ಬಂದಾಗ ನಾವೂ ಹೊರಗೋಡಿ ಬಂದೆವು. ಆಗಲೇ ತಿಳಿದದ್ದು ಭೂಕಂಪವಾಗಿ ಭೂಮಿ ನಡುಗಿದೆ. ಅದಕ್ಕೇ ಹೀಗಾಗಿದೆ. ನಮಗೂ ಇದೇ ರೀತಿ ಅನುಭವವಾಗಿದೆ ಎಂದು ನಿವಾಸಿ ರಮಾ ಕುಲಕರ್ಣಿ ಮತ್ತು ಅಚ್ಯುತ್ ಕುಲಕರ್ಣಿ ಅವರು ಹೇಳಿದರು.

ಭೂಮಿ ಕೆಲಕ್ಷಣಗಳ ಕಾಲ ಕಂಪಿಸಿದ ಅನುಭವ ಮತ್ತೆ ಕೆಲವರಿಗೆ ಆಗಿದೆ. ಮನೆಗಳಲ್ಲಿದ್ದ ಜನರು ಏಕಾಏಕಿ ಕಂಪನವನ್ನು ಅನುಭವಿಸಿ ಆತಂಕಗೊಂಡು ಸುರಕ್ಷತೆಗಾಗಿ ಹೊರಗೆ ಬಂದಿರುವುದಾಗಿ ಹೇಳಿದರು.ಹರಿಕೃಷ್ಣ ನಗರ, ಮಹಾವೀರ ನಗರ ಸೇರಿದಂತೆ ಸುತ್ತಮುತ್ತಲಿನ ಕೆಲವು ಬಡಾವಣೆಗಳ ನಿವಾಸಿಗಳು ಸಮಾರು 4 ರಿಂದ 5 ಸೆಕೆಂಡ್ ಭೂಕಂಪನದ ಅನುಭವ ಆಗಿರುವುದನ್ನು ಸಾಮಾಜಿಕ ಜಾಲತಾಣಗಳಲ್ಲಿಯೂ ಹಂಚಿಕೊಂಡಿದ್ದಾರೆ. ಕೆಲವರು ಮನೆಯಲ್ಲಿ ವಸ್ತುಗಳು ಸ್ವಲ್ಪ ಅಲ್ಲಾಡಿದ ಅನುಭವವಾಗಿದೆ. ನಾವು ಮಲಗಿದ್ದ ಮಂಚದ ಮೇಲೆ ಉರುಳಿಸಿದಂತಾಗಿದೆ.

ಸದ್ಯಕ್ಕೆ ಭೂಕಂಪನದಿಂದ ಯಾವುದೇ ಪ್ರಾಣಹಾನಿ ಅಥವಾ ಆಸ್ತಿ ಹಾನಿ ಸಂಭವಿಸಿರುವ ಕುರಿತು ಅಧಿಕೃತ ಮಾಹಿತಿ ಲಭ್ಯವಾಗಿಲ್ಲ. ಭೂಕಂಪನದ ತೀವ್ರತೆ ಹಾಗೂ ಕೇಂದ್ರ ಬಿಂದುವಿನ ಬಗ್ಗೆ ಸಂಬಂಧಿತ ಇಲಾಖೆಗಳಿಂದ ಮಾಹಿತಿ ನಿರೀಕ್ಷಿಸಲಾಗುತ್ತಿದೆ. ಭೂಕಂಪನದ ಅನುಭವದಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಬಳಿಕ ಪರಿಸ್ಥಿತಿ ಸಹಜಗೊಂಡಿದೆ.

.ಕಲಬುರಗಿ ಜನರಿಗೆ ಭೂಕಂಪ ಹೊಸದೇನಲ್ಲ. ಹಿಂದೆ 1993ರಲ್ಲಿ ಮಧ್ಯರಾತ್ರಿ ಭಾರೀ ಪ್ರಮಣದಲ್ಲಿ ಭೂಕಂಪ ಸಂಭವಿಸಿತ್ತು. ಗಣೇಶ ವಿಸರ್ಜನೆಯ ಸಂದರ್ಭದಲ್ಲಿ ಎಲ್ಲರೂ ಮೆರವಣಿಗೆಯಲ್ಲಿ ಸಂಭ್ರಮದಿಂದ ಕುಣಿದು ಕುಪ್ಪಳಿಸುತ್ತಿರುವಾಗಲೇ 7.5 ತೀವ್ರತೆಯಲ್ಲಿ ಭೂಮಿ ಕಂಪನವಾಗಿತ್ತು. ನಗರವೂ ಸೇರಿದಂತೆ ಗ್ರಾಮೀಣ ಪ್ರದೇಶದ ಅನೇಕ ಮನೆಗಳು ಧಕ್ಕೆಗೊಳಗಾಗಿದ್ದವು ಮತ್ತು ಗೋಡೆರಗಳು ಕುಸಿದಿದ್ದವು. ಯಾವುದೇ ಪ್ರಾಣಹಾನಿಯಾಗಿರದಿದ್ದರೂ ಅಪಾರ ಪ್ರಮಾಣದ ಆಸ್ತಿ ಪಾಸ್ತಿಗೆ ಹಾನಿಯಾಗಿತ್ತು.

ಭೂಕಂಪದ ಕೇಂದ್ರಬಿಂದು ಮಹಾರಾಷ್ಟ್ರ ಲಾತೂರ ಆಗಿತ್ತು. ಲಾತೂರ ಜಿಲ್ಲೆಯ ಗ್ರಾಮವೊಂದರಲ್ಲಿ ಇಡೀ ಗ್ರಾಮವೇ ಕುಸಿದು ಬಿದ್ದು ನೂರಾರು ಜನರು ಮೃತಪಟ್ಟಿದ್ದರು. ಅದರ ಸುತ್ತಲಿನ ಪ್ರದೇಶದಲ್ಲಿ ಭೂಕಂಪದ ತೀವ್ರತೆ ಹೆಚ್ಚಗಿ ಪರಿಣಾಮ ಬೀರಿದ್ದು, ಕಲಬುರಗಿ– ಬೀದರ ಜಿಲ್ಲೆಗಳಲ್ಲೂ ಭೂಕಂಪದ ಪರಿಣಾಮ ಬೀರಿತ್ತು. ಅಲ್ಲದೇ ನಿರಂತರ ತಿಂಗಳ ವರೆಗೂ ಆಗಾಗ ಭೂಮಿ ಕಂಪಿಸುವ ಮೂಲಕ ಇಡೀ ಜಿಲ್ಲೆಯಲ್ಲಿ ಭಯದ ವಾತಾವರಣ

# ರಾಯಚೂರು ಅಂಬೇಡ್ಕರ್ ವೃತ್ತ ನಿರ್ಮಾಣ ಕಾಮಗಾರಿಗೆ ಚಾಲನೆ



**ರಾಯಚೂರು, ಜು. 9:** ನಗರದ ಕೇಂದ್ರ ಭಾಗದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ನವೀಕರಣ ಹಾಗೂ ಸುತ್ತಮುತ್ತಲಿನ ಅಭಿವೃದ್ಧಿ ಕಾಮಗಾರಿಗಳ ಕಾರಣ, ಇಲ್ಲಿನ ಅಂಬೇಡ್ಕರ್ ಪುತ್ಥಳಿಯನ್ನು ಜಿಲ್ಲಾಡಳಿತದ ವತಿಯಿಂದ ತಾತ್ಕಾಲಿಕವಾಗಿ ತೆರವುಗೊಳಿಸಲಾಯಿತು.

ಡಾ. ಬಿ.ಆರ್.ಅಂಬೇಡ್ಕರ್ ವೃತ್ತ ನವೀಕರಣಕ್ಕಾಗಿಯೇ ಹಿಂದಿನ ಜಿಲ್ಲಾಧಿಕಾರಿ ನಿತೀಶ್ ಅವರು ಮಹಾನಗರಪಾಲಿಕೆ, ರಾಯಚೂರು ನಗರ ಅಭಿವೃದ್ಧಿ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿದ್ದರು. ನಗರದ ದಲಿತ ಸಂಘಟನೆಗಳ ಮುಖಂಡರ ಸಭೆಯನ್ನೂ ಕರೆದು ಅವರೊಂದಿಗೆ ಅಭಿವೃದ್ಧಿ ಕಾಮಗಾರಿಗಳ ಕುರಿತು ಸುದೀರ್ಘವಾಗಿ ಸಮಾಲೋಚಿಸಿದ್ದರು. ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಅಭಿವೃದ್ಧಿಯ ಬಗ್ಗೆ 3ಡಿ ವಿನ್ಯಾಸದ ಪ್ರಾತ್ಯಕ್ಷಿಕೆ ನೀಡಿದ್ದರು.

ಕಾಮಗಾರಿ ಶುರುವಾಗುವಷ್ಟರಲ್ಲೇ ಖಾಸಗಿ ವ್ಯಕ್ತಿಯೊಬ್ಬರು ಕೋಟೆ ಮುಂಭಾಗದ ಜಾಗ ತಮ್ಮದೆಂದು ಹೇಳಿಕೊಂಡು ನ್ಯಾಯಾಲಯದ ಮೊರೆ ಹೋಗಿದ್ದರು. ಇದರಿಂದಾಗಿ ಕಾಮಗಾರಿ ಸ್ವಲ್ಪ ವಿಳಂಬವಾಗಿತ್ತು. ಮೆಕ್ಕಾ ದರ್ವಾಜಾದ ಕೋಟೆ ಮುಂಭಾಗದ ನಾಲಾಕ್ಕೆ ತಡೆಗೋಡೆ ನಿರ್ಮಿಸಿ ರಸ್ತೆಯನ್ನು ವಿಸ್ತರಿಸಿಕೊಳ್ಳಲಾಗಿದೆ. ಮೊದಲ ಹಂತವಾಗಿ ವೃತ್ತದ ಅಭಿವೃದ್ಧಿಗಾಗಿ ಡಾ.ಅಂಬೇಡ್ಕರ್ ಪ್ರತಿಮೆ ತೆರವುಗೊಳಿಸಲಾಯಿತು.

ಸಾರ್ವಜನಿಕರಿಗೆ ತಪ್ಪು ಸಂದೇಶ ಹೋಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲಾಧಿಕಾರಿ ಪೂವಿತಾ ಅವರು ಮೊದಲೇ ಮಾಧ್ಯಮಗಳಿಗೆ ಹೇಳಿಕೆ ಕೊಟ್ಟಿದ್ದರು. ವೃತ್ತ ನವೀಕರಣದ ಕಾರಣ ಕಾಮಗಾರಿ ನಡೆಯುತ್ತಿದ್ದು ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಕೋರಿದ್ದರು. ದಲಿತ ಸಂಘಟನೆಗಳ ಮುಖಂಡರು ಹಾಗೂ ಪೊಲೀಸರ ಸಮ್ಮುಖದಲ್ಲಿ ಮೊದಲ ದಿನದ ಕಾರ್ಯ ಸುಸೂತ್ರವಾಗಿ ನಡೆಯಿತು.

ಹೋರಾಟಗಾರರಾದ ರವೀಂದ್ರ ಪಟ್ಟಿ ಹಾಗೂ ಎಂ.ವಿರೂಪಾಕ್ಷಿ ನರಸಿಂಹಲು ಮಾಡಿಗೇರಿ, ರವೀಂದ್ರ ಜಲ್ದಾರ್, ಎಸ್. ಮಾರಪ್ಪ ವಿಶ್ವನಾಥ ಪಟ್ಟಿ. ಎಂ ವಸಂತ, ಭೀಮಣ್ಣ ಮಂಚಾಲ್, ಮಲ್ಲೇಶ ಕುಲುಮೆ, ಆರ್. ಬಸವರಾಜ್, ರಾಜೇಶ್, ಕ್ರಾಂತಿ ವಿಜಯಕುಮಾರ, ಚಿನ್ನ ರಾಯುಡು, ವೆಂಕಟೇಶ ಆರೋಲಿಕರ್, ಪ್ರಾಣೇಶ ಮಂಚಾಲ ಹಾಜರಿದ್ದರು.

ಗೋಲಾಕಾರದ ವೃತ್ತ ನಿರ್ಮಾಣ: ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ಗೋಲಾಕಾರದಲ್ಲಿ ವಿಸ್ತರಣೆಗೊಳ್ಳಲಿದೆ. ಯಾವುದೇ ವಾಹನ ಬಂದರೂ ಗೋಲಾಕಾರದಲ್ಲಿ ಸಂಚರಿಸಿ ಸುಲಭವಾಗಿ ಮುಂದೆ ಸಾಗಲು ಅನುಕೂಲವಾಗಲಿದೆ.

ವೃತ್ತದಲ್ಲಿ ಇನ್ನು ಟ್ರಾಫಿಕ್ ಸಿಗ್ನಲ್‌ಗಳು ಇರುವುದಿಲ್ಲ. ಹೀಗಾಗಿ ವಾಹನಗಳ ನಿಲುಗಡೆಗೂ ಅಲ್ಪ ಅವಕಾಶ ಇರುವುದಿಲ್ಲ. ಸಂಚಾರ ಒತ್ತಡ ಕಡಿಮೆಯಾಗಲಿದೆ.

ಕೋಟೆ ಎದುರು 180 ಅಡಿ ಅಗಲ ಕಂದಕದಲ್ಲಿ ಈಗಾಗಲೇ ಗಟ್ಟಿ ಮಣ್ಣು ಹಾಕಿ ಪಕ್ಕದಲ್ಲಿ ಕಾಂಕ್ರೀಟ್ ತಡೆ ಗೋಡೆ ನಿರ್ಮಿಸಲಾಗಿದೆ. ಕೊಳಚೆ ನೀರು ಪಕ್ಕದಲ್ಲಿ ತನ್ನ ಪಾಡಿಗೆ ಹರಿದು ಹೋಗಲು ದಾರಿ ಮಾಡಿಕೊಡಲಾಗಿದೆ. ನಾಲಾದಲ್ಲಿನ ಹೂಳು ತೆಗೆಯಲಾಗಿದೆ.

ಕೋಟೆ ಮುಂಭಾಗ ಸಮತಟ್ಟುಗೊಳಿಸಿದ ಜಾಗದಲ್ಲಿ ಡಾ.ಅಂಬೇಡ್ಕರ್ ಅವರ ಬದುಕಿನ ಗಾಥೆಯ ಸಂಕ್ಷಿಪ್ತ ಮಾಹಿತಿ, ಪುತ್ಥಳಿ, ಪಾರ್ಲಿಮೆಂಟ್ ಮತ್ತು ಸಂವಿಧಾನ ಗ್ರಂಥದ ಮಾದರಿ ನಿರ್ಮಾಣಗೊಳ್ಳಲಿದೆ. ಕೋಟೆ ಬದಿಯಲ್ಲಿ ಸಂವಿಧಾನ ಪ್ರತಿಕೃತಿ ನಿರ್ಮಿಸಲಾಗುತ್ತಿದೆ. ಅದರ ಕಾಮಗಾರಿ ಪೂರ್ಣಗೊಂಡ ನಂತರ ಡಾ.ಅಂಬೇಡ್ಕರ್ ಪ್ರತಿಮೆಯ ತೋರು ಬೆರಳು ಸಂವಿಧಾನದ ಕಡೆಗೆ ಇರುವಂತೆ ಕಾಣಲಿದೆ. ಏಪ್ರಿಲ್ 14ರ ವೇಳೆಗೆ ಕಾಮಗಾರಿ ಪೂರ್ಣಗೊಳಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ಮಧ್ಯ ಭಾಗದಲ್ಲಿ ಇಲ್ಲ. ಹೀಗಾಗಿ ರೇಖಾಗಣಿತದ ಮೂಲಕ ಅದಕ್ಕೊಂದು ಸರಿಯಾದ ಸ್ಥಾನ ಗುರುತಿಸಲಾಗಿದೆ. ಅದಕ್ಕೆ ಪೂರಕವಾಗಿ ಕೋಟೆ ಪಕ್ಕದಲ್ಲಿ ಗ್ರೀನ್ ಪಾರ್ಕ್ ನಿರ್ಮಾಣಗೊಳ್ಳಲಿದೆ ಎಂದು ಲೋಕೋಪಯೋಗಿ ಇಲಾಖೆಯ ಎಇಇ ಮಹೇಶ ತಿಳಿಸಿದ್ದಾರೆ.

ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಸುರಕ್ಷಿತವಾದ ಸ್ಥಳದಲ್ಲಿ ಇರಿಸಲಾಗಿದೆ. ವೃತ್ತ ಅಭಿವೃದ್ಧಿ ಕಾಮಗಾರಿ ಪೂರ್ಣಗೊಂಡ ನಂತರ ನಿಗದಿತ ಸ್ಥಳದಲ್ಲಿ ಪ್ರತಿಷ್ಠಾಪನೆ ಮಾಡಲಾಗುವುದು' ಎಂದು ಜಿಲ್ಲಾಧಿಕಾರಿ ಪೂವಿತಾ ಸ್ಪಷ್ಟಪಡಿಸಿದ್ದಾರೆ.

## ಬೀದರ ಬಿಜೆಪಿ ಕಚೇರಿಯಲ್ಲಿ ಕಾರ್ಯಕ್ರಮ

# ಶ್ಯಾಮಪ್ರಸಾದ್ ಮುಖರ್ಜಿ ಜನ್ಮದಿನಾಚರಣೆ




**ಬೀದರ್, ಜು. 9:** ಭಾರತೀಯ ಜನಸಂಘದ ಸಂಸ್ಥಾಪಕ ಡಾ. ಶ್ಯಾಮಪ್ರಸಾದ್ ಮುಖರ್ಜಿ ಅವರ ಜನ್ಮದಿನವನ್ನು ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಆಚರಿಸಲಾಯಿತು.


ಕಾರ್ಯಕ್ರಮದಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು

ಬಳಿಕ ಮಾತನಾಡಿದ ಬಿಜೆಪಿ ಜಿಲ್ಲಾ ಉಸ್ತುವಾರಿ ಗುರುನಾಥ ಜ್ಯಾಂತಿಕರ್, ಡಾ. ಶ್ಯಾಮಪ್ರಸಾದ್ ಮುಖರ್ಜಿ ಅವರು ರಾಷ್ಟ್ರದ ಏಕತೆ, ಅಖಂಡತೆ ಹಾಗೂ ಸಾಂಸ್ಕೃತಿಕ ರಾಷ್ಟ್ರೀಯತೆಯ ಪ್ರತೀಕವಾಗಿದ್ದರು. ಸ್ವಾತಂತ್ರ್ಯೋತ್ತರ ಭಾರತದಲ್ಲಿ ರಾಷ್ಟ್ರ ನಿರ್ಮಾಣಕ್ಕೆ ಅವರ ಕೊಡುಗೆ ಮಹತ್ವದ್ದಾಗಿದೆ. ರಾಷ್ಟ್ರೀಯ ಹಿತಾಸಕ್ತಿ ಹಾಗೂ ದೇಶದ ಸಮಗ್ರತೆಗೆ ಅವರು ತೋರಿದ ಅಚಲ ಬದ್ಧತೆ ಇಂದಿಗೂ ಪ್ರತಿಯೊಬ್ಬ ಭಾರತೀಯನಿಗೂ ಸ್ಫೂರ್ತಿಯಾಗಿದೆ ಎಂದು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ ಡಾ. ಶೈಲೇಂದ್ರ ಬೆಲ್ದಾಳೆ ಮಾತನಾಡಿ, 'ಯುವಜನತೆ ಡಾ. ಮುಖರ್ಜಿ ಅವರ ದೇಶಪ್ರೇಮ, ಶಿಸ್ತು, ಸೇವಾ ಮನೋಭಾವ ಹಾಗೂ ರಾಷ್ಟ್ರೀಯ ಚಿಂತನೆಗಳನ್ನು ಅಳವಡಿಸಿಕೊಂಡು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. 'ರಾಷ್ಟ್ರ ಮೊದಲು' ಎಂಬ ಅವರ ಧ್ಯೇಯ ಪ್ರತಿಯೊಬ್ಬ ಕಾರ್ಯಕರ್ತನಿಗೂ ಮಾರ್ಗದರ್ಶಿಯಾಗಿದೆ' ಎಂದು ಹೇಳಿದರು. ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್ ಮಾತನಾಡಿದರು.

ಮಾಜಿ ವಿಧಾನ ಪರಿಷತ್ ಸಭಾಪತಿ ರಘುನಾಥರಾವ ಮಲ್ಕಾಪುರೆ, ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ, ಮುಖಂಡರಾದ ಬಾಬುರಾವ ಕಾರಬಾರಿ, ರಾಜಶೇಖರ ನಾಗಮೂರ್ತಿ, ಜಿಲ್ಲಾ ಬಿಜೆಪಿ ಪದಾಧಿಕಾರಿಗಳು, ವಿವಿಧ ಮೋರ್ಚಾಗಳ ಅಧ್ಯಕ್ಷರು, ಮಂಡಲ ಅಧ್ಯಕ್ಷರು, ಜನಪ್ರತಿನಿಧಿಗಳು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಎಸ್‌ಐಆರ್ ಸಭೆಯಲ್ಲಿ ಕಾಂಗ್ರೆಸ್ ನಾಯಕ ಅಲ್ಲಂ ಪ್ರಶಾಂತ್ ಭಾಗಿ



**ಬಳ್ಳಾರಿ ಜು 09.** ಬಳ್ಳಾರಿಯ ಜಿಲ್ಲಾಡಳಿತ ಭವನದಲ್ಲಿ ಅಪರ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆಯಲ್ಲಿ ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಲ್ಲಂ ಪ್ರಶಾಂತ್ ಅವರು ಭಾಗವಹಿಸಿದ್ದರು.

ಸಭೆಯಲ್ಲಿ ಎಸ್.ಐ.ಆರ್. ಕುರಿತು ಹಲವು ಪ್ರಮುಖ ವಿಷಯಗಳ ಬಗ್ಗೆ ಚರ್ಚೆ ನಡೆಯಿತು. ಜಿಲ್ಲೆಯ ವಿವಿಧ ಭಾಗಗಳಲ್ಲಿ ಮತದಾರರಿಗೆ ನೆರವಾಗುವಂತೆ ಸಹಾಯ ಕೇಂದ್ರಗಳು, ಬಿ.ಎಲ್.ಓ. ಕೇಂದ್ರಗಳು ಹಾಗೂ ವೋಟರ್ ಸಹಾಯ ಕೇಂದ್ರಗಳನ್ನು ಸ್ಥಾಪಿಸಿ, ಅವುಗಳ ಪಟ್ಟಿಯನ್ನು ಸಾರ್ವಜನಿಕರಿಗೆ ಪ್ರಕಟಿಸುವಂತೆ ಮನವಿ ಮಾಡಿದರು.


ಅದೇ ರೀತಿ, ಎಸ್.ಐ.ಆರ್. ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲು ಆಟೋಗಳ ಮೂಲಕ ಪ್ರಚಾರ ನಡೆಸುವಂತೆ ಹಾಗೂ ಆನ್‌ಲೈನ್ ಅರ್ಜಿ ಭರ್ತಿ ಮಾಡುವ ಬಗ್ಗೆ ಕಾಲೇಜುಗಳಲ್ಲಿ ವಿಶೇಷ ಅರಿವು ಕಾರ್ಯಕ್ರಮಗಳನ್ನು ಆಯೋಜಿಸಿ ಯುವ ಮತದಾರರಿಗೆ ತರಬೇತಿ ನೀಡುವಂತೆ ಅಧಿಕಾರಿ ಗಳೊಂದಿಗೆ ಚರ್ಚಿಸಿದರು.

# ವಿದ್ಯುತ್ ಅವಘಡದಲ್ಲಿ ಖಾಸಗಿ ಕಾರ್ಮಿಕ ಸಾವು

**ಬಳ್ಳಾರಿ, ಜು 09:** ಬಳ್ಳಾರಿ ನಗರದ ಸಂಗನಕಲ್ಲು ಗುಡ್ಡ ಸಮೀಪದ ಧ್ಯಾನ ಕೇಂದ್ರದ ಬಳಿ ಬುಧವಾರ ನಡೆದ ವಿದ್ಯುತ್ ಅವಘಡದಲ್ಲಿ ಖಾಸಗಿ ಕಾರ್ಮಿಕನೊಬ್ಬ ಮೃತಪಟ್ಟಿರುವ ಘಟನೆ ನಡೆದಿದೆ.

ಮೃತರನ್ನು ಯರಗುಡಿ ಗ್ರಾಮದ ಹುಲಗಪ್ಪ (22) ಎಂದು ಗುರುತಿಸಲಾಗಿದೆ. ಜೆಸ್ಕಾಂ ವ್ಯಾಪ್ತಿಯಲ್ಲಿ ವಿದ್ಯುತ್ ಲೈನ್‌ಗೆ ಲಿಂಕ್ ಕಾಮಗಾರಿ ನಡೆಯುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ ಎನ್ನಲಾಗಿದೆ. ಅಪಘಾತದ ವೇಳೆ ಹುಲಗಪ್ಪ ವಿದ್ಯುತ್ ಕಂಬದ ಮೇಲೆ ಕೆಲಸ ಮಾಡುತ್ತಿದ್ದಾಗ ವಿದ್ಯುತ್ ಸ್ಪರ್ಶವಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯ ಬಳಿಕ ಸ್ಥಳಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ.



ಘಟನೆಗೆ ಸಂಬಂಧಿಸಿದಂತೆ ಕೆಲಸವನ್ನು ಯಾವ ಆದೇಶದಡಿ ಕೈಗೊಳ್ಳಲಾಗಿತ್ತು, ಅಗತ್ಯ ಸುರಕ್ಷಾ ಕ್ರಮಗಳನ್ನು ಪಾಲಿಸಲಾಗಿತ್ತೇ ಹಾಗೂ ಕಾರ್ಮಿಕರಿಗೆ ಸುರಕ್ಷತಾ ಉಪಕರಣಗಳನ್ನು ಒದಗಿಸಲಾಗಿತ್ತೇ ಎಂಬ ಕುರಿತು ತನಿಖೆ ನಡೆಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ಮೃತ ಹುಲಗಪ್ಪ ಅವರ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ನ್ಯಾಯ ಒದಗಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದು, ಘಟನೆಗೆ ಸಂಬಂಧಿಸಿ ದಂತೆ ಅಧಿಕಾರಿಗಳು ಸಮಗ್ರ ತನಿಖೆ ನಡೆಸಿ ಕ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಈ ಕುರಿತು ಸಂಬಂಧಪಟ್ಟ ಇಲಾಖೆಯಿಂದ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

# ರಾಯಚೂರು ಕೃಷಿ ವಿವಿಗೆ 19 ಪೇಟೆಂಟ್‌ಗಳ ಗರಿ: ರಾಜ್ಯದ ಇತರ ಕೃಷಿ ವಿವಿ ಮೀರಿಸಿ ಅತಿಹೆಚ್ಚು ಬೌದ್ಧಿಕ ಹಕ್ಕು ಸ್ವಾಮ್ಯ ಪಡೆದ ಸಾಧನೆ

**ರಾಯಚೂರು, ಜು. 9:** ವಿವಿಧ ಅವಿಷ್ಕಾರಗಳ ಮೂಲಕ ಇಲ್ಲಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯ ಮತ್ತಷ್ಟು ಪೇಟೆಂಟ್ ಪಡೆಯುವಲ್ಲಿ ಮಹತ್ತರ ಸಾಧನೆ ಮಾಡಿದೆ. ಕೇವಲ ಮೂರಾಲ್ಕು ತಿಂಗಳ ಅವಧಿಯಲ್ಲಿ ಹೊಸ ಅವಿಷ್ಕಾರಗಳಿಗಾಗಿ ಪೇಟೆಂಟ್ ಗಿಟ್ಟಿಸಿಕೊಂಡು ಶಹಬ್ಬಾಸ್ ಎನಿಸಿಕೊಂಡಿದೆ. ರಾಜ್ಯದಲ್ಲಿರುವ ತೋಟಗಾರಿಕೆ ಮತ್ತು ಕೃಷಿ ಸಂಬಂಧಿತ ಐದು ವಿವಿಗಳ ಪೈಕಿ ರಾಯಚೂರು ಕೃಷಿ ವಿವಿಯ ಎಂಜಿನಿಯರಿಂಗ್ ವಿಭಾಗ ಅತಿಹೆಚ್ಚು ಪೇಟೆಂಟ್ ಗಿಟ್ಟಕೊಂಡಿರುವುದು ವಿಶೇಷವಾಗಿದೆ.

ಈ ಮೊದಲು ರಾಯಚೂರು ಕೃಷಿ ವಿಶ್ವವಿದ್ಯಾಲಯ, ಧಾರವಾಡ ಕೃಷಿ ವಿಶ್ವವಿದ್ಯಾಲಯ ವ್ಯಾಪ್ತಿಗೊಳ ಪಟ್ಟಿತ್ತು. ಹಲವಾರು ವರ್ಷಗಳ ಬಳಿಕ ಪ್ರತ್ಯೇಕಗೊಂಡು ಧಾರವಾಡ ಮಾತ್ರವಲ್ಲದೇ ರಾಜ್ಯದ ಇತರೆ ನಾಲ್ಕು ವಿಶ್ವವಿದ್ಯಾಲಯಗಳನ್ನೂ ಮೀರಿ ಪೇಟೆಂಟ್ ಪಡೆಯುವ ಹಾದಿಯಲ್ಲಿ ದಿಟ್ಟ ಹೆಜ್ಜೆ ಇಟ್ಟಿದೆ. ಅದರಲ್ಲೂ ಎಂಜಿನಿಯರಿಂಗ್ ವಿಭಾಗ ಹೆಚ್ಚು ಪೇಟೆಂಟ್‌ಗಳನ್ನು ತನ್ನ ಮುಡಿಗೇರಿಸಿ ಕೊಂಡಿರುವುದು ವಿಶೇಷವಾಗಿದೆ. ಹೀಗೆ ರಾಯಚೂರು ಕೃಷಿ ವಿವಿ 19 ಪೇಟೆಂಟ್‌ಗಳನ್ನು ಪಡೆದುಕೊಂಡಿದೆ.

**ವರ್ಷದ ಮೊದಲ ಪೇಟೆಂಟ್:** ಇದುವರೆಗೆ ಡೋಸ್ ಮೂಲಕ ಕೀಟನಾಶಕ ಸಿಂಪಡಣೆ ಕಾರ್ಯ ಮಾತ್ರ ನಡೆಯುತ್ತಿತ್ತು. ಕೃಷಿ ಮಹಾವಿದ್ಯಾಲಯದವರು ಭತ್ತ ಬಿತ್ತನೆಗಾಗಿ ಪ್ರತ್ಯೇಕ ಡೋಸ್ ಅಧರಿತ ಯಂತ್ರ ಉಪಯೋಗಿಸಿ ಬೀಜ ಬಿತ್ತನೆ ಸಾಧ್ಯ ಎಂಬುದನ್ನು ಸಾಬೀತು ಮಾಡಿ ತೋರಿಸಿದೆ. ಭತ್ತ ಬಿತ್ತನೆಗಾಗಿಯೇ ಅವಿಷ್ಕರಿಸಿದ ಡೋಣ್ ಇದು ಎಂಬುದು ವಿಶೇಷ. ಒಂದು ಹೆಕ್ಟೇರ್‌ಗೆ 29 ಕೆಜಿ ಸರಾಸರಿ ಭತ್ತ ಬಿತ್ತನೆ ಮಾಡುಬಹುದಾಗಿದೆ. ಈ ಡೋಣ್ ಆವಿಷ್ಕಾರಕ್ಕಾಗಿ ಫೆ.9, 2026ರಂದು ಪೇಜೆಂಟ್ ದೊರೆತಿದೆ.

**ಎರಡನೇ ಆವಿಷ್ಕಾರ :** ಬೆಳೆಗಳ ಸಾಲು ಮತ್ತು ಗಿಡಗಳ ಮಧ್ಯೆ ಕಳೆ ತೆಗೆಯಲು ವಿಶೇಷ ಯಂತ್ರವನ್ನು ಆವಿಷ್ಕರಿಸಿದ್ದಕ್ಕೆ ಪೇಟೆಂಟ್ ದೊರೆತಿದೆ. ಈ ಯಂತ್ರದ ಸಹಾಯದಿಂದ ಒಂದು ಗಂಟೆಯಲ್ಲಿ ಅಂದಾಜು ಒಂದೂ ಕಾಲು ಎಕರೆ ವ್ಯಾಪ್ತಿಯಲ್ಲಿ ಕಳೆ ತೆಗೆಯಬಹುದು. ಸೆನ್ಸಾರ್ ಆಧರಿತ ಯಂತ್ರ ಇದಾಗಿದ್ದು ಬೆಳಗ ಹಾನಿ ಮಾಡದಂತೆ ಕಳೆ ತೆಗೆಯುವ ಸಾಮರ್ಥ ಹೊಂದಿದೆ. ಪತ್ರಿ ಬೆಳೆಗೆ ಪ್ರಾಯೋಗಿಕವಾಗಿ ಇದನ್ನು ಬಳಸಬಹುದು ಎಂಬುದನ್ನು ಕೃಷಿ ತಾಂತ್ರಿಕ ಮಹಾವಿದ್ಯಾಲಯ ಸಾಬೀತುಪಡಿಸಿದ್ದು, ಇದಕ್ಕೆ ಮಾ.3, 2026ರಂದು ಪೇಟೆಂಟ್ ಲಭ್ಯವಾಗಿದೆ.

**ಮೂರನೇ ಪೇಟೆಂಟ್:** ತೊಗರಿ ಗಿಡಗಳ ಬೆಳವಣಿಗೆ ಚೆನ್ನಾಗಿರಲು ಕುಡಿ ಚಿವುಟುವುದಕ್ಕಾಗಿ ಸಾಮಾನ್ಯ ಕಾರ್ಮಿಕರನ್ನು ಬಳಸಲಾಗುತ್ತದೆ. ಸದ್ಯ ಈ ಕೆಲಸಕ್ಕೆ ಕೃಷಿ ವಿವಿಯ ತಾಂತ್ರಿಕ ಮಹಾವಿದ್ಯಾಲಯ ಹೊಸ ಅವಿಷ್ಕಾರ ಮಾಡಿ ಕುಡಿ ಚಿವುಟುವ ಯಂತ್ರ ಆವಿಷ್ಕರಿಸಿ ಗಮನ ಸೆಳೆದಿದೆ. ಇದು ಒಂದು ದಿನದಲ್ಲಿ 5 ಎಕರೆ




ವ್ಯಾಪ್ತಿಯಲ್ಲಿಯ ಗಿಡಗಳ ಕುಡಿ ಚಿವುಟಬಲ್ಲದು. ಕಾರ್ಮಿಕರನ್ನು ಬಳಕೆ ಮಾಡಿಕೊಂಡು ಒಂದು ದಿನಕ್ಕೆ ಸರಾಸರಿ ಮೂರೂವರೆ ಎಕರೆಯಷ್ಟು ಮಾತ್ರ ಕುಡಿ ಚಿವುಟಬಹುದು. ಆದರೆ, ಈ ಯಂತ್ರದ ಸಹಾಯದಿಂದ ಅಂದಾಜು 5 ಹೆಕ್ಟೇರ್ ವರೆಗೆ ಒಂದು ದಿನದಲ್ಲಿ ತೊಗರಿ ಗಿಡದ ಕುಡಿ ಚಿವುಟಬಹುದು. ಈ ಯಂತ್ರದ ಆವಿಷ್ಕಾರಕ್ಕೆ ಹೊಸದಿಲ್ಲಿಯ ಬೌದ್ಧಿಹಕ್ಕುಸ್ವಾಮ್ಯ ಕಾರ್ಯಾಲಯ ಏ.1, 2026 ರಂದು ಪೇಟೆಂಟ್ ಕೊಟ್ಟಿದೆ. ನಾಲ್ಕನೇ ಆವಿಷ್ಕಾರ: ಸಾಮಾನ್ಯವಾಗಿ ಕೀಟನಾಶಕ ಸಿಂಪಡಿಸಲು ನಾನಾ ಬಗೆಯ ಸಸ್ಯ ಸಂರಕ್ಷಣಾ ಉಪಕರಣ ಬಳಸಲಾಗುತ್ತದೆ. ಈ ಕೆಲಸಕ್ಕಾಗಿ ತಾಂತ್ರಿಕ ಮಹಾವಿದ್ಯಾಲಯವು ಎಲೆಕ್ಟ್ರೋ ಸ್ಟಾಟಿಕ್ ಸ್ಪ್ರೇ ನಾಜೋಲ್ ಸಿಂಪರಣಾ ಉಪಕರಣ ಆವಿಷ್ಕರಿಸಿದೆ. ಈ ಉಪಕರಣದ ಸಹಾಯದಿಂದ ಹತ್ತಿಗಿಡಗಳ ಮೇಲ್ಭಾಗ ಕೆಳಭಾಗದಲ್ಲಿ ಟೊಂಗೆ, ಎಲೆ, ಕಾಂಡಕ್ಕೆ ಏಕಕಾಲದಲ್ಲಿ ಕೀಟನಾಶಕ ಸಿಂಪಡಿಸಬಹುದು. ಇದರಿಂದ ಕೀಟನಾಶಕ ವ್ಯರ್ಥವಾಗುವುದನ್ನು ತಪ್ಪಿಸಬಹುದು. ಕೀಟನಾಶಕ ಸಿಂಪಡಣೆಗೆ ಸಮಯದ ಉಳಿತಾಯವನ್ನೂ ಮಾಡಬಹುದು. ಟ್ರ್ಯಾಕ್ಟರ್ ಚಾಲಿತ ಉಪಕರಣದಲ್ಲಿ ಅಳವಡಿಸಿ ಬಳಸಲು ಇದನ್ನು ವಿನ್ಯಾಸಗೊಳಿಸಲಾಗಿದ್ದು, ಒಂದು ಗಂಟೆಗೆ ಸರಾಸರಿ ಅಂದಾಜು ಮೂರು ಹೆಕ್ಟೇರ್ ವ್ಯಾಪ್ತಿಯಲ್ಲಿನ ಗಿಡಗಳಿಗೆ ಕೀಟನಾಶಕ ಸಿಂಪಡಿಸಬಹುದು. ಈ ಆವಿಷ್ಕಾರಕ್ಕೆ ಮೇ 7, 2026ರಂದು ಬೌದ್ಧಿಕ ಹಕ್ಕು ಸ್ವಾಮ್ಯ ಲಭಿಸಿದೆ. ಹೀಗೆ ಸುಮಾರು 19 ಆವಿಷ್ಕಾರಗಳಿಗೆ ರಾಯಚೂರು ವಿವಿ ಪೇಟೆಂಟ್ ಗಿಟ್ಟಿಸಿಕೊಳ್ಳುವ ಮೂಲಕ ರಾಜ್ಯದ ಇತರೆ ಕೃಷಿ ವಿವಿಗಳಿಗಿಂತ ಬಹಳಷ್ಟು ಮುನ್ನಡೆ ಸಾಧಿಸಿದೆ.

ರಾಜ್ಯದ ಯಾವ ವಿವಿಗೆ, ಎಷ್ಟು ಪೇಟೆಂಟ್?: ಬೆಂಗಳೂರು ಕೃಷಿ ವಿವಿ: 5, ಧಾರವಾಡ ಕೃಷಿ ವಿವಿ: 4, ರಾಯಚೂರು ಕೃಷಿ ವಿವಿ: 19, ಬಾಗಲಕೋಟೆ ತೋಟಗಾರಿಕೆ ವಿವಿ: 5, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿವಿ: 4, ವಿವಿಧ ಆವಿಷ್ಕಾರಗಳಿಗೆ ಬೌದ್ಧಿಕ ಹಕ್ಕು ಸ್ವಾಮ್ಯ ಪಡೆಯುವಲ್ಲಿ ನಮ್ಮ ರಾಯಚೂರು ಕೃಷಿ ವಿವಿ ಮುಂಚೂಣಿಯಲ್ಲಿದೆ ಎಂಬುದನ್ನು ಹೆಮ್ಮೆಯಿಂದ ಹೇಳುತ್ತೇವೆ. ಧಾರವಾಡ, ಜಿಕೆವಿಕೆ ಬೆಂಗಳೂರು, ಬಾಗಲಕೋಟ ತೋಟಗಾರಿಕೆ, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿವಿಯ ಎಂಜಿನಿಯರಿಂಗ್ ವಿಭಾಗಗಳಿಗೆ ಹೋಲಿಸಿದರೆ ನಮ್ಮ ವಿವಿಯ ಎಂಜಿನಿಯರಿಂಗ್ ವಿಭಾಗ ಅತಿಹೆಚ್ಚು ಪೇಟೆಂಟ್‌ಗಳನ್ನು ಇದುವರೆಗೆ ಪಡೆದಿದೆ.

# ಭಾರತ–ಆಸ್ಟ್ರೇಲಿಯಾ ನಡುವೆ ರಕ್ಷಣಾ, ಪರಮಾಣು, ಇಂಧನ, ತಂತ್ರಜ್ಞಾನ ಪಾಲುದಾರಿಕೆಯನ್ನು ಬಲಪಡಿಸಲು 18 ಒಪ್ಪಂದ: ಪ್ರಧಾನಿ ಮೋದಿ ಯಶಸ್ವಿ ಪ್ರವಾಸ ಮುಕ್ತಾಯ

**ಮೆಲ್ಬೋರ್ನ್, ಜುಲೈ 9:** ಭಾರತ ಮತ್ತು ಆಸ್ಟ್ರೇಲಿಯಾ ಗುರುವಾರ ರಕ್ಷಣೆ, ಕಡಲ ಭದ್ರತೆ, ನಾಗರಿಕ ಪರಮಾಣು ಸಹಕಾರ, ಇಂಧನ ಭದ್ರತೆ, ನಿರ್ಣಾಯಕ ತಂತ್ರಜ್ಞಾನಗಳು, ಶಿಕ್ಷಣ, ಕೌಶಲ್ಯ ಅಭಿವೃದ್ಧಿ, ವೈಜ್ಞಾನಿಕ ಸಂಶೋಧನೆ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಒಳಗೊಂಡ 18 ಕಾರ್ಯತಂತ್ರದ ಫಲಿತಾಂಶಗಳ ಮಹತ್ವಾಕಾಂಕ್ಷೆಯ ಪ್ಯಾಕೇಜ್ ಅನ್ನು ಅನಾವರಣಗೊಳಿಸಿದವು, ಇದು ಪ್ರಧಾನಿ ನರೇಂದ್ರ ಮೋದಿಯವರ ಆಸ್ಟ್ರೇಲಿಯಾ ಭೇಟಿಯ ಸಂದರ್ಭದಲ್ಲಿ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ಗಮನಾರ್ಹ ವಿಸ್ತರಣೆಯನ್ನು ಗುರುತಿಸುತ್ತದೆ. ಮೆಲ್ಬೋರ್ನ್‌ನಲ್ಲಿ ಪ್ರಧಾನಿ ಮೋದಿ ಮತ್ತು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ನಡುವಿನ ಮೂರನೇ ಭಾರತ–ಆಸ್ಟ್ರೇಲಿಯಾ ವಾರ್ಷಿಕ ಶೃಂಗಸಭೆಯ ನಂತರ ವ್ಯಾಪಕ ಶ್ರೇಣಿಯ ಉಪಕ್ರಮಗಳನ್ನು ಘೋಷಿಸಲಾಯಿತು, ಇದು ಎರಡು ಇಂಡೋ–ಪೆಸಿಫಿಕ್ ಪಾಲುದಾರರ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರದ ಒಮ್ಮುಖವನ್ನು ಒತ್ತಿಹೇಳುತ್ತದೆ.

ಫಲಿತಾಂಶಗಳ ಹೃದಯಭಾಗದಲ್ಲಿ ರಕ್ಷಣಾ ಮತ್ತು ಭದ್ರತಾ ಸಹಕಾರದ ಹೊಸ ಜಂಟಿ ಘೋಷಣೆ (ಜೆಡಿಡಿಎಸ್ಸಿ) ಇದೆ, ಇದು 2009 ರ ಭದ್ರತೆಯ ಜಂಟಿ ಘೋಷಣೆಯನ್ನು ನವೀಕರಿಸುತ್ತದೆ ಮತ್ತು ಭವಿಷ್ಯದ ರಕ್ಷಣಾ ಸಂಬಂಧಗಳಿಗೆ ಸಮಗ್ರ ಮಾರ್ಗಸೂಚಿಯನ್ನು ಒದಗಿಸುತ್ತದೆ. ಈ ಘೋಷಣೆಯು ಸಶಸ್ತ್ರ ಪಡೆಗಳ ನಡುವಿನ ಪರಸ್ಪರ ಕಾರ್ಯಸಾಧ್ಯತೆ, ಸಾಮರ್ಥ್ಯ ವೃದ್ಧಿ, ಕಡಲ ಸಹಕಾರ, ರಕ್ಷಣಾ ಕೈಗಾರಿಕಾ ಸಹಯೋಗ, ಸೈಬರ್ ಭದ್ರತೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳು, ಭಯೋತ್ಪಾದನೆ ನಿಗ್ರಹ, ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ, ಮತ್ತು ವಿಶ್ವಸಂಸ್ಥೆಯ ಸಮುದ್ರ ಕಾನೂನಿನ ಸಮಾವೇಶ , ASEAN, ಪೆಸಿಫಿಕ್ ದ್ವೀಪಗಳ ವೇದಿಕೆ ಮತ್ತು ಹಿಂದೂ ಮಹಾಸಾಗರ ರಿಮ್ ಅಸೋಸಿಯೇಷನ್ ಸೇರಿದಂತೆ ಬಹುಪಕ್ಷೀಯ ವೇದಿಕೆಗಳಲ್ಲಿ ಸಂಘಟಿತ ತೊಡಗಿಸಿಕೊಳ್ಳುವಿಕೆಯನ್ನು ಆದ್ಯತೆಯ ಕ್ಷೇತ್ರಗಳಾಗಿ ಗುರುತಿಸುತ್ತದೆ.

ಭಾರತ–ಆಸ್ಟ್ರೇಲಿಯಾ ನಾಗರಿಕ ಪರಮಾಣು ಒಪ್ಪಂದದ ಅಡಿಯಲ್ಲಿ ಆಡಳಿತಾತ್ಮಕ ವ್ಯವಸ್ಥೆಗಳನ್ನು ಅಂತಿಮಗೊಳಿಸುವುದರೊಂದಿಗೆ ಒಂದು ಮಹತ್ವದ ಪ್ರಗತಿಯು ಸಂಭವಿಸಿತು, 2014 ರಲ್ಲಿ ಸಹಿ ಹಾಕಲಾದ ಒಪ್ಪಂದವನ್ನು ಕಾರ್ಯಗತಗೊಳಿಸಿತು ಮತ್ತು ಭಾರತಕ್ಕೆ ಆಸ್ಟ್ರೇಲಿಯಾದ ಯುರೇನಿಯಂ ಪೂರೈಕೆಯನ್ನು ಸಕ್ರಿಯಗೊಳಿಸಿತು.

ರಕ್ಷಣಾ ಘೋಷಣೆಗೆ ಪೂರಕವಾಗಿ, ಎರಡೂ ದೇಶಗಳು ಇಂಡೋ–ಪೆಸಿಫಿಕ್‌ನಾದ್ಯಂತ ಕಡಲ ಭದ್ರತೆಯನ್ನು ಹೆಚ್ಚಿಸಲು ಮಾಹಿತಿ ಹಂಚಿಕೆ, ಸಾಮರ್ಥ್ಯ ಅಭಿವೃದ್ಧಿ ಮತ್ತು ಕಾರ್ಯಾಚರಣೆಯ ಸಮನ್ವಯವನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಕಡಲ ಭದ್ರತಾ ಸಹಯೋಗ ಮಾರ್ಗಸೂಚಿಯನ್ನು ಅಳವಡಿಸಿಕೊಂಡವು. ಮತ್ತೊಂದು ಪ್ರಮುಖ ರಕ್ಷಣಾ ಉಪಕ್ರಮದಲ್ಲಿ, ಆಸ್ಟ್ರೇಲಿಯಾ 2028–29ರ ಅವಧಿಯಲ್ಲಿ ಆಸ್ಟ್ರೇಲಿಯನ್ ರಕ್ಷಣಾ ಕಾಲೇಜಿನಲ್ಲಿ ಸೇವೆ ಸಲ್ಲಿಸಲು ಭಾರತೀಯ ಮಿಲಿಟರಿ ಬೋಧಕರನ್ನು ಆಹ್ವಾನಿಸಿತು, ಇದು ಎರಡೂ ದೇಶಗಳ ನಡುವಿನ ಮಿಲಿಟರಿಯಿಂದ ಮಿಲಿಟರಿಗೆ ತೊಡಗಿಸಿಕೊಳ್ಳುವಿಕೆ ಮತ್ತು ವೃತ್ತಿಪರ ವಿನಿಮಯದ ಬೆಳೆಯುತ್ತಿರುವ ಮಟ್ಟವನ್ನು ಪ್ರತಿಬಿಂಬಿಸುತ್ತದೆ.

ಇಂಧನ ಭದ್ರತೆ ಮತ್ತು ಶುದ್ಧ ಇಂಧನವು ಪಾಲುದಾರಿಕೆಯ ಮತ್ತೊಂದು ಪ್ರಮುಖ ಆಧಾರಸ್ತಂಭವಾಗಿ ಹೊರಹೊಮ್ಮಿವೆ. ಹೆಚ್ಚುತ್ತಿರುವ ಅನಿಶ್ಚಿತ ಭೌಗೋಳಿಕ ರಾಜಕೀಯ ಪರಿಸರದ ನಡುವೆಯೂ ಸುರಕ್ಷಿತ ಮತ್ತು ವಿಶ್ವಾಸಾರ್ಹ ಇಂಧನ ಪೂರೈಕೆಗಳನ್ನು ಖಚಿತಪಡಿಸಿಕೊಳ್ಳಲು ತಮ್ಮ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸುವ ಮೂಲಕ ಭಾರತ ಮತ್ತು ಆಸ್ಟ್ರೇಲಿಯಾ ಇಂಧನ ಭದ್ರತೆಯ ಕುರಿತು ಜಂಟಿ ಹೇಳಿಕೆಯನ್ನು ಬಿಡುಗಡೆ ಮಾಡಿದೆ. ಎರಡೂ ಕಡೆಯವರು ಗಾಂಧಿನಗರದ ಪಂಡಿತ್ ದೀನದಯಾಳ್ ಇಂಧನ ವಿಶ್ವವಿದ್ಯಾಲಯದಲ್ಲಿ ರೂಫ್ಟಾಪ್ ಸೌರ ತರಬೇತಿ ಅಕಾಡೆಮಿಯನ್ನು ಸಹ ಕಾರ್ಯಗತಗೊಳಿಸಿದರು.

ಸ್ಥಿತಿಸ್ಥಾಪಕ ತಂತ್ರಜ್ಞಾನ ಪರಿಸರ ವ್ಯವಸ್ಥೆಗಳ ಹೆಚ್ಚುತ್ತಿರುವ ಪ್ರಾಮುಖ್ಯತೆಯನ್ನು ಗುರುತಿಸಿ, ಭಾರತ ಮತ್ತು ಆಸ್ಟ್ರೇಲಿಯಾ ಸೈಬರ್, ನಿರ್ಣಾಯಕ ತಂತ್ರಜ್ಞಾನಗಳು ಮತ್ತು ಸರಬರಾಜು ಸರಪಳಿಗಳಿಗಾಗಿ ಆಸ್ಟ್ರೇಲಿಯಾ–ಭಾರತ ಪಾಲುದಾರಿಕೆ ಅನ್ನು ಪ್ರಾರಂಭಿಸಿದವು.

ಆಸ್ಟ್ರೇಲಿಯಾ–ಕೆನಡಾ–ಭಾರತ ತಂತ್ರಜ್ಞಾನ ಮತ್ತು ನಾವೀನ್ಯತೆ ಪಾಲುದಾರಿಕೆಯ ಅಡಿಯಲ್ಲಿ ತ್ರಿಪಕ್ಷೀಯ ತಿಳುವಳಿಕೆ ಒಪ್ಪಂದದ ಮೂಲಕ ತಂತ್ರಜ್ಞಾನ ಸಹಯೋಗವನ್ನು ಮತ್ತಷ್ಟು ವಿಸ್ತರಿಸಲಾಯಿತು, ಇದು ಮೂರು ದೇಶಗಳಲ್ಲಿ ಉದಯೋನ್ಮುಖ ತಂತ್ರಜ್ಞಾನಗಳು ಮತ್ತು ನಾವೀನ್ಯತೆಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ.

ನಿರ್ಣಾಯಕ ಖನಿಜಗಳು ಮತ್ತು ಭೂವೈಜ್ಞಾನಿಕ ಸಹಕಾರವು ಸಹ ಪ್ರಮುಖವಾಗಿ ಕಾಣಿಸಿಕೊಂಡಿದೆ. ಜಿಯೋಸೈನ್ಸ್ ಆಸ್ಟ್ರೇಲಿಯಾ ಮತ್ತು ಭಾರತದ ಭೂವೈಜ್ಞಾನಿಕ ಸಮೀಕ್ಷೆಯ ನಡುವಿನ ಹೊಸ ತಿಳುವಳಿಕೆ ಒಪ್ಪಂದವು ಖನಿಜ ಪರಿಶೋಧನೆಯಲ್ಲಿ ಮುಂದುವರಿದ ಪರಿಶೋಧನಾ ವಿಧಾನಗಳು, ತಾಂತ್ರಿಕ ಆಧುನೀಕರಣ, ಸಾಮರ್ಥ್ಯ ವೃದ್ಧಿ ಮತ್ತು ವೈಜ್ಞಾನಿಕ ಸಹಯೋಗವನ್ನು ಸುಗಮಗೊಳಿಸುತ್ತದೆ, ನಿರ್ಣಾಯಕ ಖನಿಜ ಪೂರೈಕೆ ಸರಪಳಿಗಳನ್ನು ಸುರಕ್ಷಿತಗೊಳಿಸುವ ಪ್ರಯತ್ನಗಳನ್ನು ಬಲಪಡಿಸುತ್ತದೆ.

ಎರಡು ದೇಶಗಳು ಹಲವಾರು ಒಪ್ಪಂದಗಳ ಮೂಲಕ ತಮ್ಮ ಶಿಕ್ಷಣ ಮತ್ತು ಕೌಶಲ್ಯ ಪಾಲುದಾರಿಕೆಯನ್ನು ಗಮನಾರ್ಹವಾಗಿ ಬಲಪಡಿಸಿಕೊಂಡವು. ಭಾರತದ ಪಶ್ಚಿಮ ಆಸ್ಟ್ರೇಲಿಯಾದ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ತಾಂತ್ರಿಕ ಮತ್ತು ಹೆಚ್ಚಿನ ಶಿಕ್ಷಣ ಸಚಿವಾಲಯ (ಖಿಂಈಇ) ಭುವನೇಶ್ವರದಲ್ಲಿರುವ ರಾಷ್ಟ್ರೀಯ ಕೌಶಲ್ಯ ತರಬೇತಿ ಸಂಸ್ಥೆಯಲ್ಲಿ ಗಣಿಗಾರಿಕೆ ಮತ್ತು ಗಣಿಗಾರಿಕೆ ಉಪಕರಣಗಳು, ತಂತ್ರಜ್ಞಾನ ಮತ್ತು ಸೇವೆಗಳಲ್ಲಿ ಶ್ರೇಷ್ಠತೆಯ ಕೇಂದ್ರವನ್ನು ಸ್ಥಾಪಿಸಲು ಒಪ್ಪಂದಕ್ಕೆ ಸಹಿ ಹಾಕಿತು.

ವೃತ್ತಿಪರ ಶಿಕ್ಷಣ ಮತ್ತು ತರಬೇತಿಗಾಗಿ ರಾಷ್ಟ್ರೀಯ ಮಂಡಳಿ ಮತ್ತು ಆಸ್ಟ್ರೇಲಿಯನ್ ಕೌಶಲ್ಯ ಗುಣಮಟ್ಟ ಪ್ರಾಧಿಕಾರ ನಡುವಿನ ಮತ್ತೊಂದು ಪ್ರಮುಖ ಒಪ್ಪಂದವು ವೃತ್ತಿಪರ ಮಾನದಂಡಗಳನ್ನು ಜೋಡಿಸುವ ಮೂಲಕ, ನಿಯಂತ್ರಕ ಚೌಕಟ್ಟುಗಳನ್ನು ಸುಧಾರಿಸುವ ಮೂಲಕ, ಸಾಮರ್ಥ್ಯ ವೃದ್ಧಿಯನ್ನು ಉತ್ತೇಜಿಸುವ ಮೂಲಕ ಮತ್ತು ಸಿಬ್ಬಂದಿ ವಿನಿಮಯ ಮತ್ತು ಜಂಟಿ ಸಂಶೋಧನೆಯನ್ನು ಸುಗಮಗೊಳಿಸುವ ಮೂಲಕ ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣದಲ್ಲಿ ಗುಣಮಟ್ಟದ ಭರವಸೆಯನ್ನು ಬಲಪಡಿಸಲು ಪ್ರಯತ್ನಿಸುತ್ತದೆ.

ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ ಮತ್ತು ಮೆಲ್ಬೋರ್ನ್ ವಿಶ್ವವಿದ್ಯಾಲಯದ ನಡುವಿನ ಒಪ್ಪಂದದ ಮೂಲಕ ವೈಜ್ಞಾನಿಕ ಸಂಶೋಧನಾ ಸಹಕಾರವನ್ನು ಬಲಪಡಿಸಲಾಯಿತು, ಇದು ಔಷಧ ಗುರಿ ಗುರುತಿಸುವಿಕೆ, ಅಧ್ಯಾಪಕರ ವಿನಿಮಯ ಮತ್ತು ತರಬೇತಿ ಕಾರ್ಯಕ್ರಮಗಳಲ್ಲಿ ಸಹಯೋಗದ ಸಂಶೋಧನಾ ಕಾರ್ಯಕ್ರಮಗಳನ್ನು ಕಲ್ಪಿಸುತ್ತದೆ.

CSIR ಮತ್ತು IP ಆಸ್ಟ್ರೇಲಿಯಾ ನಡುವಿನ ಮತ್ತೊಂದು ಒಪ್ಪಂದವು ಆಸ್ಟ್ರೇಲಿಯಾದ ಬೌದ್ಧಿಕ ಆಸ್ತಿ ಪ್ರಾಧಿಕಾರಕ್ಕೆ ಭಾರತದ ಸಾಂಪ್ರದಾಯಿಕ ಜ್ಞಾನ ಡಿಜಿಟಲ್ ಗ್ರಂಥಾಲಯಕ್ಕೆ ಪ್ರವೇಶವನ್ನು ನೀಡುತ್ತದೆ, ಇದು ತಪ್ಪಾದ ಪೇಟೆಂಟ್ ಹಕ್ಕುಗಳ ವಿರುದ್ಧ ಭಾರತದ ಸಾಂಪ್ರದಾಯಿಕ ಜ್ಞಾನದ ರಕ್ಷಣೆಯನ್ನು ಬಲಪಡಿಸಲು ಸಹಾಯ ಮಾಡುತ್ತದೆ.



ಕೋಲ್ಕತ್ತಾದ ಸತ್ಯಜಿತ್ ರೇ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ ಮತ್ತು ಬ್ರಿಸ್ಬೇನ್‌ನ ಗ್ರಿಫಿತ್ ಚಲನಚಿತ್ರ ಶಾಲೆ ನಡುವಿನ ಒಪ್ಪಂದದ ಮೂಲಕ ಸೃಜನಶೀಲ ಕೈಗಾರಿಕೆಗಳನ್ನು ವಿಸ್ತರಿಸುತ್ತಿರುವ ದ್ವಿಪಕ್ಷೀಯ ಪಾಲುದಾರಿಕೆಗೆ ತರಲಾಯಿತು. ಈ ಒಪ್ಪಂದವು ಸಹಯೋಗದ ಶೈಕ್ಷಣಿಕ ಚಟುವಟಿಕೆಗಳು, ಜಂಟಿ ಚಲನಚಿತ್ರ ಯೋಜನೆಗಳು, ಕಾರ್ಯಾಗಾರಗಳು ಮತ್ತು ಸಿನಿಮಾ ಮತ್ತು ಸಂಬಂಧಿತ ವಿಭಾಗಗಳಲ್ಲಿ ಅಲ್ಪಾವಧಿಯ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಒಂದು ಚೌಕಟ್ಟನ್ನು ಒದಗಿಸುತ್ತದೆ.

2020 ರಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಿದ ನಂತರ ಭಾರತ–ಆಸ್ಟ್ರೇಲಿಯಾ ಸಂಬಂಧಗಳ ಗಮನಾರ್ಹ ವಿಸ್ತರಣೆಯನ್ನು ಒಪ್ಪಂದಗಳ ವ್ಯಾಪಕ ಪ್ಯಾಕೇಜ್ ಪ್ರತಿಬಿಂಬಿಸುತ್ತದೆ.

# ಮತ್ತೆ ಮುಖಾಮುಖಿಯಾದ ಅಮೆರಿಕ–ಇರಾನ್: ಮಧ್ಯಪ್ರಾಚ್ಯದಲ್ಲಿ ಸಂಘರ್ಷ, ಇರಾನ್‌ನ 90 ಸ್ಥಳಗಳಲ್ಲಿ ದಾಳಿ

**ಟೆಹ್ರಾನ್/ವಾಷಿಂಗ್ಟನ್, ಜುಲೈ 9:** ಮಧ್ಯಪ್ರಾಚ್ಯದಲ್ಲಿ ಮತ್ತೆ ಸಂಘರ್ಷ ಶುರುವಾಗಿದೆ. ಅಮೇರಿಕಾ ಮತ್ತು ಇರಾನ್ ಮತ್ತೊಮ್ಮೆ ಮುಖಾಮುಖಿಯಾಗಿವೆ. ಕದನ ವಿರಾಮದ ಬಳಿಕವೂ ಹಾರ್ಮೋಜ್ ಜಲಸಂಧಿಯ ಮೇಲಿನ ನಿಯಂತ್ರಣಕ್ಕಾಗಿ ಎರಡು ದೇಶಗಳು ಯುದ್ಧಕ್ಕಿಳಿದಿವೆ. ಕದನ ವಿರಾಮ ಮುರಿದು ಬಿದ್ದಿದೆ ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡಿದ ಬೆನ್ನಲ್ಲೇ ಇರಾನ್‌ನ 90 ಸ್ಥಳಗಳನ್ನು ಗುರಿಯಾಗಿಸಿ ಅಮೇರಿಕಾ ದಾಳಿ ಮಾಡಿದೆ. ಹಾರ್ಮುಝ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳ ಸಂಚಾರ ಹಾಗೂ ವಾಣಿಜ್ಯ ಹಡಗುಗಳ ಸಿಬ್ಬಂದಿಗಳ ಮೇಲೆ ದಾಳಿ ನಡೆಸುವ ಇರಾನ್ನ ಸಾಮರ್ಥ್ಯವನ್ನು ಕುಗ್ಗಿಸುವ ಉದ್ದೇಶದಿಂದ ಅಮೇರಿಕಾ ಬಂದರು ನಗರಗಳಾದ ಬಂದರ್ ಅಬ್ಬಾಸ್, ಸಿರಿಕ್ ಅನ್ನು ಅಮೆರಿಕ ಗುರಿಯಾಗಿಸಿಕೊಂಡು ದಾಳಿ ನಡೆಸಿದೆ. CENTCOM ಬಿಡುಗಡೆ ಮಾಡಿದ ಮಾಹಿತಿ ಪ್ರಕಾರ, ಅಮೆರಿಕ ಪಡೆಗಳು ಇರಾನ್ನ ಸುಮಾರು 90 ಮಿಲಿಟರಿ ನೆಲೆಗಳ ಮೇಲೆ ದಾಳಿ ನಡೆಸಿವೆ. ವಾಯು ರಕ್ಷಣಾ ವ್ಯವಸ್ಥೆಗಳು, ಕರಾವಳಿ ಕಣ್ಗಾವಲು ವ್ಯವಸ್ಥೆಗಳು, ಕ್ಷಿಪಣಿ ಹಾಗೂ ಡ್ರೋನ್ ಸಂಗ್ರಹಣಾ ತಾಣಗಳು, ನೌಕಾಪಡೆಯ ಸಾಮರ್ಥ್ಯಗಳಿಗೆ ಸಂಬಂಧಿಸಿದ ಸೌಲಭ್ಯಗಳು ಮತ್ತು ಇರಾನ್‌ನ ಕರಾವಳಿಯುದ್ದಕ್ಕೂ ಇರುವ ಮಿಲಿಟರಿ ಲಾಜಿಸ್ಟಿಕ್ಸ್ ಮೂಲಸೌಕರ್ಯಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ.




### ಇರಾನ್‌ನ ಬುಶೆಹರ್ ಪರಮಾಣು ವಿದ್ಯುತ್ ಸ್ಥಾವರದ ಪರಿಧಿಯ ಪ್ರದೇಶ ಅಮೆರಿಕ ಕ್ಷಿಪಣಿಯಿಂದ ಧ್ವಂಸ

ಇರಾನ್‌ನ ದಕ್ಷಿಣ ಕರಾವಳಿಯಲ್ಲಿ ವಾಷಿಂಗ್ಟನ್‌ನ ಮಿಲಿಟರಿ ಕಾರ್ಯಾಚರಣೆ ತೀವ್ರಗೊಳ್ಳುತ್ತಿರುವ ಮಧ್ಯೆ, ಗುರುವಾರ ಇರಾನ್‌ನ ಬುಶೆಹರ್ ಪರಮಾಣು ವಿದ್ಯುತ್ ಸ್ಥಾವರದ ಪರಿಧಿಯ ಪ್ರದೇಶವನ್ನು ಅಮೆರಿಕದ ಕ್ಷಿಪಣಿಯಿಂದ ಹೊಡೆದುರುಳಿಸಲಾಗಿದೆ ಎಂದು ಇರಾನ್‌ನ ರಾಜ್ಯ ಮಾಧ್ಯಮಗಳು ತಿಳಿಸಿವೆ. ಬುಶೆಹರ್ ಪ್ರಾಂತ್ಯದ ಉಪ ಗವರ್ನರ್ ಎಹ್ಸಾನ್ ಜಹಂಗಿರಿಯನ್ ಅವರನ್ನು ಉಲ್ಲೇಖಿಸಿ ಇರಾನ್‌ನ ಅಧಿಕೃತ ಐಆರ್‌ಎನ್‌ಎ ಸುದ್ದಿ ಸಂಸ್ಥೆ, ಬುಶೆಹರ್ ಪರಮಾಣು ಸೌಲಭ್ಯ, ಚೋಘದ್ದಕ್ ಮಿಲಿಟರಿ ನೆಲೆ ಮತ್ತು ಕರಾವಳಿ ನಗರವಾದ ಅಸಲುಯೆಹ್‌ನಲ್ಲಿರುವ ಮೀನುಗಾರಿಕಾ ಪಿಯರ್ ಸುತ್ತಮುತ್ತಲಿನ ಪ್ರದೇಶಗಳು ಸೇರಿದಂತೆ ಅಮೆರಿಕದ ಇತ್ತೀಚಿನ ದಾಳಿಯ ಸಮಯದಲ್ಲಿ ಪ್ರಾಂತ್ಯದಾದ್ಯಂತ ಹಲವಾರು ಸ್ಥಳಗಳು ಹಾನಿಗೊಳಗಾಗಿವೆ ಎಂದು ವರದಿ ಮಾಡಿದೆ. ಬುಶೆಹರ್ ಪ್ರಾಂತ್ಯದಲ್ಲಿ ನಡೆದ ದಾಳಿಯಿಂದ ಯಾವುದೇ ಸಾವುನೋವುಗಳು ವರದಿಯಾಗಿಲ್ಲ ಎಂದು ಜಹಂಗಿರಿಯನ್ ಹೇಳಿದ್ದಾರೆ. ಆದಾಗ್ಯೂ, ಎರಡು ದಿನಗಳ ಯುಎಸ್ ಮಿಲಿಟರಿ ಕಾರ್ಯಾಚರಣೆಯಲ್ಲಿ ದಕ್ಷಿಣ ಇರಾನ್‌ನಾದ್ಯಂತ ಕನಿಷ್ಠ 14 ಜನರು ಸಾವನ್ನಪ್ಪಿದ್ದಾರೆ ಎಂದು ಇರಾನ್‌ನ ಆರೋಗ್ಯ ಸಚಿವಾಲಯ ಈ ಹಿಂದೆ ತಿಳಿಸಿದೆ.

**ಅಮೆರಿಕ ದಾಳಿಗೆ ಇರಾನ್ ಪ್ರತಿಕಾರ:** ಅಮೆರಿಕದ ದಾಳಿಗಳ ಬೆನ್ನಲ್ಲೇ ಪ್ರತಿಕಾರದ ಭಾಗವಾಗಿ ಇರಾನ್ ಕುವೈತ್ ಮತ್ತು ಬಹ್ರೇನ್ನಲ್ಲಿರುವ ಅಮೆರಿಕದ ಸೇನಾ ನೆಲೆಗಳನ್ನು ಗುರಿಯಾಗಿಸಿ ಕ್ಷಿಪಣಿ ಹಾಗೂ ಡ್ರೋನ್ ದಾಳಿ ನಡೆಸಿದೆ. ಅಮೆರಿಕ ಇತ್ತೀಚೆಗೆ ಇರಾನ್ ಮೇಲೆ ನಡೆಸಿದ ದಾಳಿಗಳಿಗೆ ಪ್ರತಿಯಾಗಿ, ಮೊದಲ ಹಂತದ ಭಾಗವಾಗಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಐಆರ್‌ಜಿಸಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ. ಈ ಕಾರ್ಯಾಚರಣೆಯಲ್ಲಿ ಕುವೈತ್ನ ಕ್ಯಾಂಪ್ ಅರಿಫ್ಜಾನ್ ಸೇನಾ ನೆಲೆ ಮತ್ತು ಅಲಿ ಅಲ್ ಸಲೇಮ್ ವಾಯುನೆಲೆ, ಬಹ್ರೇನ್ನ ಜುಫೈರ್ ನೌಕಾನೆಲೆ ಹಾಗೂ ಶೇಖ್ ಈಸಾ ವಾಯುನೆಲೆಯನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ.

**ಇರಾನ್ ವಿರುದ್ಧ ಗುಡುಗಿದ ಡೊನಾಲ್ಡ್ ಟ್ರಂಪ್:** ಸಂಘರ್ಷದ ಬಗ್ಗೆ ಮಾತನಾಡಿರುವ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್ ದಾಳಿಗೆ ಅಮೆರಿಕ ಬಲವಾಗಿ ಪ್ರತಿಕ್ರಿಯಿಸುತ್ತದೆ ಅವರು ಪ್ರತಿ ಬಾರಿ ದಾಳಿ ಮಾಡಿದಾಗಲೂ ನಾವು 20 ಬಾರಿ ಬಲವಾಗಿ ಹೊಡೆಯುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ. ಇರಾನ್ ಒಪ್ಪಂದ ಮಾಡಿಕೊಳ್ಳಲು ಪ್ರಯತ್ನಿಸುತ್ತಿದೆ ಅವರು ಸ್ವಲ್ಪ ಸಮಯದ ಹಿಂದೆ ಕರೆ ಮಾಡಿದ್ದರು ಅವರು ಒಪ್ಪಂದ ಮಾಡಿಕೊಳ್ಳಲು ಅರ್ಹರೋ ಅಲ್ಲವೂ ಗೊತ್ತಿಲ್ಲ ಭವಿಷ್ಯದ ಒಪ್ಪಂದ ಗೌರವಿಸುತ್ತಾರೋ ಇಲ್ಲವೋ ಗೊತ್ತಿಲ್ಲ ಪ್ರಾಮಾಣಿಕವಾಗಿ ಹೇಳಬೇಕು ಎಂದರೆ ಅವರು ಹುಚ್ಚರು ಎಂದು ಕುಟುಕಿದ್ದಾರೆ.

**ಟ್ರಂಪ್ ಹೇಳಿಕೆ ನಿರಾಕರಿಸಿದ ಇರಾನ್:** ಕದನ ವಿರಾಮಕ್ಕೆ ಇರಾನ್ ದೂರವಾಣಿ ಕರೆ ಮಾಡಿತ್ತು ಎಂಬ ಹೇಳಿಕೆಯನ್ನು ತಳ್ಳಿ ಹಾಕಿರುವ ಇರಾನ್, ಅಮೆರಿಕದ ಮೇಲೆ ನಾವು ಎಂದಿಗೂ ನಂಬಿಕೆ ಇರಿಸಿಲ್ಲ ಎಂದು ಹೇಳಿದೆ. ಈ ಬಗ್ಗೆ ಮಾತನಾಡಿರುವ ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ, ಅಮೆರಿಕದ ಮೇಲೆ ನಾವು ಎಂದಿಗೂ ನಂಬಿಕೆ ಇರಿಸಿಲ್ಲ ಭರವಸೆಗೆ ಭರವಸೆ ಎನ್ನುವ ತತ್ವದಲ್ಲಿ ಒಪ್ಪಂದವಾಗಿತ್ತು ಏಕಪಕ್ಷೀಯವಾಗಿ ದಾಳಿ ಮಾಡುವ ಮೂಲಕ ಒಪ್ಪಂದ ಉಲ್ಲಂಘಿಸಿದೆ ಅಲ್ಲಾನು ದ್ರೋಹ ಮಾಡುವವರನ್ನು ಇಷ್ಟಪಡುವುದಿಲ್ಲ ಇರಾನ್ ತನ್ನ ಸಾರ್ವಭೌಮತ್ವವನ್ನು ಉಳಿಸಿಕೊಳ್ಳಲು ಶಕ್ತವಾಗಿದೆ ಎಂದು ಗುಡುಗಿದ್ದಾರೆ. ಈ ನಡುವೆ ಅಮೇರಿಕಾದ ದಾಳಿಯಲ್ಲಿ ನಾಲ್ವರು ಮೃತಪಟ್ಟಿದ್ದಾರೆ. ಅಹ್ವಾಜ್ ನಗರದ ಹೊರವಲಯದಲ್ಲಿ ಅಮೇರಿಕಾ ನಡೆಸಿದ ದಾಳಿಯಲ್ಲಿ ಮೂವರು ಸಾವನ್ನಪ್ಪಿ ಹಲವರು ಗಾಯಗೊಂಡಿದ್ದಾರೆ ಎಂದು ಖುಜೆಸ್ತಾನ ಭದ್ರತೆ ಮತ್ತು ಕಾನೂನು ಸುವ್ಯವಸ್ಥೆಯ ಗರ್ವನರ್ ವಲಿಯೋಲ್ಲಾ ಹಯಾತಿ ಹೇಳಿದ್ದಾರೆ. ಇರಾನ್ ಶಾ ವಿಮಾನ ನಿಲ್ದಾಣದಲ್ಲಿ ಅಗ್ನಿಶಾಮಕ ಸಿಬ್ಬಂದಿಯೊಬ್ಬರು ಮೃತಪಟ್ಟಿದ್ದಾರೆ.

**ಕತಾರ್ ವಿಮಾನ ಕೈ ಬಿಟ್ಟ ಡೊನಾಲ್ಡ್ ಟ್ರಂಪ್:** ಮಧ್ಯಪ್ರಾಚ್ಯದಲ್ಲಿ ಸಂಘರ್ಷ ಏರ್ಪಟ್ಟ ಬಳಿಕ ಕತಾರ್ ನೀಡಿದ ವಿಮಾನವನ್ನು ಡೊನಾಲ್ಡ್ ಟ್ರಂಪ್ ಕೈ ಬಿಟ್ಟಿದ್ದಾರೆ. ಟರ್ಕಿಯಲ್ಲಿ ನಡೆದ ನ್ಯಾಟೋ ಶೃಂಗಸಭೆಯಿಂದ ಹೊರಡಲು ಕತಾರ್ ನೀಡಿದ ಬೋಯಿಂಗ್ 747–800 ವಿಮಾನದಲ್ಲಿ ಬಳಕೆ ಮಾಡದೆ ಭದ್ರತಾ ಕಾರಣಗಳಿಂದಾಗಿ ಹಳೆಯ ಏರ್ಫೋರ್ಸ್ ಒನ್ ವಿಮಾನ ಬಳಕೆ ಮಾಡಿದ್ದಾರೆ.

**ಹಾರ್ಮೋಜ್ ಬಳಿ ಭಾರತದ ಒಂಭತ್ತು ಹಡಗುಗಳು:** ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಉದ್ವಿಗ್ನತೆಯ ನಡುವೆಯೂ ಒಂಬತ್ತು ಭಾರತೀಯ ಹಡಗುಗಳು ಇನ್ನೂ ಹಾರ್ಮುಜ್ ಜಲಸಂಧಿಯಲ್ಲಿವೆ. ಒಟ್ಟು 198 ಭಾರತೀಯ ನಾವಿಕರು ಈ ಹಡಗುಗಳಲ್ಲಿದ್ದಾರೆ. ಸರ್ಕಾರದ ಮಾಹಿತಿ ಪ್ರಕಾರ, ಎಲ್ಲಾ ಭಾರತೀಯ ಹಡಗುಗಳು ಸಂಪೂರ್ಣವಾಗಿ ಸುರಕ್ಷಿತವಾಗಿವೆ. ಯಾವುದೇ ಹಡಗಿನ ಮೇಲೆ ದಾಳಿ ನಡೆದಿಲ್ಲ, ಫೆಬ್ರವರಿ 28 ರಂದು ಪಶ್ಚಿಮ ಏಷ್ಯಾ ಸಂಘರ್ಷ ಪ್ರಾರಂಭವಾದಾಗಿನಿಂದ ಭಾರತಕ್ಕೆ ಸರಕು ಸಾಗಿಸುವ 50 ಭಾರತೀಯ ಮತ್ತು ವಿದೇಶಿ ಧ್ವಜ ಹೊಂದಿರುವ ಹಡಗುಗಳು ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತವಾಗಿ ಹಾದುಹೋಗಿವೆ ಎಂದು ಹೇಳಲಾಗಿದೆ.

# ಉಕ್ರೇನ್‌ಗೆ ನ್ಯಾಟೋದ ನಿರಂತರ ಬೆಂಬಲ ಗ್ಯಾರಂಟಿ ಇಲ್ಲ: ಜೆಕ್ ಪ್ರಧಾನಿ ಆಂಡ್ರೆಜ್ ಬಾಬಿಸ್ ಸುಳಿವು


**ಪ್ರೇಗ್, ಜುಲೈ 9 :** ಉಕ್ರೇನ್‌ಗೆ ಮಿಲಿಟರಿ ಬೆಂಬಲವನ್ನು ಮುಂದುವರಿಸುವ ನ್ಯಾಟೋದ ಕಾರ್ಯತಂತ್ರದ ಬಗ್ಗೆ ಜೆಕ್ ಪ್ರಧಾನಿ ಆಂಡ್ರೆಜ್ ಬಾಬಿಸ್ ಅವರು ಸಂಶಯ ವ್ಯಕ್ತಪಡಿಸಿದ್ದಾರೆ, ಅಂಕಾರಾದಲ್ಲಿ ನಡೆದ ಮೈತ್ರಿಕೂಟದ ಶೃಂಗಸಭೆಯಲ್ಲಿನ ಚರ್ಚೆಗಳು ಶಾಂತಿಯನ್ನು ಸಾಧಿಸುವುದಕ್ಕಿಂತ ಶಸ್ತ್ರಾಸ್ತ್ರಗಳ ಮೇಲೆ ಹೆಚ್ಚು ಕೇಂದ್ರೀಕೃತವಾಗಿವೆ ಎಂದು ವಾದಿಸಿದ್ದಾರೆ. ಬುಧವಾರ ಟರ್ಕಿಯೆಯಲ್ಲಿ ನಡೆದ ನ್ಯಾಟೋ ಸಭೆಯ ನಂತರ ಮಾತನಾಡಿದ ಬಾಬಿಸ್, ಪ್ರೇಗ್ ತನ್ನ ಮೈತ್ರಿಕೂಟದ ಬಾಧ್ಯತೆಗಳನ್ನು ಪೂರೈಸುವುದನ್ನು ಮುಂದುವರಿಸುತ್ತದೆಯಾದರೂ, ಕೈವ್‌ಗೆ ಮಿಲಿಟರಿ ನೆರವು ಹೆಚ್ಚಿಸುವುದು ನಾಲ್ಕು ವರ್ಷಗಳ ಸುದೀರ್ಘ ಯುದ್ಧವನ್ನು ಕೊನೆಗೊಳಿಸಲು ಸಹಾಯ ಮಾಡುತ್ತದೆಯೇ ಅಥವಾ ಅದನ್ನು ವಿಸ್ತರಿಸುತ್ತದೆಯೇ ಎಂದು ಅದು ಅನುಮಾನಿಸುತ್ತದೆ ಎಂದು ಹೇಳಿದರು. "ನಾವು ಯುದ್ಧದಲ್ಲಿಲ್ಲ. ಉಕ್ರೇನ್ ಯುದ್ಧದಲ್ಲಿದೆ," ಹೆಚ್ಚುತ್ತಿರುವ ನ್ಯಾಟೋ ರಕ್ಷಣಾ ವೆಚ್ಚವು ರಷ್ಯಾವನ್ನು ಮಾತುಕತೆಗಳಿಗೆ ಒತ್ತಡ ಹೇರುತ್ತದೆಯೇ ಎಂದು ಕೇಳಿದಾಗ ಬಾಬಿಸ್ ವರದಿಗಾರರಿಗೆ ತಿಳಿಸಿದರು. "ನನಗೆ ಗೊತ್ತಿಲ್ಲ, ಸಮಯ ಹೇಳುತ್ತದೆ." ಅಂಕಾರಾ ಶೃಂಗಸಭೆಯಲ್ಲಿ ನ್ಯಾಟೋ ನಾಯಕರು ಮಾಡಿದ ಹಸಿರು ನಿಶಾನೆ ಘೋಷಣೆಯು 2026 ರಲ್ಲಿ ಉಕ್ರೇನ್‌ಗೆ ಮಿಲಿಟರಿ ಉಪಕರಣಗಳು, ತರಬೇತಿ ಮತ್ತು ಸಹಾಯದಲ್ಲಿ 70 ಬಿಲಿಯನ್ ($80 ಬಿಲಿಯನ್) ಮೌಲ್ಯದ ಬದ್ಧತೆಗಳನ್ನು ಎತ್ತಿ ತೋರಿಸಿದೆ, ಮುಂದಿನ ವರ್ಷ ಇದೇ ರೀತಿಯ ಬೆಂಬಲವನ್ನು ನಿರೀಕ್ಷಿಸಲಾಗಿದೆ. ಈ ನಿಧಿಯು ಹೆಚ್ಚಾಗಿ ಈ ಹಿಂದೆ ಘೋಷಿಸಲಾದ ಬದ್ಧತೆಗಳನ್ನು ಒಳಗೊಂಡಿದೆ, ಇದರಲ್ಲಿ ಈ ವರ್ಷದ ಆರಂಭದಲ್ಲಿ ಅನುಮೋದಿಸಲಾದ ಐರೋಪ್ಯ ಒಕ್ಕೂಟದ ಬೆಂಬಲಿತ ಸಾಲ ಕಾರ್ಯವಿಧಾನವೂ ಸೇರಿದೆ.



ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿ ಗುರುವಾರ ನಡೆದ ಆಸ್ಟ್ರೇಲಿಯಾ–ಭಾರತ ಸಿಇಓ ವೇದಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್, ಆಸ್ಟ್ರೇಲಿಯಾದ ಪ್ರಮುಖ ವಿಶ್ವವಿದ್ಯಾಲಯಗಳ ಉಪಕುಲಪತಿಗಳು, ವ್ಯಾಪಾರ ಮುಖಂಡರು ಮತ್ತು ಇತರ ಗಣ್ಯರೊಂದಿಗೆ ಸಮೂಹ ಛಾಯಾಚಿತ್ರದಲ್ಲಿ ಭಾಗಿಯಾದರು.

# ಅಮೆರಿಕದ ನೌಕಾ ದಿಗ್ಬಂಧನವನ್ನು ನವೀಕರಿಸುವ ಬೆದರಿಕೆಗಳ ನಡುವೆಯೂ, ಇರಾನಿನ ಟ್ಯಾಂಕರ್‌ಗಳಿಂದ ಹಾರ್ಮುಜ್ ಜಲಸಂಧಿಯ ಮೂಲಕ ತೈಲ ರವಾನೆಗೆ ವೇಗ

**ಟೆಹ್ರಾನ್, ಜುಲೈ 9:** ಪರ್ಷಿಯನ್ ಕೊಲ್ಲಿಯಲ್ಲಿ ತೀವ್ರಗೊಳ್ಳುತ್ತಿರುವ ದಾಳಿಗಳು ಇರಾನ್ ತನ್ನ ಇರಾನಿನ ಬಂದರುಗಳ ನೌಕಾ ದಿಗ್ಬಂಧನವನ್ನು ನವೀಕರಿಸುವ ಬೆದರಿಕೆಗಳ ನಡುವೆಯೂ, ಹಾರ್ಮುಜ್ ಜಲಸಂಧಿಯ ಮೂಲಕ ರಾತ್ರೋರಾತ್ರಿ ತನ್ನ ತೈಲರಫ್ತುಗಳನ್ನು ನಾಟಕೀಯವಾಗಿ ವೇಗಗೊಳಿಸಲು ಕಾರಣವಾಗಿವೆ. ಕಡಲ ಮೇಲ್ವಿಚಾರಣಾ ಸಂಸ್ಥೆ ಟ್ಯಾಂಕರ್‌ಟ್ರಾಕರ್ಸ್ ಪ್ರಕಾರ, ಇರಾನ್ ಒಂದೇ ರಾತ್ರಿಯಲ್ಲಿ ಸುಮಾರು 10 ದಶಲಕ್ಷ ಬ್ಯಾರಲ್ ಕಚ್ಚಾ ತೈಲ ಮತ್ತು ಇಂಧನವನ್ನು ರಫ್ತು ಮಾಡಿದೆ, ಇದು ಸಾಗಣೆಯಲ್ಲಿ ತೀವ್ರ ಹೆಚ್ಚಳವನ್ನು ಸೂಚಿಸುತ್ತದೆ. ವಿಂಡ್ವರ್ಡ್ ಇಂಟೆಲಿಜೆನ್ಸ್‌ನ ಮಾಹಿತಿಯ ಪ್ರಕಾರ, ಇರಾನ್ ಹಿಂದಿನ ಮೂರು ವಾರಗಳಲ್ಲಿ ಜಲಸಂಧಿಯ ಮೂಲಕ ಸುಮಾರು 60 ದಶಲಕ್ಷ ಬ್ಯಾರಲ್ ತೈಲವನ್ನು ಸಾಗಿಸುವಲ್ಲಿ ಯಶಸ್ವಿಯಾದ ನಂತರ ಈ ಏರಿಕೆ ಕಂಡುಬಂದಿದೆ. ಅದೇ ರೀತಿ, ಭದ್ರತಾ ಪರಿಸ್ಥಿತಿಯ ಬಗ್ಗೆ ಹೆಚ್ಚುತ್ತಿರುವ ಅನಿಶ್ಚಿತತೆಯಿಂದಾಗಿ ಬುಧವಾರ ನೀರಿನ ಕಾರಿಡಾರ್ ಮೂಲಕ ಸಾಗಣೆ ಚಟುವಟಿಕೆ ಮತ್ತೊಮ್ಮೆ ವೇಗವಾಗಿ ಕುಸಿಯಿತು, ಇದು ಅನೇಕ ಟ್ಯಾಂಕರ್ ನಿರ್ವಾಹಕರು ಚಲನೆಯನ್ನು ವಿಳಂಬಗೊಳಿಸಲು ಪ್ರೇರೇಪಿಸಿತು. ಮೆರೈನ್ ಟ್ರಾಫಿಕ್‌ನಿಂದ ಪಡೆದ ಮಾಹಿತಿಯ ಪ್ರಕಾರ, ಬುಧವಾರ ಕೇವಲ 25 ಹಡಗುಗಳು ಜಲಸಂಧಿಯನ್ನು ದಾಟಿದವು, ಹಿಂದಿನ ದಿನ 49 ಹಡಗುಗಳಿದ್ದವು, ಅವುಗಳಲ್ಲಿ ಹೆಚ್ಚಿನವು ಪರ್ಷಿಯನ್ ಕೊಲ್ಲಿಯಿಂದ ಪ್ರವೇಶಿಸುವ ಬದಲು ಹೊರಡುವ ಹಡಗುಗಳನ್ನು ಒಳಗೊಂಡಿವೆ ಎಂದು ವರದಿಯಾಗಿದೆ. ಆದಾಗ್ಯೂ, ಈ ವಾರದ ಆರಂಭದಲ್ಲಿ ಇರಾನಿನ ತೈಲ ರಫ್ತಿನ ಮೇಲೆ ಅಮೆರಿಕ ನಿರ್ಬಂಧಗಳನ್ನು ನವೀಕರಿಸಿದ್ದರೂ, ಚೀನಾದ ಬೇಡಿಕೆಯು ಹೆಚ್ಚಾಗಿ ಪರಿಣಾಮ ಬೀರುವುದಿಲ್ಲ ಎಂದು ತೋರುತ್ತದೆ, ವಿಂಡ್ವರ್ಡ್ ಇಂಟೆಲಿಜೆನ್ಸ್ ವರದಿ ಮಾಡಿರುವ ಪ್ರಕಾರ, ಸಾಂಪ್ರದಾಯಿಕ ಹಡಗು ಜಾಲಗಳ ಹೊರಗೆ ಕಾರ್ಯನಿರ್ವಹಿಸುವ ನೆರಳು ನೌಕಾಪಡೆಗೆ ಸಂಬಂಧಿಸಿದ ಹಡಗುಗಳಲ್ಲಿ ಸುಮಾರು 32.3 ಮಿಲಿಯನ್ ಬ್ಯಾರೆಲ್ ಇರಾನಿನ ಕಚ್ಚಾ ತೈಲವು ಪ್ರಸ್ತುತ ಚೀನಾಕ್ಕೆ ಸಾಗುತ್ತಿದೆ. ಜಲಸಂಧಿಯನ್ನು ಮತ್ತೆ ತೆರೆದ ನಂತರ 65 ಮಿಲಿಯನ್ ಬ್ಯಾರೆಲ್ಗಳಷ್ಟು ತೈಲವನ್ನು ಸಾಗಿಸಿರುವ ಯುಎಇ ಹೊರತುಪಡಿಸಿ, ಇರಾನಿನ ರಫ್ತುಗಳು ಇತರ ಎಲ್ಲಾ ತೈಲ ಉತ್ಪಾದಕರನ್ನು ಮೀರಿಸಿದೆ. ಆಡಳಿತವು ತನ್ನ ಆದಾಯದ 50% ಅನ್ನು ತೈಲ ಮಾರಾಟದಿಂದ ಗಳಿಸುತ್ತದೆ, ಇದು ದೇಶದ ಯುದ್ಧಾನಂತರದ ಆರ್ಥಿಕ ಚೇತರಿಕೆಗೆ ನಿರ್ಣಾಯಕವಾಗಿದೆ.



# ಬ್ರೂಕ್ ಮಿಂಚಿನ ಬ್ಯಾಟಿಂಗ್: ಭಾರತದ ವಿರುದ್ಧ ಇಂಗ್ಲೆಂಡ್‌ಗೆ ಟಿ20ಐ ಸರಣಿ ಗೆಲುವು,ಶ್ರೇಯಸ್ ಪಡೆಯ ಕಳಪೆ ಸಾಧನೆ

**ಬ್ರಿಸ್ಟಲ್, ಜುಲೈ 9:** ಇಂಗ್ಲೆಂಡ್ ನಾಯಕ ಹ್ಯಾರಿ ಬ್ರೂಕ್ ಕೇವಲ 35 ಎಸೆತಗಳಲ್ಲಿ ಅಜೇಯ 79 ರನ್ ಗಳಿಸುವ ಮೂಲಕ ಶ್ರೇಯಸ್ ಅಯ್ಯರ್ ಅವರ ಅಜೇಯ 80 ರನ್‌ಗಳನ್ನು ಹಿಂದಿಕ್ಕಿ ಗುರುವಾರ ಇಲ್ಲಿನ ಕೌಂಟಿ ಮೈದಾನದಲ್ಲಿ ನಡೆದ ನಾಲ್ಕನೇ ಟಿ20ಐನಲ್ಲಿ ಭಾರತದ ವಿರುದ್ಧ ಒಂಬತ್ತು ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದರು ಮತ್ತು ಆತಿಥೇಯರು ಪ್ರವಾಸಿ ತಂಡದ ವಿರುದ್ಧ ಐತಿಹಾಸಿಕ 3–0 ಟಿ20ಐ ಸರಣಿ ಜಯ ಸಾಧಿಸಿದರು. ಭಾರತದ ವಿರುದ್ಧ ಇಂಗ್ಲೆಂಡ್ ಐತಿಹಾಸಿಕ ದ್ವಿಪಕ್ಷೀಯ ಟಿ20ಐ ಸರಣಿಯ ಯಶಸ್ಸನ್ನು ಆಚರಿಸಿತು. 225.71 ಸ್ಟ್ರೈಕ್ ರೇಟ್‌ನಲ್ಲಿ ಎಂಟು ಬೌಂಡರಿಗಳು ಮತ್ತು ನಾಲ್ಕು ಸಿಕ್ಸರ್‌ಗಳೊಂದಿಗೆ ಬ್ರೂಕ್ ಅವರ ಅದ್ಭುತ ಇನ್ನಿಂಗ್ಸ್, 159 ರನ್‌ಗಳ ಸ್ಪರ್ಧಾತ್ಮಕ ಬೆನ್ನಟ್ಟುವಿಕೆಯನ್ನು ಏಕಪಕ್ಷೀಯ ವ್ಯವಹಾರವಾಗಿ ಪರಿವರ್ತಿಸಿತು, ಇಂಗ್ಲೆಂಡ್ ಕೇವಲ 13.5 ಓವರ್‌ಗಳಲ್ಲಿ ಒಂದು ವಿಕೆಟ್‌ಗೆ 159 ರನ್ ಗಳಿಸಿತು. ಯೆರ್ 49 ಎಸೆತಗಳಲ್ಲಿ ನಾಲ್ಕು ಬೌಂಡರಿಗಳು ಮತ್ತು ಐದು ಸಿಕ್ಸರ್‌ಗಳೊಂದಿಗೆ 80 ರನ್ ಗಳಿಸಿ ಅಜೇಯರಾಗಿ ಉಳಿದರು, ಭಾರತವು ಏಳು ವಿಕೆಟ್‌ಗಳಿಗೆ 158 ರನ್‌ಗಳಿಗೆ ಮುಕ್ತಾಯಗೊಳಿಸಿತು. ಆರ್ಚರ್ 20 ರನ್ನಿಗೆ 2 ವಿಕೆಟ್ ಪಡೆದು ಅದ್ಭುತ ಪ್ರದರ್ಶನ ನೀಡಿದರು, ಆದರೆ ಟಂಗ್ ಕೂಡ ಎರಡು ವಿಕೆಟ್ ಪಡೆದರು. ಇಂಗ್ಲೆಂಡ್‌ನ ಶಿಸ್ತುಬದ್ಧ ಬೌಲಿಂಗ್‌ನಿಂದ ಪ್ರವಾಸಿ ತಂಡವು ಮೂರು ವಿಕೆಟ್‌ಗೆ 48 ರನ್‌ಗಳಿಗೆ ತತ್ತರಿಸಿದಾಗ ಅಯ್ಯರ್ ಏಕಾಂಗಿಯಾಗಿ ಭಾರತವನ್ನು ಅನಿಶ್ಚಿತ ಸ್ಥಿತಿಯಿಂದ ರಕ್ಷಿಸಿದರು. ಈ ಫಲಿತಾಂಶವು ಎಲ್ಲಾ ಸ್ವರೂಪಗಳ ದ್ವಿಪಕ್ಷೀಯ ಸ್ಪರ್ಧೆಗಳಲ್ಲಿ ಇಂಗ್ಲೆಂಡ್‌ನ ಮೇಲೆ ಭಾರತದ ದೀರ್ಘ ಪ್ರಾಬಲ್ಯವನ್ನು ಕೊನೆಗೊಳಿಸಿತು.




ಇಂಗ್ಲೆಂಡ್ ವಿರುದ್ಧದ ಅವರ ಹಿಂದಿನ ದ್ವಿಪಕ್ಷೀಯ ಸರಣಿ ಸೋಲುಗಳು 2018 ರ ಪ್ರವಾಸದಲ್ಲಿ ಬಂದವು, ಆಗ ಅವರು ಔಆಖ ಸರಣಿಯನ್ನು 2–1 ಮತ್ತು ಟೆಸ್ಟ್ ಸರಣಿಯನ್ನು 4–1 ಅಂತರದಲ್ಲಿ ಸೋತರು. ಅಂದಿನಿಂದ, ಭಾರತವು ಇಂಗ್ಲೆಂಡ್ ವಿರುದ್ಧದ ಹಿಂದಿನ 10 ದ್ವಿಪಕ್ಷೀಯ ಸರಣಿಗಳಲ್ಲಿ ಎಂಟು ಗೆದ್ದಿತ್ತು, ಆದರೆ ಇಂಗ್ಲೆಂಡ್‌ನಲ್ಲಿ ಉಳಿದ ಎರಡು ಟೆಸ್ಟ್ ಸರಣಿಗಳು 2–2 ಡ್ರಾದಲ್ಲಿ ಕೊನೆಗೊಂಡಿದ್ದವು.